ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು , ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 152
28–11–2025 ಶುಕ್ರವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 152

## ಕಾಲೇಜಿನ ಘಟಿಕೋತ್ಸವ, ಚಿಗುರು–2025 ಇಂದು

**ದಾವಣಗೆರೆ:** ಮಂಗಳ ಜ್ಯೋತಿ ವಿದ್ಯಾಸಂಸ್ಥೆಯ ಜೆ.ಹೆಚ್. ಪಟೇಲ್ ಇನ್ಸಿಟ್ಯೂಟ್ ಆಫ್ ಮ್ಯಾನೇಜೆಂಟ್ ಅಂಡ್ ಟೆಕ್ನಾಲಜಿ ಕಾಲೇಜಿನ ಘಟಿಕೋತ್ಸವ, ಕನ್ನಡ ರಾಜ್ಯೋತ್ಸವ, ಪದವಿ ಪ್ರದಾನ ಕಾರ್ಯಕ್ರಮ ಹಾಗೂ ಚಿಗುರು–2025 ಕಾರ್ಯಕ್ರಮವು ನ. 28ರ ಇಂದು ಬೆಳಗ್ಗೆ 10 ಗಂಟೆಗೆ ನಗರದ ಕುವೆಂಪು ಕನ್ನಡ ಭವನದಲ್ಲಿ ನಡೆಯಲಿದೆ.

ಶ್ರೀ ತರಳಬಾಳು ಜಗದ್ಗುರು ವಸತಿ ಶಾಲೆ,ಅನುಭವ ಮಂಟಪದ ನಿವೃತ್ತ ಪ್ರಾಚಾರ್ಯ ಮತ್ತು ಆಡಳಿತಾಧಿಕಾರಿ ಡಾ. ಹೆಚ್ ಮಲ್ಲಿಕಾರ್ಜುನಪ್ಪ ಕಾರ್ಯಕ್ರಮ ಉದ್ಘಾಟಿಸಲಿದ್ದು, ದೂಡಾ ಅಧ್ಯಕ್ಷ ದಿನೇಶ್ ಕೆ. ಶೆಟ್ಟಿ ಪದವಿ ಪ್ರದಾನ ಮಾಡಲಿದ್ದಾರೆ. ಮಂಗಳಜ್ಯೋತಿ ವಿದ್ಯಾಸಂಸ್ಥೆ ಅಧ್ಯಕ್ಷತರಾದ ಷಹನಾಜ್ ಬೀ ಅಧ್ಯಕ್ಷತೆ ವಹಿಸಲಿದ್ದು, ಅತಿಥಿಗಳಾಗಿ ಎಪಿಎಂಸಿ ಮಾಜಿ ಅಧ್ಯಕ್ಷ ಮುದ್ದೆಗೌಡ್ರು ಗಿರೀಶ್, ಪ್ರಾಂಶುಪಾಲ ಮುಸ್ತಾಫ ಪಾಲ್ಗೊಳ್ಳಲಿದ್ದಾರೆ.

## ಇಂದು ಶಿವಾನುಭವ ಸಂಪದ ಮತ್ತು ಕಾರ್ತಿಕೋತ್ಸವ

**ದಾವಣಗೆರೆ:** ಹಾಲಕೆರೆ ಶ್ರೀ ಅನ್ನದಾನೇಶ್ವರ ಸಾರ್ವಜನಿಕ ಸೇವಾ ನ್ಯಾಸ ಟ್ರಸ್ಟ್ ವತಿಯಿಂದ 286 ನೇ ಶಿವಾನುಭವ ಸಂಪದ ಮತ್ತು ಕಾರ್ತಿಕೋತ್ಸವ ಕಾರ್ಯಕ್ರಮವನ್ನು ನ.28ರ ಇಂದು ಸಂಜೆ 6:30ಕ್ಕೆ ಇಲ್ಲಿನ ದೇವರಾಜ ಅರಸು ಬಡಾವಣೆಯ ಶ್ರೀ ಅನ್ನದಾನೇಶ್ವರ ಶಾಖಾಮಠದಲ್ಲಿ ಹಮ್ಮಿಕೊಳ್ಳಲಾಗಿದೆ.

ಹಾಲಕೆರೆ ಶ್ರೀ ಅನ್ನದಾನೇಶ್ವರ ಸಂಸ್ಥಾನ ಮಠದ ಶ್ರೀ ಮುಪ್ಪಿನ ಬಸವಲಿಂಗ ಮಹಾ ಸ್ವಾಮೀಜಿ ದಿವ್ಯ ಸಾನಿಧ್ಯದಲ್ಲಿ ಮತ್ತು ಆವರಗೊಳ್ಳ ಪುರವರ್ಗ ಮಠದ ಶ್ರೀ ಓಂಕಾರ ಶಿವಾಚಾರ್ಯ ಸ್ವಾಮೀಜಿಗಳವರ ಸಾನಿಧ್ಯದಲ್ಲಿ ಜರುಗುವ ಕಾರ್ಯಕ್ರಮದಲ್ಲಿ ಶ್ರೀ ಸಿದ್ಧಗಂಗಾ ಸಂಸ್ಥೆಯ ನಿರ್ದೇಶಕ ಡಾ..ಡಿ. ಎಸ್ ಜಯಂತ್ ಉಪನ್ಯಾಸ ನೀಡಲಿದ್ದು, ಜನತಾ ಬಜಾರ್ ನ ಅಧ್ಯಕ್ಷ ವಿ. ಮಂಜುನಾಥ್ ಅವರಿಗೆ ಸನ್ಮಾನಿಸಲಾಗುತ್ತದೆ. ಟ್ರಸ್ಟ್ ಅಧ್ಯಕ್ಷ ಎಸ್. ಅಥಣಿ ವೀರಣ್ಣ ಅಧ್ಯಕ್ಷತೆ ವಹಿಸಲಿದ್ದಾರೆ. ಹಿರಿಯ ಪತ್ರಕರ್ತ ವೀರಪ್ಪ ಎಂ. ಬಾವಿ ಅವರ ಮೊದಲ ವರ್ಷದ ಸ್ಮರಣಾರ್ಥವಾಗಿ ಅವರ ಕುಟುಂಬ ವರ್ಗದವರಿಂದ ಭಕ್ತಿ ಸೇವೆ ಸಮರ್ಪಣೆ ಆಗಲಿದೆ. ಟಿ ಹೆಚ್ ಎಂ ಶಿವಕುಮಾರಸ್ವಾಮಿ ಸಂಗೀತ ಸೇವೆ ನೀಡಲಿದ್ದಾರೆ.

## ಡಿ.2ರಂದು ಆವರಗೊಳ್ಳದ ಶ್ರೀ ವೀರಭದ್ರೇಶ್ವರ ಕಡೇ ಕಾರ್ತಿಕೊತ್ಸವ

**ದಾವಣಗೆರೆ:** ಆವರಗೊಳ್ಳ ಗ್ರಾಮದ ಶ್ರೀ ವೀರಭದ್ರೇಶ್ವರ ಸ್ವಾಮಿಯ ಕಡೇ ಕಾರ್ತಿಕೊತ್ಸವವು ಡಿ.2 ರಂದು ಜರುಗಲಿದೆ.

ಅಂದು ಬೆಳಿಗ್ಗೆ ಬ್ರಾಹ್ಮೀ ಮುಹೂರ್ತದಲ್ಲಿ ಶ್ರೀ ವೀರಭದ್ರೇಶ್ವರ ಸ್ವಾಮಿ, ಆದಿ ದೈವ ಕನೇಶ್ವರ ಸ್ವಾಮಿ ಜಗದ್ಗುರು ರೇಣುಕಾಚಾರ್ಯ (ವಿಷಮರ್ದನ ಸಂಜೀವಿನಿ ಗದ್ದಿಗೆ )ಗಳಿಗೆ ರುದ್ರಾಭಿಷೇಕಾ ಮಹಾಪೂಜೆ ಹಾಗೂ ಗ್ರಾಮದಲ್ಲಿ ಎಲ್ಲ ದೇವರುಗಳಿಗೂ ಪೂಜೆ ನಡೆಸಿ, ನಂತರ ದೊಡ್ಡಬಾತಿಯಿಂದ ಆಗಮಿಸುವ ಶ್ರೀ ರೇವಣಸಿದ್ದೇಶ್ವರ, ಶ್ರೀ ಬೀರಲಿಂಗೇಶ್ವರ ದೇವರುಗಳನ್ನು ಶ್ರೀ ವೀರಭದ್ರೇಶ್ವರ ಸ್ವಾಮಿಯೊಂದಿಗೆ ಬಾಜಾ, ಭಜಂತ್ರಿ, ಡೊಳ್ಳು, ಸಮಾಳದೊಂದಿಗೆ ವೈಭವದಿಂದ ಎದುರುಗೊಂಡು ದೇವಸ್ಥಾನಕ್ಕೆ ಕರೆತಂದು ಧಾರ್ಮಿಕಕಾರ್ಯಗಳಿಗೆ ಚಾಲನೆ ನೀಡುವುದು.

ನಂತರ ರಾತ್ರಿ ಸ್ವಾಮಿಯ ಇಚ್ಛಿತ ಮೂಹೂರ್ತ ಶ್ರೀ ವೀರಭದ್ರೇಶ್ವರ, ಶ್ರೀ ರೇವಣಸಿದ್ದೇಶ್ವರ ಹಾಗೂ ಬೀರಲಿಂಗೇಶ್ವರ ಪಾಲಿಕೆ ಉತ್ಸವವು ದೇವಸ್ಥಾನದಿಂದ ನಂದಿ ಜನಪ್ಪನ ಕಟ್ಟೆಯವರಿಗೂ ಕಳಸ, ಡೊಳ್ಳು, ಸಮಾಳ ವಾದ್ಯಗಳು ಮೇಳದೊಂದಿಗೆ ಸಾಗಿ ಅಲ್ಲಿ ಕಡೇ ಕಾರ್ತಿಕೊತ್ಸವ ಸಮಾರೋಪವು ಕದಳಿ ಮಂಟಪ ಪೂಜೆ ನಡೆದು ಭಕ್ತರಿಗೆ ಫಳಾರದ ಪ್ರಸಾದ ಹಂಚಲಾಗುತ್ತದೆ. ಬುಧವಾರ ಬೆಳಗ್ಗೆ ಬೇಡಿಕೊಂಡ ಭಕ್ತರ ಗುಗ್ಗಳ ಸೇವೆಯೊಂದಿಗೆ ಅಲ್ಲಿಂದ ಹೊರಟು ದೇವಸ್ಥಾನಕ್ಕೆ ಆಗಮಿಸಿ ಕಾರ್ಯಕ್ರಮ ಸಂಪನ್ನಗೊಳುವುದೆಂದು ದೇವಸ್ಥಾನ ಸೇವಾ ಸಂಘದ ಅಧ್ಯಕ್ಷ ಬಿ. ಎಂ ಷಣ್ಮುಖಯ್ಯ ತಿಳಿಸಿದ್ದಾರೆ.

## ಚಲಿಸುವ ರೈಲಿಗೆ ತಲೆ ಕೊಟ್ಟು ಯುವಕ ಆತ್ಮಹತ್ಯೆ

**ದಾವಣಗೆರೆ.ನ.27:** ಯುವಕನೊಬ್ಬ ಚಲಿಸುವ ರೈಲಿಗೆ ತಲೆ ಕೊಟ್ಟು ಆತ್ಮಹತ್ಯೆ ಮಾಡಿಕೊಂಡ ಘಟನೆ ಗುರುವಾರ ಬೆಳ್ಳಂಬೆಳಗ್ಗೆ ನಗರದ ಎಪಿಎಂಸಿ ಸಮೀಪದ ರೈಲ್ವೆ ಅಂಡರ್ ಅಸ್ ಬಳಿ ನಡೆದಿದೆ.

ನಗರ ಸಮೀಪದ ಹಳೇ ಚಿಕ್ಕನಹಳ್ಳಿಯಲ್ಲಿನ ಹರಳಯ್ಯ ನಗರದ ತರುಣ್ (16) ಆತ್ಮಹತ್ಯೆ ಮಾಡಿಕೊಂಡ ಯುವಕ ಎಂದು ತಿಳಿದು ಬಂದಿದೆ.

ಬೆಂಗಳೂರಿನಿಂದ ಹುಬ್ಬಳ್ಳಿಗೆ ಚಲಿಸುವ ರೈಲಿಗೆ ಬೆಳಗಿನ ಜಾವ ಬಿದ್ದಿದ್ದು, ಯುವಕನ ದೇಹ ಒಂದು ಕಡೆ, ಶಿರ ಒಂದು ಕಡೆ ಬಿದ್ದಿದೆ. ಶಿರ ಹಳಿಯ ಆಚೆ ಬಿದ್ದಿದ್ದರೆ, ದೇಹ ಹಳಿಯ ಮಧ್ಯದಲ್ಲಿ ಬಿದ್ದಿದ್ದು, ಈ ದೃಶ್ಯ ಎದೆಯನ್ನೇ ನಡುಗಿಸುತ್ತಿದೆ. ಯುವಕ ಚಲಿಸುವ ರೈಲಿಗೆ ತಲೆ ಕೊಟ್ಟು ಆತ್ಮಹತ್ಯೆ ಮಾಡಿಕೊಳ್ಳಲು ಕಾರಣ ತಿಳಿದು ಬಂದಿಲ್ಲ. ಘಟನಾ ಸ್ಥಳಕ್ಕೆ ರೈಲ್ವೆ ಪೊಲೀಸರು ಭೇಟಿ ನೀಡಿ ಮೃತದೇಹವನ್ನು ಶವಾಗಾರಕ್ಕೆ ರವಾನಿಸಿದ್ದಾರೆ.


ಈ ಘಟನೆ ಕುರಿತು ರೈಲ್ವೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ವಿಶೇಷ ಮಕ್ಕಳ ವೈದ್ಯಕೀಯ ಶಿಬಿರ–ನವಂಬರ್ 29ಕ್ಕೆ

**ಗದಗ:** ಗದಗ ಶಹರ ವಲಯದ ಸರ್ಕಾರಿ/ಅನುದಾನಿತ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಲ್ಲಿ 1 ರಿಂದ 12ನೇ ತರಗತಿಯವರೆಗೆ ವ್ಯಾಸಂಗ ಮಾಡುತ್ತಿರುವ ವಿಶೇಷ ಅಗತ್ಯತೆವುಳ್ಳ ಮಕ್ಕಳಿಗೆ ಎಸ್.ಎಸ್.ಎ. ಹಾಗೂ ಆರ್. ಎಮ್.ಎಸ್.ಎ ಯೋಜನೆಯಡಿಯಲ್ಲಿ 2025–26ನೇ ಸಾಲಿನಲ್ಲಿ ಉಚಿತ ವೈದ್ಯಕೀಯ ಮೌಲ್ಯಾಂಕನ ಶಿಬಿರವನ್ನು ನವಂಬರ್ 29 ರಂದು ಮುಂಜಾನೆ 10 ಗಂಟೆಯಿಂದ ಸಾಯಂಕಾಲ 4 ರವರೆಗೆ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಶಾಲೆ ನಂಬರ್ 10 ಗದಗ ಡಿಸಿಮಿಲ್ ರೋಡ, ಹಳೇ ಕೋರ್ಟ್ ಹಿಂಭಾಗದಲ್ಲಿ ಆಯೋಜನೆ ಮಾಡಲಾಗಿದೆ, ಮೌಲ್ಯಾಂಕನ ಶಿಬಿರಕ್ಕೆ ದಾಖಲೆಗಳೊಂದಿಗೆ ಮಕ್ಕಳನ್ನು ಹಾಜರು ಪಡಿಸಬೇಂದು ಉಪನಿರ್ದೇಶಕ ಹಾಗೂ ಜಿಲ್ಲಾ ಯೋಜನಾ ಸಮನ್ವಯಾಧಿಕಾರಿಗಳು, ಸಮಗ್ರ ಶಿಕ್ಷಣ ಇಲಾಖೆ ಇವರು ತಿಳಿಸಿರುತ್ತಾರೆ.

### ಪಟ್ಟಕ್ಕಾಗಿ ಫೈಟ್

# ಡಿಕೆಶಿ ಅಸ್ತ್ರಕ್ಕೆ ಸಿದ್ದರಾಮಯ್ಯ ಬಣದಿಂದ 'ಅಹಿಂದ' ಬ್ರಹ್ಮಾಸ್ತ್ರ



**ಬೆಂಗಳೂರು :** ಸಿಎಂ ಸ್ಥಾನದ ವಿಚಾರವಾಗಿ ಹಾಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಡಿಸಿಎಂ ಡಿ.ಕೆ. ಶಿವಕುಮಾರ್ ನಡುವೆ ತಿಕ್ಕಾಟ ತಾರಕಕ್ಕೇರಿದೆ. ಈ ನಡುವೆ ಒಕ್ಕಲಿಗ ಸ್ವಾಮೀಜಿಗಳು ಡಿಕೆಶಿ ಪರ ಅಖಾಡಕ್ಕಿಳಿದಿದ್ದರೆ, ಇತ್ತ ಸಿದ್ದರಾಮಯ್ಯ ಪರ ಕುರುಬ ಮಠದ ಸ್ವಾಮೀಜಿಗಳೂ ಬೆಂಬಲಕ್ಕೆ ನಿಂತಿದ್ದಾರೆ. ಅದರ ಜೊತೆಗೆ ಸಿದ್ದರಾಮಯ್ಯ ಪರ ಇರುವ ಅಹಿಂದ ಸಮುದಾಯ ತನ್ನ ಶಕ್ತಿ ಪ್ರದರ್ಶನಕ್ಕೆ ಮುಂದಾಗಿರೋದು ಸದ್ಯದ ಬೆಳವಣಿಗೆಗೆ ಹೊಸ ಟ್ವಿಸ್ಟ್ ಕೊಡುವ ಸಾಧ್ಯತೆ ಇದೆ.

ಶೋಷಿತ ವರ್ಗಗಳು, ಅಲ್ಪಸಂಖ್ಯಾತರು, ಹಿಂದುಳಿದವರು, ದಲಿತರು ಹೀಗೆ ಅಹಿಂದ ಅನ್ನೋ ಈ ಶಕ್ತಿಯೇ ಸಿದ್ದರಾಮಯ್ಯ ಸಂಕಷ್ಟದಲ್ಲಿ ಸಿಲುಕಿದಾಗಲೆಲ್ಲ ಬೆನ್ನಿಗೆ ನಿಂತಿದೆ. ಅಹಿಂದ ನಾಯಕರಿಂದ ಕ್ಷೇತ್ರವಾರು ಅಹಿಂದ ಮತಗಳ ವರದಿ ತಯಾರಿಸಲಾಗಿದ್ದು, ಒಂದು ವೇಳೆ ಸಿದ್ದರಾಮಯ್ಯರ ಸ್ಥಾನಕ್ಕೆ ಚ್ಯುತಿ ತಂದರೆ ಅಹಿಂದ ವರ್ಗಗಳು ಕೈಕೊಡಬಹುದು ಎಂಬ ಸಂದೇಶ ರವಾನಿಸಲು ಸಿದ್ಧತೆ ನಡೆದಿದೆ ಎನ್ನಲಾಗಿದೆ. 224 ಕ್ಷೇತ್ರಗಳ ಪೈಕಿ 19 ಕ್ಷೇತ್ರಗಳಲ್ಲಿ ಶೇ.80ರಷ್ಟು ಅಹಿಂದ ಮತಗಳಿವೆ. 42 ಕ್ಷೇತ್ರಗಳಲ್ಲಿ ಶೇ. 80ರಷ್ಟು ಅಹಿಂದ ಮತಗಳು ನಿರ್ಣಾಯಕ ಪಾತ್ರಬಹಿಸಲಿದ್ದು, 83ಕ್ಕೂ ಹೆಚ್ಚು ಕ್ಷೇತ್ರಗಳಲ್ಲಿ ಶೇ. 70ರಷ್ಟು ಅಹಿಂದ ವೋಟರ್ಸ್ ಇದ್ದಾರೆ. ಹಾಗೆಯೇ 49 ಕ್ಷೇತ್ರಗಳಲ್ಲಿ ಶೇ.60 ಕ್ಕಿಂತ ಹೆಚ್ಚು, 22 ಕ್ಷೇತ್ರಗಳಲ್ಲಿ ಶೇ.50 ಕ್ಕಿಂತ ಹೆಚ್ಚು ದಲಿತ, ಅಲ್ಪಸಂಖ್ಯಾತ ಮತಗಳಿವೆ ಎಂದು ವರದಿ ಹೇಳ್ತಿದೆ. 5 ಕ್ಷೇತ್ರಗಳಲ್ಲಿ ಶೇ.90ಕ್ಕೂ ಹೆಚ್ಚು ಇವರೇ ವೋಟರ್ಸ್ ಇದ್ದಾರೆ ಎಂದೂ ವರದಿಯಲ್ಲಿ ಉಲ್ಲೇಖಿಸಲಾಗಿದೆ.

2023ರ ಚುನಾವಣೆಗೂ ಮುನ್ನ ಸಿದ್ದರಾಮಯ್ಯರ ಶಕ್ತಿ ಎಂತಹದ್ದು ಎನ್ನುವುದು ಹೈಕಮಾಂಡ್ ಗಮನಕ್ಕೂ ಬಂದಿತ್ತು. ಸಿದ್ದರಾಮಯ್ಯ ಅವರ 75ನೇ ಹುಟ್ಟುಹಬ್ಬದ ನೆಪ ಮಾಡಕೊಂಡು ದಾವಣಗೆರೆಯಲ್ಲಿ ಬೃಹತ್ ಶಕ್ತಿ ಪ್ರದರ್ಶನ ನಡೆದಿತ್ತು. ಅಂದು ಸಿದ್ದರಾಮಯ್ಯ ಬೆನ್ನಿಗೆ ನಿಂತಿದ್ದ ಅಹಿಂದ ನಾಯಕರನ್ನು ಕಂಡು ಸ್ವತಃ ರಾಹುಲ್ ಗಾಂಧಿಯೇ ಆಶ್ಚರ್ಯ ಪಟ್ಟಿದ್ದರು. ಅಲ್ಲದೆ ಚುನಾವಣೆ ಗೆಲುವಿನಲ್ಲಿಯೂ ಅಹಿಂದ ವರ್ಗದ ಕೊಡುಗೆ ಇದೆ ಎಂದು ಮನಗಂಡೇ ಸಿದ್ದರಾಮಯ್ಯ ಅವರನ್ನೇ ಸಿಎಂ ಆಗಿ ಹೈಕಮಾಂಡ್ ಆಯ್ಕೆ ಮಾಡಿತ್ತು. ಅಂದಿನಿಂದ ಇಂದಿನವರೆಗೂ ಅಹಿಂದ ಸಮುದಾಯ ಸಿದ್ದರಾಮಯ್ಯ ಅವರ ಬೆನ್ನಿಗೆ ನಿಂತಿದೆ. ಇದಕ್ಕೆ ಇಂಬು ಕೊಡುವಂತೆ ಸಿದ್ದರಾಮಯ್ಯ ಪರ ಒಗ್ಗಟ್ಟು ಪ್ರದರ್ಶನವನ್ನೂ ಅಹಿಂದ ಸಚಿವರು ಮಾಡಿದ್ದಾರೆ. ಇಂದು ಸಿಎಂ ಕಾವೇರಿ ನಿವಾಸದಲ್ಲಿ ಸತೀಶ್ ಜಾರಕಿಹೊಳಿ, ಪರಮೇಶ್ವರ್, ಮಹದೇವಪ್ಪ, ವೆಂಕಟೇಶ್, ರಾಜಣ್ಣ ಮತ್ತು ಕೆ.ಜೆ.ಜಾರ್ಜ್ ಸೇರಿದಂತೆ ಸಿಎಂ ಆಪ್ತ ಸಚಿವರು ಸಭೆ ನಡೆಸಿದ್ದಾರೆ. ಈ ಸಭೆಯಲ್ಲಿ ಯಾವುದೇ ಕಾರಣಕ್ಕೂ ಅಧಿಕಾರ ಬಿಟ್ಟು ಕೊಡಬೇಡಿ, ಅಹಿಂದ ಅಸ್ತ್ರದ ಮೂಲಕವೇ ಹೈಕಮಾಂಡ್ ಮೇಲೆ ಒತ್ತಡ ಹೇರೋಣ. ಅಹಿಂದರ ಬಿಟ್ಟರೆ ಕಾಂಗ್ರೆಸ್‌ಗೆ ರಾಜ್ಯದಲ್ಲಿ ಭವಿಷ್ಯವಿಲ್ಲ ಎಂಬುದನ್ನು ವರಿಷ್ಠರಿಗೆ ಮನವರಿಕೆ ಮಾಡೋಣ ಎಂದು ಸಿದ್ದರಾಮಯ್ಯ ಅವರಿಗೆ ಸಚಿವರು ತಿಳಿಸಿದ್ದಾರೆ ಎನ್ನಲಾಗಿದೆ.

# ಕೊಟ್ಟ ಮಾತು ಉಳಿಸಿಕೊಳ್ಳುವುದು ದೊಡ್ಡ ಶಕ್ತಿ

### ಕುತೂಹಲ ಮೂಡಿಸಿದ ಡಿಕೆಶಿ ಪೋಸ್ಟ್



**ಬೆಂಗಳೂರು:** ರಾಜ್ಯ ಕಾಂಗ್ರೆಸ್ ನಲ್ಲಿ ಸಿಎಂ ಪಟ್ಟಕ್ಕಾಗಿ ಫೈಟ್ ತೀವ್ರ ಸ್ವರೂಪ ಪಡೆದುಕೊಂಡಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರ ಕುರ್ಚಿ ಕಾಳಗ ಈಗ ಪೋಸ್ಟ್ ವಾರ್ ತನಕ ತಲುಪಿದೆ.

ಕೊಟ್ಟ ಮಾತು ಉಳಿಸಿಕೊಳ್ಳುವುದೇ ಜಗತ್ತಿನ ಶಕ್ತಿ. ನ್ಯಾಯಾಧೀಶರಾಗಲಿ, ರಾಷ್ಟ್ರಪತಿಯಾಗಲಿ, ನಾನಾಗಲಿ, ಕೊಟ್ಟ ಮಾತಿಗೆ ತಕ್ಕಂತೆ ನಡೆಯಬೇಕೆಂದು ಎಂದು ಬುಧವಾರ ಡಿಕೆ ಶಿವಕುಮಾರ್ ಅವರು ಪೋಸ್ಟ್ ಹಾಕುವ ಮೂಲಕ ಸಿದ್ದರಾಮಯ್ಯ ಅವರಿಗೆ ಟಾಂಗ್ ನೀಡಿದ್ದರು.

ರಾಜ್ಯದ ಜನತೆಗೆ ನಾವು ಕೊಟ್ಟ ಮಾತು ಕೇವಲ ಘೋಷಣೆ ಅಲ್ಲ, ನಾವು ಜನತೆಗೆ ಕೊಟ್ಟ ಮಾತೇ ನಮಗೆ ಜಗತ್ತು ಎಂದು ಸಿಎಂ ಸಿದ್ದರಾಮಯ್ಯ ತಮ್ಮ ಎಕ್ಸ್ ಖಾತೆಯಲ್ಲಿ ಪೋಸ್ಟ್ ಮಾಡುವ ಮೂಲಕ ಡಿಕೆ ಶಿವಕುಮಾರ್ ಅವರಿಗೆ ತಿರುಗೇಟು ನೀಡಿದ್ದಾರೆ. ಮಾತು ಎಂದರೆ ಶಕ್ತಿ ಅಲ್ಲ, ಅದು ಜನರ ಹಿತಕ್ಕಾಗಿ ಲೋಕವನ್ನು ಉತ್ತಮಗೊಳಿಸಿದಾಗ ಮಾತ್ರ ಶಕ್ತಿಯಾಗುತ್ತದೆ. ನಮ್ಮ ರಾಜ್ಯದ ಮಹಿಳೆಯರಿಗೆ 600 ಕೋಟಿಗೂ ಹೆಚ್ಚು ಉಚಿತ ಪ್ರಯಾಣಗಳನ್ನು ನೀಡಿದ ಶಕ್ತಿ ಯೋಜನೆಯ ಯಶಸ್ಸನ್ನು ಘೋಷಿಸುವ ಹೆಮ್ಮೆ ನನಗಿದೆ. ಸರ್ಕಾರವನ್ನು ರಚಿಸಿದ ಮೊದಲ ತಿಂಗಳಿನಿಂದಲೇ, ನಾವು ನಮ್ಮ ಭರವಸೆಗಳನ್ನು ಕಾರ್ಯರೂಪಕ್ಕೆ ತಂದಿದ್ದೇವೆ; ಮಾತಿನಲ್ಲಿ ಅಲ್ಲ, ಕಾರ್ಯದಲ್ಲಿ ಎಂದು ಸಿಎಂ ಸಿದ್ದರಾಮಯ್ಯ ಹೇಳಿದ್ದಾರೆ. ನನ್ನ ಮೊದಲ ಅವಧಿಯಲ್ಲಿ(2013–18) 165 ಭರವಸೆಗಳಲ್ಲಿ 157ಕ್ಕಿಂತ ಹೆಚ್ಚು ಭರವಸೆಗಳನ್ನು ಈಡೇರಿಸಿದ್ದೇವೆ. ಈ ಅವಧಿಯಲ್ಲಿ, 593 ಭರವಸೆಗಳಲ್ಲಿ ಈಗಾಗಲೇ 243ಕ್ಕೂ ಹೆಚ್ಚು ಭರವಸೆಗಳು ಈಡೇರಿಸಲಾಗಿದೆ. ಉಳಿದಿರುವ ಪ್ರತಿಯೊಂದು ಭರವಸೆಯನ್ನು ಬದ್ಧತೆ, ವಿಶ್ವಾಸಾರ್ಹತೆ ಮತ್ತು ಕಾಳಜಿಯೊಂದಿಗೆ ಈಡೇರಿಸುತ್ತೇವೆ ಎಂದಿದ್ದಾರೆ.

ಕರ್ನಾಟಕದ ಜನರು ನೀಡಿದ ಜನಾದೇಶವು ಒಂದು ಕ್ಷಣಕ್ಕಾಗಿ ಅಲ್ಲ, ಅದು ಐದು ವರ್ಷಗಳ ಪೂರ್ಣ ಜವಾಬ್ದಾರಿಯಾಗಿದೆ. ನಾನು ಸೇರಿದಂತೆ ಕಾಂಗ್ರೆಸ್ ಪಕ್ಷವು ನಮ್ಮ ಜನರ ಪರವಾಗಿ ಸಹಾನುಭೂತಿ, ಸ್ಥಿರತೆ ಮತ್ತು ಧೈರ್ಯದಿಂದ ನಡೆದುಕೊಳ್ಳುತ್ತಿದೆ.

# ಮೆಕ್ಕೆಜೋಳಕ್ಕೆ ಬೆಂಬಲ ಬೆಲೆ ನೀಡಲು ಒತ್ತಾಯಿಸಿ ಹೊನ್ನಾಳಿಯಲ್ಲಿ ಪ್ರತಿಭಟನೆ




**ಚನ್ನಗಿರಿ :** ರಾಜ್ಯ ಸರಕಾರವು ರೈತರು ಬೆಳೆದಂತಹ ಮೆಕ್ಕೇಜೋಳಕ್ಕೆ ಉತ್ತಮ ಬೆಂಬಲ ಬೆಲೆಯನ್ನು ನೀಡಬೇಕು ಎಂದು ಬಿಜೆಪಿ ರಾಜ್ಯ ಪರಿಷತ್ ಸದಸ್ಯ ಮಾಡಾಳ್ ಮಲ್ಲಿಕಾರ್ಜುನ್ ಹೇಳಿದರು.

ಗುರುವಾರ ಪಟ್ಟಣದ ಗಾಂಧಿ ವೃತ್ತದಲ್ಲಿ ತಾಲೂಕು ಬಿಜೆಪಿ ಘಟಕದ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಮೆಕ್ಕೇಜೋಳಕ್ಕೆ ಬೆಂಬಲ ಬೆಲೆ ನೀಡುವಂತೆ ಆಗ್ರಹಿಸಿ ಹಮ್ಮಿಕೊಳ್ಳಲಾಗಿದ್ದ ಪ್ರತಿಭಟನೆಯಲ್ಲಿ ಬಾಗವಹಿಸಿ ಮಾತನಾಡಿ ಬಿಜೆಪಿ ರಾಜ್ಯಾಧ್ಯಕ್ಷರಾದ ವಿಜಯೇಂದ್ರವರು ರೈತರ ಸಮಸ್ಯೆಗಳಿಗೆ ಸ್ಪಂದಿಸಿ ಹೋರಾಟಗಳನ್ನು ಹಮ್ಮಿಕೊಳ್ಳುತ್ತಿದ್ದು ಸರಕಾರವನ್ನು ಎಚ್ಚರಿಸುವಂತಹ ಕೆಲಸವನ್ನು ಮಾಡುತ್ತಿದ್ದಾರೆ. ಕಬ್ಬು ಬೆಳೆಗಾರರಿಗೆ ಹೋರಾಟದ ಮೂಲಕ ನ್ಯಾಯ ಕೊಡಿಸಿದ್ದಾರೆ. ಮೆಕ್ಕೇಜೋಳದ ಹೋರಾಟ ಶುರು ಮಾಡಿದ ಮೇಲೆ ಸಹ ಸರಕಾರ ಎಚ್ಚೆತ್ತುಕೊಳ್ಳಲಿದೆ. ಖರೀದಿ ಕೇಂದ್ರಗಳನ್ನು ತೆರದು ರೈತರಿಗೆ ಅನುಕೂಲವಾದಾಗ ನಮ್ಮ ಹೋರಾಟ ನಿಲ್ಲಿಸುತ್ತೇವೆ. ನಮ್ಮ ಮಧ್ಯವೇ ಇದ್ದು ಹೋರಾಟ ತಾರ್ಕಿಕ ಅಂತ್ಯಕಾಣಲಿಲ್ಲ ಎಂದು ಹೇಳುವವರಿಗೆ ಇಂತಹ ಹೋರಾಟಗಳು ಕಾಣುತ್ತಿಲ್ಲವೇ. ಸರಕಾರಗಳು ಜನರಿಗೆ ಉತ್ತಮ ಆಡಳಿತವನ್ನು ನೀಡಲು ವಿಫಲವಾದಾಗ ಇಂತಹ ಹೋರಾಟಗಳು ಅನಿವಾರ್ಯವಾಗುತ್ತವೆ ಎಂದರು. ರಾಜ್ಯದಲ್ಲಿ ಸಾಕಷ್ಟು ನಾಯಕರು ಆಡಳಿತ ನೀಡಿದ್ದಾರೆ. ಅವರ ಸಾಲಿನಲ್ಲಿ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯನವರು ಸೇರುತ್ತಾರೆ. ಆದರೆ ಮೊದಲ ಅಧಿಕಾರವಧಿಯಲ್ಲಿ ನೀಡಿದಂತಹ ಅಧಿಕಾರವನ್ನು ನೀಡುವಲ್ಲಿ ವಿಫಲರಾಗಿದ್ದು ಯಾರ ಕಪಿಮುಷ್ಟಿಯಲ್ಲಿ ಇದ್ದೀರ. ಆತ್ಮ ಸಾಕ್ಷಿಗೆ ಅನುಗುಣವಾಗಿ ಅಡಳಿತ ಮಾಡಿ ನೀವು ಮುಖ್ಯಮಂತ್ರಿಗಳಾಗಿದ್ದು ನಿಮ್ಮ ಪಕ್ಷದ ಒಬ್ಬ ಶಾಸಕ ನಿಮ್ಮ ವಿರುದ್ದವೇ ಮಾತನಾಡುತ್ತಾರೆ. ಸಾರ್ವಜನಿಕ ಜೀವನ ಗೊತ್ತಿಲ್ಲದವರು ಅದೃಷ್ಟದ ಚುನಾಯಿತ ಪ್ರತಿನಿದಿಗಳಾದರೆ ಈ ಪರಿಸ್ಥಿತಿ ನಿರ್ಮಾಣವಾಗುತ್ತದೆ. ತಾಲೂಕಿನಲ್ಲಿ ಸಾಕಷ್ಟು ಯುವಕರು ಇಸ್ಪೀಟು ಜೂಜಿನ ಮೂಲಕ ಹಾಳಾಗುತ್ತಿದ್ದಾರೆ. ತಾಲೂಕಿನಲ್ಲಿ ಅಡಳೀತ ಯಂತ್ರ ಸಂಪೂರ್ಣ ಕುಸಿದಿದೆ. ಒಬ್ಬ ಮತದಾರರು ಒಂದು ಪಹಣಿಯನ್ನು ಕೊಡಿಸಿ ಎಂದರೆ ಸಾಕು ನಮ್ಮ ಪಕ್ಷಕ್ಕೆ ಸೇರಿಕೊಳ್ಳಿ ಎನ್ನುತ್ತಾರೆ. ಒಬ್ಬ ಜನಪ್ರತಿನಿಧಿಯಾದ ಮೇಲೆ ಎಲ್ಲಾ ಶಾಸಕರು ಎಂದು ತಿಳಿದು ಕೆಲಸಮಾಡಬೇಕು. ಎಲ್ಲರನ್ನೂ ಪ್ರೀತಿಯಿಂದ ಕಾಣವುದನ್ನು ರೂಡಿಸಿಕೊಳ್ಳಬೇಕು. ಒಬ್ಬ ಸಾಮಾನ್ಯ ವ್ಯಕ್ತಿಗೆ ಸಹ ಕೆಲಸವಾಗುತ್ತಿಲ್ಲ ಅವರ ಶಾಪ ಒಳ್ಳೆಯುವುದಾಗುವುದಿಲ್ಲ ಒಬ್ಬ ಶಾಸಕರಾದ ಮೇಲೆ ಜನಮೆಚ್ಚುವಂತಹ ಕೆಲಸ ಮಾಡದೇ ಇದ್ದರೂ ಜನರು ನೆಮ್ಮದಿಯಿಂದ ಇರುವಂತಹ ಕೆಲಸ ಮಾಡಿ. ಮುಂದಿನ ದಿನಗಳಲ್ಲಿ ತಾಲೂಕು ಮತದಾರರು ಉತ್ತಮ ಪಾಠವನ್ನು ಕಲಿಸಲಿದ್ದಾರೆ ಎಂದು ವಾಗ್ದಾಳಿ ನಡೆಸಿದರು. ನಾವು ಇಲ್ಲಿಯೇ ಹುಟ್ಟಿ ಇಲ್ಲಿಯೇ ಸಾಯುವವರು ನಿಮಗೆ ಯಾವುದೇ ತೊಂದರೆಯಾದರೂ ನಿಮ್ಮ ಜೊತೆ ನಾವು ನಿರಂತರವಾಗಿ ನಿಲ್ಲುತ್ತೇವೆ. ಪ್ರಜಾಪ್ರಭುತ್ವ ಉಳಿಯಬೇಕು ಸಮಾಜದಲ್ಲಿ ಸಂಸ್ಕಾರಬರಬೇಕು. ಆಡಳಿತದಲ್ಲಿ ಲೋಪವಾದರೆ ಹೋರಾಟದ ಮೂಲಕ ಪ್ರತಿಭಟಿಸಬೇಕು ಎಂದರು. ಈ ಸಂದರ್ಭದಲ್ಲಿ ಬಿಜೆಪಿ ತಾಲೂಕು ಅಧ್ಯಕ್ಷ ಕುಮಾರ್, ದಿಗ್ಗೇನಹಳ್ಳಿ ನಾಗರಾಜ್, ತರಕಾರಿ ಮಂಜು, ತಿಪ್ಪಗೊಂಡನಹಳ್ಳಿ ಮಲ್ಲಿಕಾರ್ಜುನ್, ಮಹಿಳಾ ಘಟಕದ ಅಧ್ಯಕ್ಷೆ ಶಶಿಕಲಾ,ಕಮಲಾ, ಉಪಾಧ್ಯಕ್ಷೆ ರೂಪಮಲಹಾಳ್, ನಗರಘಟಕ

## ರಾಹುಲ್ ಗಾಂಧಿ ನೇತೃತ್ವದ ಸಭೆಯಲ್ಲಿ ಸಿಎಂ ಆಯ್ಕೆ: ಖರ್ಗೆ

**ಬೆಂಗಳೂರು:** ರಾಜ್ಯ ರಾಜಕೀಯದಲ್ಲಿ ನಾಯಕತ್ವ ಬದಲಾವಣೆ ವಿಚಾರ ತಾರಕಕ್ಕೇರಿದ್ದು, ಈ ನಡುವೆ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸೇರಿದಂತೆ ಪಕ್ಷದ ಹಿರಿಯ ನಾಯಕರೊಂದಿಗೆ ನವದೆಹಲಿಯಲ್ಲಿ ಸಭೆ ಕರೆಯುವುದಾಗಿ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹೇಳಿದ್ದಾರೆ. ದೆಹಲಿಯ ಇಂದಿರಾ ಕಾಂಗ್ರೆಸ್ ಭವನದಲ್ಲಿ ಹೈಕಮಾಂಡ್ ಸಭೆ ನಿಗದಿಯಾಗಿರುವ ಹಿನ್ನೆಲೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಯವರು ಬೆಂಗಳೂರಿನಿಂದ ದೆಹಲಿಗೆ ತೆರಳಿದರು. ಹೈಕಮಾಂಡ್ ಅಂದರೆ ಏಕಾಂಗಿ ಅಲ್ಲ. ಒಂದು ತಂಡ. ಹೈಕಮಾಂಡ್ ಕೂತು ಚರ್ಚಿಸಿ ನಿರ್ಣಯ ಕೈಗೊಳ್ಳುತ್ತದೆ ಎಂದರು.

## ಜಮೀನಿಗಾಗಿ ದಲಿತರ ಮೇಲೆ ದೌರ್ಜನ್ಯ, ವ್ಯಕ್ತಿಗಳ ವಿರುದ್ದ ಕ್ರಮಕ್ಕೆ ಆಗ್ರಹ

ದಾವಣಗೆರೆ.ನ.27: ಜಿಲ್ಲೆಯ ಚನ್ನಗಿರಿ ತಾಲೂಕಿನ ಸಾರಥಿ ಹೊಸೂರು ಗ್ರಾಮದಲ್ಲಿ ಹೊಟ್ಟೆಪಾಡಿಗೆಗಾಗಿ ಅರಣ್ಯ ಭೂಮಿಯನ್ನು ಸಾಗುವಳಿ ಮಾಡಿ ಜೀವನ ನಡೆಸುತ್ತಿರುವಾಗ ಏಕಾಏಕಿ ರಾತ್ರಿ ವೇಳೆಯಲ್ಲಿ ಶಿವಣ್ಣ ಎನ್ನುವ ವ್ಯಕ್ತಿಯ ಮೇಲೆ ದೌರ್ಜನ್ಯ ಎಸಗಿದ ವ್ಯಕ್ತಿಗಳ ವಿರುದ್ದ ಸೂಕ್ತ ಕಾನೂನು ಕ್ರಮ ಕೈಗೊಳ್ಳುವಂತೆ ಡಿಎಸ್‌ಎಸ್ ಜಿಲ್ಲಾ ಸಂಚಾಲಕ ಕುಂದವಾಡ ಮಂಜುನಾಥ್ ಆಗ್ರಹಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಭೂ ರಹಿತರಾಗಿ ಬಡವ ಮಾದಿಗ ಜನಾಂಗ ಸೇರಿದ ನನ್ನ ಮೇಲೆ ದೌರ್ಜನ್ಯ ತುಳಿತಕ್ಕೆ ಒಳಗಾದ ನಾವು ಸಾರಥಿ ಗ್ರಾಮದಲ್ಲಿ ಜಮೀನು ಮಾಡುತ್ತಿದ್ದು, ನಮ್ಮ ಜಮೀನಿನಲ್ಲಿ ಏಕಾಏಕಿ ಗ್ರಾಮದ ವ್ಯಕ್ತಿಯೊಬ್ಬರು ಕೊಳವೆ ಬಾವಿ ಕೊರೆಸುತ್ತಿದ್ದ ಬಗ್ಗೆ ವಿಚಾರಿಸಿದಾಗ ನಮ್ಮಗಳ ಮೇಲೆ ಹಲ್ಲೆ ಮಾಡಿದ್ದಲ್ಲದೇ ನಮ್ಮನ್ನು ಅವ್ಯಾಚ್ಯ ಶಬ್ದಗಳಿಂದ ನಿಂದನೆ ಮಾಡಿದ್ದಾರೆ ಎಂದರು.

ತಕ್ಷಣವೇ ಅವರು ಮಾವಿನಕಟ್ಟೆಗೆ ಬಂದು ಪೊಲೀಸ್ ಸಹಾಯವಾಣಿಗೆ ಕರೆ ಮಾಡಲಾಯಿತು. ಆಗ ಪೊಲೀಸರು ಸ್ಥಳಕ್ಕೆ ಆಗಮಿಸಿ ಕೊಳವೆಬಾವಿ ಕೊರೆಸದಂತೆ ಸೂಚನೆ ನೀಡಿದ್ದರೂ ಸಹ ಕೊಳವೆಬಾವಿ ಕೊರೆಯಿಸಿದ್ದಾರೆ. ಕಾರಣ ಅವರ ವಿರುದ್ದ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕೆಚಿದು ಆಗ್ರಹಿಸಿದರು.


ಶಿವಣ್ಣ ಎನ್ನುವ ವ್ಯಕ್ತಿ ಕಳೆದ 50ಕ್ಕೂ ಹೆಚ್ಚು ವರ್ಷಗಳಿಮದ ಬೇರೆಯವರ ಜಮೀನನ್ನು ಹಣ ಗುತ್ತಿಗೆ ಆಧಾರದಲ್ಲಿ ಸಾಗುವಳಿ ಮಾಡುತ್ತಾ ಬಂದಿದ್ದೇವೆ. ಆದರೆ, ನಾವು ನಮ್ಮ ವಾಪಾಸು ಕೊಟ್ಟು ಜಮೀನು ಪಡೆಯಲು ಹೋದಾಗ ಅವರು ಸಿಕ್ಕಿರುವುದಿಲ್ಲ. ಆದರೆ ಏಕಾಏಕಿ ಪುರೇಂದ್ರ ನಾಯ್ಕ ಎನ್ನುವ ವ್ಯಕ್ತಿ ನಮ್ಮ ಜಮೀನಿನಲ್ಲಿ ಬೋರೆವೆಲ್ ಕೊರೆಸಿದ್ದಾರೆ ಎಂದರು.

ಇದಲ್ಲದೇ ಕೆಲವು ವ್ಯಕ್ತಿಗಳು ಶಿವಣ್ಣನ ಜಮೀನನ್ನು ಕಬಳಿಸಲು ಯತ್ನಿಸುತ್ತಿದ್ದು, ಹಲ್ಲೇ ಮಾಡಿದ್ದಾರೆ. ಜಮೀನಿನ ದಾಖಲೆಗಳು ಇದ್ದರೂ ಸಹ ಈ ರೀತಿ ಕಾನೂನು ವಿರುದ್ದವಾಗಿ ಜಮೀನು ಕಬಳಿಸಲು ಮುಂದಾಗಿರುವ ವ್ಯಕ್ತಿಗಳ ವಿರುದ್ದ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಹಲ್ಲೆಗೊಳಗಾದ ಶಿವಣ್ಣ ಇತರರು ಇದ್ದರು.

# ಮರೆಯಲಾಗದ ನೆನಪು ಮಹಾಂತೇಶ್ ಬೀಳಗಿ ಸರ್






ಸದಾ ನಗುಮುಖ. ಹಣೆಯ ಮೇಲೆ ವಿಭೂತಿ. ಜಿಲ್ಲಾಧಿಕಾರಿಯಾದರೂ ಸರಳ ನಡೆ–ನುಡಿ. ಇದು ನಮ್ಮ

ದಾವಣಗೆರೆ ಡಿ.ಸಿ ಆಗಿದ್ದ ಬೀಳಗಿ ಸರ್‌ರವರ ವ್ಯಕ್ತಿತ್ವ. ಕಛೇರಿಗೆ ಬರುವ ಎಲ್ಲರ ಅಹವಾಲುಗಳನ್ನು ಕೇಳಿ ಅಗತ್ಯ ಕ್ರಮ ಕೈಗೊಳ್ಳುತ್ತಿದ್ದರು. ವೃದ್ಧರು, ಅಂಗವಿಕಲರಿಗೆ ವಿಶೇಷ ಕಾಳಜಿ ವಹಿಸುತ್ತಿದ್ದ ದಕ್ಷ, ಪ್ರಾಮಾಣಿಕ, ಜನಾನುರಾಗಿ ಅಧಿಕಾರಿ ಮಹಾಂತೇಶ್ ಬೀಳಗಿಯವರ ದುರ್ಮರಣ ತೀವ್ರ ದುಃಖ ತಂದಿದೆ. ಕೋವಿಡ್ ಸಂದರ್ಭದಲ್ಲಿ ಅವರ ಕಾರ್ಯಕ್ಷಮತೆ ಎಲ್ಲರ ಮೆಚ್ಚುಗೆಗೆ ಪಾತ್ರವಾಗಿತ್ತು. ಅನೇಕ ಬಾರಿ ನಮ್ಮ ಸಂಸ್ಥೆಗೆ ಭೇಟಿ ನೀಡಿದ್ದ ಅವರ ನೆನಪು ಇನ್ನೂ ಹಸಿರಾಗೇ ಇದೆ.

2019 ರಲ್ಲಿ ಪದವಿಪೂರ್ವ ಶಿಕ್ಷಣ ಇಲಾಖೆಯ ಜಿಲ್ಲಾ ಮಟ್ಟದ ಸಾಂಸ್ಕೃತಿಕ ಸ್ಪರ್ಧೆಗಳ ಉದ್ಘಾಟನೆಗೆ ಬಂದಾಗ ಸಂಸ್ಥೆಯ ಬಗ್ಗೆ ಅಭಿಮಾನ ವ್ಯಕ್ತಪಡಿಸಿದರಲ್ಲದೆ ತಮ್ಮ ಮಗಳು ಚೈತನ್ಯಳನ್ನು ನಮ್ಮ ಕಾಲೇಜಿಗೆ ಸೇರಿಸಿದ್ದರು. ನಮ್ಮ ಶಾಲಾ ಗೀತೆ "ಈ ಶಾಲೆಯೇ ನಮ್ಮ ಸ್ವರ್ಗ" ಬಹುವಾಗಿ ಇಷ್ಟಪಟ್ಟಿದ್ದರು. ಸ್ವತಃ ಗಾಯಕರಾದ ಬೀಳಗಿ ಸರ್‌ರವರು ಈ ಗೀತೆಯನ್ನು ಸಮಯ ಸಿಕ್ಕಾಗ ಮಗಳ ಜೊತೆಗೂಡಿ ಹಾಡಿ ಸಂಭ್ರಮಿಸುತ್ತೇನೆ ಎಂದು ಹೇಳುತ್ತಿದ್ದರು. 10 ನೇ ತರಗತಿ ಮಕ್ಕಳಿಗೆ ಪ್ರೇರಣದಾಯಕ ಮಾತುಗಳಿಂದ ಅವರಲ್ಲಿ ವಿಶ್ವಾಸ ಮೂಡಿಸಿದ್ದರು.

ಸಂಸ್ಥೆಯ ಸಂಸ್ಥಾಪಕರಾದ ಎಂ.ಎಸ್ ಶಿವಣ್ಣನವರ ಸರಳತೆಯನ್ನು ಮೆಚ್ಚಿದ್ದರು. ಅವರು ಲಿಂಗೈಕ್ಯರಾದಾಗ ಸಾಂತ್ವನದ ನುಡಿಗಳಿಂದ ನಮ್ಮಲ್ಲಿ ಧೈರ್ಯ ತುಂಬಿದ್ದರು. ಕೋವಿಡ್ ಸಂದರ್ಭದಲ್ಲಿ ಸಂಸ್ಥೆಯ ಹಿರಿಯ ವಿದ್ಯಾರ್ಥಿಗಳ ಸಹಾಯದಿಂದ ಸಂಸ್ಥೆ 10 ಆಕ್ಸಿಜನ್ ಕಾನ್ಸಂಟ್ರೇಟರ್‌ಗಳನ್ನು ಸಮರ್ಪಿಸುವ ಸಂದರ್ಭದಲ್ಲಿ ಸಂಸ್ಥೆಯ ಸೇವಾಕಾರ್ಯವನ್ನು ಮುಕ್ತವಾಗಿ ಶ್ಲಾಘಿಸಿದ್ದರು. ಸಂಸ್ಥೆವತಿಯಿಂದ ಒಂದು ಸಾವಿರ ದಿನಸಿ ಪ್ಯಾಕೇಟ್ಗಳನ್ನು ಹಂಚುವ ಸಂದರ್ಭದಲ್ಲಿ ನಮ್ಮೊಡನೆ ಇದ್ದರು.

ದಾವಣಗೆರೆಯಿಂದ ವರ್ಗಾವಣೆಗೊಂಡು ಬೆಂಗಳೂರಿಗೆ ಒಲ್ಲದ ಮನಸ್ಸಿನಿಂದ ತೆರಳಿದ್ದರು. ಮನೆಗೆ ಭೇಟಿಕೊಟ್ಟಾಗ ತಮ್ಮ ವೃದ್ಧ ತಾಯಿ ಮತ್ತು ಅಣ್ಣನನ್ನು ಪರಿಚಯಿಸಿ ಪತ್ನಿಯಿಂದ ಫಲಹಾರ ಕೊಡಿಸಿ ಮಗಳ ಭವಿಷ್ಯದ ಬಗ್ಗೆ ತಮ್ಮ ಕನಸನ್ನು ಹಂಚಿಕೊಂಡರು. ಬೆಂಗಳೂರಿಗೆ ಹೋದ ನಂತರವೂ ಸಂಸ್ಥೆಯ ಒಡನಾಟ ಮರೆಯಲಿಲ್ಲ. ಆನಗೋಡಿನ ಶಿವಣ್ಣನವರ ಸ್ಮಾರಕದ ಉದ್ಘಾಟನೆ ಸಂದರ್ಭದಲ್ಲಿ ಸಮಾರಂಭದಲ್ಲಿ ಭಾಗವಹಿಸಿ ತಮ್ಮ ಪ್ರೀತಿ ವ್ಯಕ್ತಪಡಿಸಿದರು. ಸಂಸ್ಥೆಯ ವಾರ್ಷಿಕ ಸಮಾರಂಭದಲ್ಲಿ ಕಾರ್ಯಬಾಹುಳ್ಯದ ನಡುವೆಯೂ ಬಿಡುವು ಮಾಡಿಕೊಂಡು ನಮ್ಮ ಸಂಭ್ರಮ ಹೆಚ್ಚಿಸಿದ್ದರು. ದಾವಣಗೆರೆಯನ್ನು ಅವರು ಬಹಳವಾಗಿ ಪ್ರೀತಿಸುತ್ತಿದ್ದರು.ಹೆಬ್ಬಾಳು ಟೋಲ್ ಬಂತು ಅಂದ್ರೆ ನನಗೆ ಒಂಥರಾ ವೈಬ್ರೇಷನ್ ಆಗುತ್ತೆ, ದಾವಣಗೆರೆಯ ಜನರ ಪ್ರೀತಿ ನಾನು ಎಂದೂ ಮರೆಯಲು ಸಾಧ್ಯವಿಲ್ಲ ಎಂದು ಹೇಳುತ್ತಿದ್ದರು.

ಜನರ ಕಷ್ಟಗಳನ್ನು ಆಲಿಸುತ್ತಾ, ಯುವಜನಾಂಗವನ್ನು ಹುರಿದುಂಬಿಸುತ್ತಾ ಅವರಲ್ಲಿ ಆತ್ಮ ವಿಶ್ವಾಸ

ತುಂಬುತ್ತಿದ್ದ ಬೀಳಗಿ ಸರ್ ಇನ್ನೆಂದೂ ನಮಗೆ ಕಾಣಲು ಸಿಗುವುದಿಲ್ಲ ಎಂಬ ಸಂಕಟ ನಡುಕ ಹುಟ್ಟಿಸುತ್ತಿದೆ.

ಸಹೃದಯಿ ವ್ಯಕ್ತಿಗೆ ಎಂತಹ ದುರ್ಮರಣ! ವಿಧಿಯ ಕ್ರೂರ ದೃಷ್ಟಿ ಮಹಾಂತೇಶ್ ಬೀಳಗಿ ಸರ್‌ರವರನ್ನು ಆಹುತಿ ತೆಗೆದುಕೊಂಡಿದೆ. ಮಗಳನ್ನು ತಮ್ಮಂತೆಯೇ ಐಎಎಸ್ ಮಾಡಿಸಬೇಕೆಂಬ ಅದಮ್ಯ ಆಸೆ ಕೈಗೂಡುವ ಮೊದಲೇ ಕಣ್ಣುಚ್ಚಿ ಎಲ್ಲರ ಕಣ್ಣಲ್ಲಿ ನೀರು ಬರಿಸಿದ್ದಾರೆ. ದಾವಣಗೆರೆ ಕಂಡ ಇಂತಹ ಸೇವಾಧಾರಿ ಅಧಿಕಾರಿ ಅಕಾಲದಲ್ಲಿ ಶಾಶ್ವತ ವಿದಾಯ ಕೋರಿದ್ದು ವಿಧಿಯ ವಿಪರ್ಯಾಸ. ಭಗವಂತ ಅವರ ಕುಟುಂಬಕ್ಕೆ ದುಃಖ ಭರಿಸುವ ಶಕ್ತಿ ನೀಡಲಿ. ಅವರ

ಆತ್ಮ ಚಿರಶಾಂತಿ ಪಡೆಯಲಿ.

ಶಾಲಾ–ಕಾಲೇಜಿನ ಮಕ್ಕಳು ದಿವಂಗತ ಮಹಂತೇಶ್ ಬೀಳಗಿ ಸರ್‌ರವರ ಆತ್ಮಕ್ಕೆ ಶಾಂತಿ

ಕೋರಿ ಒಂದು ನಿಮಿಷದ ಮೌನಾಚರಣೆ ಮಾಡಿದರು.

**– ಜಸ್ಟಿನ್ ಡಿಸೌಜ**

# ರಾಶಿ ಭವಿಷ್ಯ

### ಮೇಷ ರಾಶಿ

ನಗು ನಿಮ್ಮ ಎಲ್ಲ ಸಮಸ್ಯೆಗಳಿಗೆ ಪರಿಹಾರವಾದ್ದರಿಂದ ನಕ್ಕುಬಿಡಿ. ಹಣದ ಕೊರತೆ ಇಂದು ನಿಮ್ಮ ಮನೆಯಲ್ಲಿ ಅಪಶ್ರುತಿಗೆ ಕಾರಣವಾಗಬಹುದು. ಅಂತಹ ಪರಿಸ್ಥಿತಿಯಲ್ಲಿ ನೀವು ನಿಮ್ಮ ಮನೆಯವರೊಂದಿಗೆ ಯೋಚಿಸಿ ಅರ್ಥಮಾಡಿಕೊಂಡು ಮಾತನಾಡಿ ಮತ್ತು ಅವರಿಂದ ಸಲಹೆಯನ್ನು ತೆಗೆದುಕೊಳ್ಳಿ. ನಿಮ್ಮ ಕುಟುಂಬದ ಸದಸ್ಯರ ಅಗತ್ಯಗಳ ಮೇಲೆ ಗಮನ ಹರಿಸುವುದು ಇಂದು ನಿಮ್ಮ ಆದ್ಯತೆಯಾಗಿರಬೇಕು. ಇಡೀ ಬ್ರಹ್ಮಾಂಡದ ಭಾವಪರವಶತೆ ಪ್ರೀತಿಯಲ್ಲಿರುವವರ ನಡುವೆ ನಡೆಯುತ್ತದೆ.

### ವೃಷಭ ರಾಶಿ

ನೀವು ಇತರರೊಡನೆ ನಿಮ್ಮ ಖುಷಿಯ ಕ್ಷಣಗಳನ್ನು ಹಂಚಿಕೊಳ್ಳುತ್ತಿದ್ದಂತೆ ನಿಮ್ಮ ಆರೋಗ್ಯ ಅರಳುತ್ತದೆ. ಆದರೆ ಇದನ್ನು ನಿರ್ಲಕ್ಷಿಸುವುದು ನಿಮಗೆ ತೊಂದರೆ ತರುತ್ತದೆ. ಇಂದು ವ್ಯಾಪಾರದಲ್ಲಿ ಉತ್ತಮ ಲಾಭವನ್ನು ಗಳಿಸುವ ಸಾಧ್ಯತೆ ಇದೆ. ಇಂದಿನ ದಿನ ನೀವು ನಿಮ್ಮ ವ್ಯಾಪಾರಕ್ಕೆ ಹೊಸ ಎತ್ತರವನ್ನು ನೀಡಬಹುದು. ಭೇಟಿ ನೀಡುವ ಸಂಬಂಧಿಗಳು ನೀವು ಅಂದುಕೊಂಡಿದ್ದಕ್ಕಿಂತ ಚೆನ್ನಾಗಿರಬಹುದು.

### ಮಿಥುನ ರಾಶಿ

ನೀವು ಇಂದು ನಿಮಗಾಗಿ ಸಾಕಷ್ಟು ಸಮಯ ಹೊಂದಿರುವುದರಿಂದ ನಿಮ್ಮ ಒಳ್ಳೆಯ ಆರೋಗ್ಯದ ಸಲುವಾಗಿ ಒಂದು ಧೀರ್ಘ ನಡಿಗೆಗೆ ಹೋಗಿ. ಆಲೋಚಿಸದೆ ನೀವು ಯಾರಿಗೂ ತಮ್ಮ ಹಣವನ್ನು ಕೊಡಬಾರದು, ಇಲ್ಲದಿದ್ದರೆ ನೀವು ಮುಂಬರುವ ಸಮಯದಲ್ಲಿ ದೊಡ್ಡ ತೊದರೆಗೊಳಗಾಗಬಹುದು. ದಿನದ ಉತ್ತರಾರ್ಧದಲ್ಲಿ ನೀವು ವಿಶ್ರಾಂತಿ ತೆಗೆದುಕೊಳ್ಳಬಯಸುತ್ತೀರಿ ಮತ್ತು ನಿಮ್ಮ ಕುಟುಂಬದ ಸದಸ್ಯರೊಡನೆ ಸಮಯ ಕಳೆಯಬಯಸುತ್ತೀರಿ.

### ಕರ್ಕ ರಾಶಿ

ವಿಶ್ರಾಂತಿ ಪ್ರಮುಖವಾದ ಒಂದು ದಿನ ಇತ್ತೀಚೆಗೆ ನೀವು ಬಹಳಷ್ಟು ಮಾನಸಿಕ ಒತ್ತಡ ಎದುರಿಸುತ್ತಿದ್ದೀರಿ – ಮನೋಲ್ಲಾಸ ಮತ್ತು ಮನೋರಂಜನೆ ನಿಮಗೆ ವಿಶ್ರಾಂತಿ ಪಡೆಯಲು ಸಹಾಯ ಮಾಡುತ್ತದೆ. ಇಲ್ಲಿಯವರೆಗೆ ಅನಗತ್ಯವಾಗಿ ಹಣವನ್ನು ಖರ್ಚು ಮಾಡುತ್ತಿದ್ದವರು ಜೀವನದಲ್ಲಿ ಹಣದ ಪ್ರಾಮುಖ್ಯತೆ ಏನು ಎಂಬುದನ್ನು ಅರ್ಥಮಾಡಿಕೊಳ್ಳಬಹುದು ಏಕೆಂದರೆ ಇಂದು ಇದ್ದಕ್ಕಿದ್ದಂತೆ ನಿಮಗೆ ಹಣದ ಅಗತ್ಯವಿರುತ್ತದೆ ಮತ್ತು ನಿಮಗೆ ಸಾಕಷ್ಟು ಹಣವಿರುವುದಿಲ್ಲ.

### ಸಿಂಹ ರಾಶಿ

ನೀವು ಜೀವನವನ್ನು ಸಂತೋಷದಿಂದ ಅನುಭವಿಸಲು ಸಿದ್ಧವಾಗುತ್ತಿದ್ದ ಹಾಗೆ ನಿಮಗೆ ಸಂತೋಷ ಹಾಗೂ ಆನಂದ. ಮನೆಯ ಸಣ್ಣ ವಸ್ತುಗಳ ಮೇಲೆ ನಿಮ್ಮ ಸಾಕಷ್ಟು ಹಣ ಹಾಳಾಗಬಹುದು, ಇದರ ಕಾರಣದಿಂದ ನೀವು ಮಾನಸಿಕ ಒತ್ತಡಗೊಳಗಾಗಬಹುದು. ನಿಮ್ಮ ಸಂಗಾತಿಯ ಜೊತೆಗಿನ ಸಂಬಂಧ ನಿಮ್ಮ ಕಚೇರಿ ಕೆಲಸದ ಕಾರಣ ಹಾಳಾಗಬಹುದು.

### ಕನ್ಯಾ ರಾಶಿ

ಕೆಲವರು ನಿಮಗೆ ಏನನ್ನಾದರೂ ಕಲಿಯಲು ಬಹಳ ವಯಸ್ಸಾಗಿದೆಯೆಂದು ಭಾವಿಸಬಹುದು ಆದರೆ ಅದು ನಿಜವಲ್ಲ – ನಿಮ್ಮ ಪ್ರಖರ ಮತ್ತು ಸಕ್ರಿಯ ಮನಸ್ಸಿನಿಂದ ನೀವು ಹೆಚಟಿಜಜಜುಟಿಜಜಸ ವಿಷಯಗಳನ್ನು ಸುಲಭವಾಗಿ ಕಲಿಯುವಿರಿ. ವ್ಯಾಪಾರವನ್ನು ಬಲಪಡಿಸಲು ಇಂದು ನೀವು ಯಾವುದೇ ಪ್ರಮುಖ ಕ್ರಮಗಳನ್ನು ತೆಗೆದುಕೊಳ್ಳಬಹುದು. ಇದಕ್ಕಾಗಿ ನಿಮ್ಮ ಆಪ್ತ ನಿಮಗೆ ಆರ್ಥಿಕವಾಗಿ ಸಹಾಯ ಮಾಡಬಹುದು. ಯುವಕರನ್ನು ಹೊಂದಿರುವ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಲು ಒಳ್ಳೆಯ ಸಮಯ.

### ತುಲಾ ರಾಶಿ

ನೀವು ಪ್ರಯಾಣಿಸಲು ತುಂಬಾ ದುರ್ಬಲರಾಗಿದ್ದರಿಂದ ದೀರ್ಘ ಪ್ರಯಾಣವನ್ನು ತಪ್ಪಿಸಲು ಪ್ರಯತ್ನಿಸಿ. ಇಂದು ನೀವು ಒಳ್ಳೆಯ ಹಣ ಮಾಡುತ್ತೀರಿ – ಆದರೆ ವೆಚ್ಚಗಳಲ್ಲಿ ನಿಮಗೆ ಉಳಿಸಲು ಕಷ್ಟವಾಗಿಸುತ್ತದೆ. ನಿಮ್ಮ ಸಂಗಾತಿ ಬೆಂಬಲ ನೀಡುತ್ತಾರೆ ಹಾಗೂ ಸಹಾಯ ಮಾಡುತ್ತಾರೆ. ಇಂದು ಪ್ರೇಮನಿವೇದನೆ ತಿರುಗೇಟು ನೀಡಬಹುದಾದ್ದರಿಂದ ನಿಮ್ಮ ಸೋಲುಗಳಿಂದ ನೀವು ಪಾಠ ಕಲಿಯಬೇಕು ವ್ಯಾಪಾರ ಸಹವರ್ತಿಗಳು ಬೆಂಬಲ ನೀಡುತ್ತಾರೆ ಮತ್ತು ನೀವು ಬಾಕಿಯಿರುವ ಕೆಲಸಗಳನ್ನು ಪೂರ್ಣಗೊಳಿಸಲು ಒಟ್ಟಿಗೆ ಕೆಲಸ ಮಾಡುತ್ತೀರಿ.

### ವೃಶ್ಚಿಕ ರಾಶಿ

ಸ್ನೇಹಿತರು ನಿಮ್ಮ ಆಲೋಚನೆಗಳ ಮೇಲೆ ಗಮನಾರ್ಹ ಪ್ರಭಾವ ಬೀರಬಹುದಾದ ಯಾರಾದರೂಬ್ಬರನ್ನು ನಿಮಗೆ ಪರಿಚಯಿಸುತ್ತಾರೆ. ವಿದೇಶದಲ್ಲಿ ಮಲಗಿರುವ ನಿಮ್ಮ ಭೂಮಿಯನ್ನು ಇಂದು ಉತ್ತಮ ಬೆಲೆಗೆ ಮಾರಾಟ ಮಾಡಬಹುದು, ಅದು ನಿಮಗೆ ಲಾಭದಾಯಕವಾಗಲಿದೆ. ನಿಮ್ಮ ಕುಟುಂಬಕ್ಕೆ ಸೂಕ್ತ ಸಮಯ ನೀಡಿ. ನೀವು ಅವರ ಸಲುವಾಗಿ ಕಾಳಜಿ ವಹಿಸುತ್ತೀರೆಂದು ಅವರಿಗೆ ಅರ್ಥವಾಗಲಿ.

### ಧನು ರಾಶಿ

ಒಬ್ಬ ಸ್ನೇಹಿತ ನಿಮ್ಮ ಮುಕ್ತ ಮನಸ್ಸು ಮತ್ತು ಸಹಿಷ್ಣುತೆಯ ಪರಮಾವಧಿಯನ್ನು ಪರೀಕ್ಷಿಸಬಹುದು. ನೀವು ನಿಮ್ಮ ಮೌಲ್ಯಗಳೊಂದಿಗೆ ರಾಜಿಯಾಗದಿರುವಂತೆ ಮತ್ತು ಸಕಾರಣವಾದ ನಿರ್ಧಾರಗಳನ್ನು ಕೈಗೊಳ್ಳುವಂತೆ ಎಚ್ಚರಿಕೆ ವಹಿಸಬೇಕು. ಇಂದು ನೀವು ನಿಮ್ಮ ಹಣವನ್ನು ಧಾರ್ಮಿಕ ಚಟುವಟಿಕೆಗಳಲ್ಲಿ ಹೂಡಿಕೆ ಮಾಡಬಹುದು, ಇದರಿಂದ ನೀವು ಮಾನಸಿಕ ಶಾಂತಿಯನ್ನು ಪಡೆಯುವ ಸಂಪೂರ್ಣ ಸಾಧ್ಯತೆ ಇದೆ.

### ಮಕರ ರಾಶಿ

ನೀವು ಇಂದು ನಿಮಗಾಗಿ ಸಾಕಷ್ಟು ಸಮಯ ಹೊಂದಿರುವುದರಿಂದ ನಿಮ್ಮ ಒಳ್ಳೆಯ ಆರೋಗ್ಯದ ಸಲುವಾಗಿ ಒಂದು ಧೀರ್ಘ ನಡಿಗೆಗೆ ಹೋಗಿ. ನಿಮಗಾಗಿ ಹಣವನ್ನು ಉಳಿಸುವ ನಿಮ್ಮ ಬಯಕೆ ಇಂದು ಪೂರ್ಣಗೊಳ್ಳಬಹುದು. ಇಂದು ನೀವು ಸೂಕ್ತವಾಗಿ ಉಳಿಸಲು ಸಾಧ್ಯವಾಗುತ್ತದೆ. ಸ್ನೇಹಿತರು ಮತ್ತು ಸಂಬಂಧಿಗಳೊಡನೆ ಆನಂದಿಸಿ.

### ಕುಂಭ ರಾಶಿ

ನಿಮ್ಮ ಶಕ್ತಿಯ ಮಟ್ಟ ಹೆಚ್ಚಿರುತ್ತದೆ. ಇಂವು ನಿಮಗೆ ನಿಮ್ಮ ಸಹೋದರ ಅಥವಾ ಸಹೋದರಿಯ ಸಹಾಯದಿಂದ ಹಣದ ಲಾಭವಾಗುವ ಸಾಧ್ಯತೆ ಇದೆ ಕುಟುಂಬ ಮತ್ತು ಸ್ನೇಹಿತರೊಂದಿಗೆ ಆಹ್ಲಾದಕರ ಸಮಯ ನಿಮ್ಮ ಸಂಗಾತಿಯ ಕೆಟ್ಟ ಆರೋಗ್ಯದಿಂದಾಗಿ ಇಂದು ಪ್ರಣಯಕ್ಕೆ ಧಕ್ಕೆಯಾಗುತ್ತದೆ. ಉದ್ಯಮಿಗಳು ಕೆಲವು ಹಠಾತ್ ಅನಿರೀಕ್ಷಿತ ಲಾಭ ಅಥವಾ ಆದಾಯದ ಒಳ್ಳೆಯ ದಿನವನ್ನು ಹೊಂದಬಹುದಾದ್ದರಿಂದ ಅವರಿಗೆ ಒಳ್ಳೆಯ ದಿನ.

### ಮೀನ ರಾಶಿ

ನಿಮ್ಮ ಆರೋಗ್ಯ ಮತ್ತು ನೋಟವನ್ನು ಸುಧಾರಿಸಲು ಕೆಲಸಗಳನ್ನು ಮಾಡಲು ಸಾಕಷ್ಟು ಸಮಯ ಹೊಂದಿರುತ್ತೀರಿ. ಇಂದು ನೀವು ನಿಮ್ಮ ಹಣವನ್ನು ಧಾರ್ಮಿಕ ಚಟುವಟಿಕೆಗಳಲ್ಲಿ ಹೂಡಿಕೆ ಮಾಡಬಹುದು, ಇದರಿಂದ ನೀವು ಮಾನಸಿಕ ಶಾಂತಿಯನ್ನು ಪಡೆಯುವ ಸಂಪೂರ್ಣ ಸಾಧ್ಯತೆ ಇದೆ. ಸ್ನೇಹಿತರು ಸಂತೋಷದ ಸಂಜೆಗಾಗಿ ನಿಮ್ಮನ್ನು ಅವರ ಸ್ಥಳಕ್ಕೆ ಆಮಂತ್ರಿಸುತ್ತಾರೆ. ಪ್ರೀತಿ ದೇವರ ಪೂಜೆಗೆ ಪರ್ಯಾಯವಾಗಿದೆ;

# ಎರಡು ಸಾವಿರ . ಜಮಾ ಆಗದ ಗೃಹಲಕ್ಷ್ಮೀ ಫಲಾನುಭವಿಗಳು NPCI ಲಿಂಕ್ ಮಾಡಿಸಲು ವಿನಂತಿ




**ಗದಗ:** 2,000 ರೂ. ಜಮಾ ಆಗದ ಗೃಹಲಕ್ಷ್ಮೀ ಫಲಾನುಭವಿಗಳು ಬ್ಯಾಂಕ್, ಕರ್ನಾಟಕ ಒನ್, ಗ್ರಾಮ ಒನ್ ಹಾಗೂ ಆನ್‌ಲೈನ್ ಸೆಂಟರ್‌ಗಳಲ್ಲಿ NPCI ಲಿಂಕ್ ಮಾಡಿಸಬೇಕು ಎಂದು ಗದಗ ತಾಲೂಕು ಪಂಚ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ ಮನವಿ ಮಾಡಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಗೃಹಲಕ್ಷ್ಮೀ ಫಲಾನುಭವಿಗಳಿಗೆ 2,000 ರೂ. ಬ್ಯಾಂಕ್ ಖಾತೆಗೆ ಜಮಾ ಆಗದೇ ಇರುವ ಫಲಾನುಭವಿಗಳು ತಮ್ಮ ಪಾಸ್‌ಬುಕ್, ಆಧಾರ್ ಕಾರ್ಡ್, ಪಾನ್ ಕಾರ್ಡ್ ತೆಗೆದುಕೊಂಡು ತಮ್ಮ ಖಾತೆ ಇರುವ ಬ್ಯಾಂಕ್ ಇಲ್ಲವೇ ಕರ್ನಾಟಕ ಒನ್, ಗ್ರಾಮ ಒನ್ ಹಾಗೂ ಆನ್‌ಲೈನ್ ಸೆಂಟರ್‌ಗಳಲ್ಲಿ ಎನ್‌ಸಿಪಿಐ ಲಿಂಕ್ ಮಾಡಿಸಬೇಕು.

ವ್ ಾ ಹಿ ತಿ ಗ ಾ ಗಿ ಮುಳಗುಂದ ನಾಕಾ ಬಳಿಯ ಕೆಎಸ್‌ಆರ್‌ಟಿಸಿ ಡಿಪೋ ಎದುರಿಗಿನ ಉಪವಿಭಾಗೀಯ ಕಚೇರಿ ಆವರಣದಲ್ಲಿರುವ ಗದಗ ತಾಲೂಕು ಪಂಚ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಕಚೇರಿಗೆ ಕಚೇರಿ ಅವಧಿಯಲ್ಲಿ ಭೇಟಿ ನೀಡಬಹುದಾಗಿದೆ.

# 1 ಲಕ್ಷ ರೂ. ಬಹುಮಾನ ಗೆದ್ದ ವಿದ್ಯಾರ್ಥಿನಿ



**ಹಾಸನ:** ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ

ಅಂಗವಾಗಿ ಏರ್ಪಡಿಸಿದ್ದ ರಾಜ್ಯಮಟ್ಟದ ಭಾಷಣ ಸ್ಪರ್ಧೆಯಲ್ಲಿ ತಾಲೂಕಿನ ಮೊಸಳೆ ಹೊಸಹಳ್ಳಿ ಮೊರಾರ್ಜಿ ದೇಸಾಯಿ ವಸತಿ ಶಾಲೆಯ 9ನೇ ವಿದ್ಯಾರ್ಥಿನಿ ಅಮೃತಾ ಪ್ರಥಮ ಸ್ಥಾನ ಪಡೆದಿದ್ದಾರೆ.

ಇದಕ್ಕೂ ಮುನ್ನ ತಾಲೂಕು ಹಾಗೂ ಜಿಲ್ಲಾ ಮಟ್ಟದ ಸ್ಪರ್ಧೆಗಳಲ್ಲೂ ಅಮೃತಾ ಮೇಲುಗೈ ಸಾಧಿಸಿ ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದರು. ಪ್ರತಿಭಾವಂತ ವಿದ್ಯಾರ್ಥಿನಿಯನ್ನು ನ.26 ಸಂವಿಧಾನ ದಿನದಂದು ಬೆಂಗಳೂರಿನ ಡಾ.ಬಿ.ಆರ್. ಅಂಬೇಡ್ಕರ್ ಭವನದಲ್ಲಿ ನಡೆದ ರಾಜ್ಯಮಟ್ಟದ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು 1 ಲಕ್ಷ ರೂ. ನಗದು ಬಹುಮಾನ ನೀಡಿ ಅಭಿನಂದಿಸಿದರು. ಈ ವೇಳೆ ಸಮಾಜ ಕಲ್ಯಾಣ ಸಚಿವ ಡಾ.ಹೆಚ್.ಸಿ.ಮಹದೇವಪ್ಪ, ಆಹಾರ ಸಚಿವ ಕೆ.ಹೆಚ್.ಮುನಿಯಪ್ಪ ಹಾಗೂ ಅಧಿಕಾರಿಗಳಿದ್ದರು.

ಈ ಮೂಲಕ ಶಾಲೆಗೆ ಹಾಗೂ ಜಿಲ್ಲೆಗೆ ಹೆಮ್ಮೆ ತಂದಿರುವ ವಿದ್ಯಾರ್ಥಿನಿಯನ್ನು ಆಡಳಿತ ಮಂಡಳಿ ಹಾಗೂ ಅಧಿಕಾರಿಗಳು ಹಾರ್ದಿಕವಾಗಿ ಅಭಿನಂದಿಸಿದ್ದಾರೆ.

# ಮನುಕುಲದ ಮಹಾದಾನಿಗೆ ಸಚಿವರಿಂದಲೇ ಸನ್ಮಾನ: ಸೇವೆ ಮತ್ತು ತ್ಯಾಗದ ಸಂಗಮ

**ಗದಗ:** ಬೆಟಗೇರಿ ನೆಲದಲ್ಲಿ ನಡೆದ ನಾರಾಯಣ ವನ್ನಾಲ ಅವರ ಅಂಗಾಂಗ ದಾನದ ಘಟನೆಯು ಕೇವಲ ವೈದ್ಯಕೀಯ ಕ್ಷೇತ್ರದ ಯಶಸ್ಸು ಮಾತ್ರವಲ್ಲ, ಅದು ಮಾನವೀಯ ಮೌಲ್ಯಗಳ ಮರು ಸ್ಥಾಪನೆಯಾಗಿ ಗದಗ ಜಿಲ್ಲೆಯಲ್ಲಿ ದಾಖಲೆಯಾಗಿ ಉಳಿದಿದೆ.

ದುಃಖಭರಿತ ಕುಟುಂಬವೇ, ತಮ್ಮ ದುಖವನ್ನೆಲ್ಲಾ ಮರೆತು, ನಾಲ್ಕು ಜೀವಗಳಿಗೆ ಹೊಸ ಆಶಾಕಿರಣ ನೀಡಿದ ತ್ಯಾಗವು, ಸಮಾಜ ಮತ್ತು ಸರ್ಕಾರ ಹೇಗೆ ಪ್ರತಿಕ್ರಿಯಿಸಬೇಕು ಎಂಬುದಕ್ಕೆ ಒಂದು ಆದರ್ಶಪ್ರಾಯ ಘಟನೆಯಾಗಿ ಹೊರಹೊಮ್ಮಿದೆ



# ಡಿಸೆಂಬರ 13 ರಂದು ರಾಷ್ಟ್ರೀಯ ಲೋಕ ಅದಾಲತ್

**ಗದಗ :** ಜಿಲ್ಲೆಯಲ್ಲಿ ಡಿ.13 ರಂದು ರಾಷ್ಟ್ರೀಯ ಲೋಕ ಅದಾಲತ್ ಹಮ್ಮಿಕೊಂಡಿದ್ದು ಸಾರ್ವಜನಿಕರು, ಪಕ್ಷಗಾರರು ತಮ್ಮ ವ್ಯಾಜ್ಯಗಳನ್ನು ಪರಸ್ಪರ ರಾಜೀ ಸಂಧಾನ ಮಾಡಿಕೊಳ್ಳುವ ಮೂಲಕ ತಮ್ಮ ಪ್ರಕರಣಗಳನ್ನು ತ್ವರಿತವಾಗಿ ಇತ್ಯರ್ಥಪಡಿಸಿಕೊಳ್ಳಬಹುದಾಗಿದೆ. ರಾಜೀ ಸಂಧಾನದಲ್ಲಿ ಪಾಲ್ಗೊಂಡು ತಮಗಾಗುವ ಆರ್ಥಿಕ ಹೊರೆ ಹಾಗೂ ಸಮಯ ಪೋಲಾಗುವುದನ್ನು ತಪ್ಪಿಸಲು, ಮೊದಲಿನ ಬಾಂಧವ್ಯ ಉಳಿಸಿಕೊಳ್ಳಲು ತಮ್ಮ ವ್ಯಾಜ್ಯಗಳನ್ನು ಇತ್ಯರ್ಥಪಡಿಸಿಕೊಳ್ಳುವಂತೆ ಗೌರವಾನ್ವಿತ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಗದಗ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಅಧಕ್ಷರಾದ ನಾಗವೇಣಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸ್ಪಿಂಕ್ಲರ್ ಸೌಲಭ್ಯಕ್ಕೆ ರೈತರಿಂದ ಅರ್ಜಿ ಆಹ್ವಾನ

**ಹಾವೇರಿ:** ಪ್ರಸಕ್ತ 2025-26 ನೇ ಸಾಲಿನ ಸೂಕ್ಷ್ಮ ನೀರಾವರಿ ಯೋಜನೆಯಡಿ ಕೃಷಿ ಇಲಾಖೆ ವತಿಯಿಂದ ತುಂತುರು ನೀರಾವರಿ ಘಟಕ (ಸ್ಪಿಂಕ್ಲರ್) ಸೌಪಭ್ಯಕ್ಕೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವರ್ಗದ ರೈತರಿಗೆ ಅರ್ಜಿ ಆಹ್ವಾನಿಸಲಾಗಿದೆ.

ಪರಿಶಿಷ್ಟ ಜಾತಿ (ಖಅ) ವರ್ಗದ ರೈತರು ಈಗಾಗಲೇ ಸ್ಪಿಂಕ್ಲರ್ ಸವಲತ್ತು ಪಡೆದಿದ್ದಲ್ಲಿ ಹೆಚ್ಚುವರಿ ವಿಸ್ತೀರ್ಣ ಅಂದರೆ 2 ಎಕರೆ 20 ಗುಂಟೆಯಿಂದ 5 ಎಕರೆ ವರೆಗಿನ ಹೆಚ್ಚುವರಿ ಜಮೀನಿನ ವಿಸ್ತೀರ್ಣಕ್ಕೆ ಮತ್ತೊಮ್ಮೆ ಸ್ಪಿಂಕ್ಲರ್ ಪಡೆಯಬಹುದಾಗಿರುತ್ತದೆ.

ಅರ್ಹ ರೈತರು ತಮ್ಮ ಆಧಾರಕಾರ್ಡ, ಅ ಖಾತೆ ಉತಾರ, ಆರ್.ಟಿ.ಸಿ ಉತಾರ, ಬೆಳೆ ಹಾಗೂ ನೀರಾವರಿ ಮೂಲದ ದೃಢೀಕರಣ ಪತ್ರ, ಬ್ಯಾಂಕ್ ಪಾಸ್ ಪುಸ್ತಕದ ನಕಲು ಪ್ರತಿ ಹಾಗೂ 3 ಪಾಸ್ ಪೋರ್ಟ ಸೈಜಿನ ಛಾಯಾಚಿತ್ರಗಳೊಂದಿಗೆ ಸಂಬಂಧಿಸಿದ ರೈತ ಸಂಪರ್ಕ ಕೇಂದ್ರಗಳಿಗೆ ಸಂಪರ್ಕಿಸಿ ಕೂಡಲೇ ಅರ್ಜಿ ಸಲ್ಲಿಸಬೇಕು. ಸೂಕ್ಷ್ಮ ನೀರಾವರಿ ಘಟಕ (ಸ್ಪಿಂಕ್ಲರ್) ಅರ್ಜಿ ಸಲ್ಲಿಸುವ ಪರಿಶಿಷ್ಟ ಜಾತಿ (ಖಅ) ಪರಿಶಿಷ್ಟ ಪಂಗಡ (ಖಖ) ವರ್ಗದ ರೈತರು ಕಡ್ಡಾಯವಾಗಿ ಚಾಲ್ತಿಸಾಲಿನ ಅಥವಾ ನವೀಕರಿಸಿದ ಖಆ ನಂಬರ ಹೊಂದಿದ ಜಾತಿ ಪ್ರಮಾಣ ಪತ್ರಗಳೊಂದಿಗೆ ಅರ್ಜಿ ಸಲ್ಲಿಸಲು ಕೋರಿದೆ.

ಆಸಕ್ತ ರೈತರು ದಾಖಲಾತಿಗಳೊಂದಿಗೆ ಅರ್ಜಿಯನ್ನು ಸಂಬಂಧಿಸಿದ ರೈತ ಸಂಪರ್ಕ ಕೇಂದ್ರಗಳಿಗೆ ಸಲ್ಲಿಸಬಹುದಾಗಿದೆ ಎಂದು ಹಾವೇರಿ ತಾಲೂಕಿನ ಸಹಾಯಕ ಕೃಷಿ ನಿರ್ದೇಶಕ ವೀರಭದ್ರಪ್ಪ. ಬಿ. ಹೆಚ್. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರತಿಯೊಬ್ಬ ಪ್ರಜೆಗಳಲ್ಲಿ ಸಂವಿಧಾನದ ಅರಿವು ಅಗತ್ಯ

**ಹರಿಹರ:** ಸರ್ಕಾರಿ ಪ್ರಥಮ ದರ್ಜೆ ಕಾಲೇಜು ದಾವಣಗೆರೆ ಆವರಣದಲ್ಲಿ. ರಾಷ್ಟ್ರೀಯ ಸೇವಾ ಯೋಜನೆ ಮತ್ತು ರಾಜ್ಯಶಾಸ್ತ್ರ ಭಾಗದ ಸಹಯೋಗದಲ್ಲಿ ಸಂವಿಧಾನ ದಿನ ಆಚರಿಸಲಾಯಿತು. ಪ್ರಾಂಶುಪಾಲರಾದ ಪ್ರೊ. ಬಸವರಾಜ್ ಸಿ.ತಹಸೀಲ್ದಾರ್ ಅಧ್ಯಕ್ಷತೆ ವಹಿಸಿ ಸಂವಿಧಾನದ ಮಹತ್ವ ತಿಳಿಸಿ ಎಲ್ಲರಿಗೂ ಶುಭಾಶಯ ಕೋರಿದರು ಎಸ್ ಘಟಕದ ಕಾರ್ಯಕ್ರಮ ಅಧಿಕಾರಿಗಳಾದ ಪ್ರೊ. ಮಂಜುನಾಥ್ ಎನ್. ಜಿ. ಇವರು ಸಂವಿಧಾನದ ಪೀಠಿಕೆಯನ್ನು ಬೋಧಿಸಿದರು, ರಾಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಡಾ. ವೀರ್ಯಾ ನಾಯಕ್ ರವರು ಸಂವಿಧಾನದ ಮಹತ್ವದ ಕುರಿತು ಮಾತನಾಡುತ್ತಾ ಇಂದಿನ ದಿನದಲ್ಲಿ ಪ್ರತಿಯೊಬ್ಬ ಪ್ರಜೆಗಳಲ್ಲಿ ಸಂವಿಧಾನದ ಅರಿವು ಮೂಡಬೇಕಾಗಿದೆ ಇಂದು ಸಂವಿಧಾನವನ್ನು ಓದದೆ ಇರುವ ಸಂಖ್ಯೆ ಹೆಚ್ಚಾಗಿದೆ ಅದನ್ನು ಓದಿ ಅರ್ಥ ಮಾಡಿಕೊಂಡರೆ ದೇಶದಲ್ಲಿ ಬದುಕುವ ಹಕ್ಕು ಬದುಕುವ ರೀತಿ ಯೋಚಿಸುವ ರೀತಿ ಬದಲಾಗುತ್ತದೆ ಎಂದು ಹೇಳಿದರು

ಕಾಲೇಜಿನ ಎಲ್ಲಾ ಅಧ್ಯಾಪಕ ಅಧ್ಯಾಪಕೇತರ ಸಿಬ್ಬಂದಿಗಳು ಹಾಗೂ ಕಾಲೇಜಿನ ಎಲ್ಲಾ ವಿದ್ಯಾರ್ಥಿಗಳು ಈ ಕಾರ್ಯಕ್ರಮದಲ್ಲಿ ಭಾಗವಹಿಸಿ ಸಂವಿಧಾನದ ಪೀಠಿಕೆಯನ್ನು ಓದಿದರು. ಕಾರ್ಯಕ್ರಮದಲ್ಲಿ ನಿರೂಪಣೆಯನ್ನು ರಾಜ್ಯಶಾಸ್ತ್ರ ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಪ್ರೊ ಸಂಗಪ್ಪ ಅವರು ನೆರವೇರಿಸಿದರು.




### ವಿಶ್ವ ವಿಕಲಚೇತನರ ಕ್ರೀಡಾ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ನ್ಯಾ.ರಾಜೇಶ್ ಎನ್.ಹೊಸಮನೆ ಹೇಳಿಕೆ

# ವಿಶೇಷಚೇತನರಿಗೆ ಪ್ರೋತ್ಸಾಹ ನೀಡೋಣ




**ಬಳ್ಳಾರಿ:** ವಿಶೇಷಚೇತನರಿಗೆ ಕ್ರೀಡಾ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳಿಗೆ ವಿಶೇಷವಾದಂತಹ ಆಸಕ್ತಿ ನೀಡಿ ಅವರಲ್ಲಿ ಅಡಗಿರುವ ಸಾಮರ್ಥ್ಯವನ್ನು ಸಮಾಜ ಮುಖ್ಯವಾಹಿನಿಗೆ ತರುವುದರ ಮೂಲಕ ಅವರಿಗೆ ಪ್ರೋತ್ಸಾಹ ನೀಡುವುದು ನಮ್ಮೆಲ□□ರ ಜವಾಬ್ದಾರಿ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್. ಹೊಸಮನೆ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆ, ವಿಕಲಚೇತನರಿಗಾಗಿ ಶ್ರಮಿಸುತ್ತಿರುವ ಸ್ವಯಂ ಸೇವಾ ಸಂಸ್ಥೆಗಳು ಹಾಗೂ ಸಂಘ ಸಂಸ್ಥೆಗಳು ಇವರುಗಳ ಸಂಯುಕ್ತಾಶ್ರಯದಲ್ಲಿ ನಗರದ ಬಿಎಂಸಿಆರ್‌ಸಿ ಮೈದಾನದಲ್ಲಿ ಮಂಗಳವಾರ ಏರ್ಪಡಿಸಿದ್ದ ಬಳ್ಳಾರಿ ಜಿಲ್ಲೆಯ ವಿಕಲಚೇತನರಿಗೆ ವಿಕಲಚೇತನರ ಕ್ರೀಡಾ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ವಿಶೇಷಚೇತನ ಮಕ್ಕಳು ವಿಶೇಷ ಸಾಮರ್ಥ್ಯ ಹೊಂದಿರುತ್ತಾರೆ. ವಿಶೇಷಚೇತನರ ಸಾಧನೆಗಳನ್ನು ನೋಡಿದರೆ ಎಂಥವರಿಗೂ ಸಹ ಉತ್ಸಾಹ ಬರುತ್ತದೆ. ಯಾವುದೇ ಕೀಳರಿಮೆ ಹೊಂದದೇ ತಮ್ಮ ಸಾಮರ್ಥ್ಯವನ್ನು ಪ್ರದರ್ಶಿಸಬೇಕಾಗಿದೆ. ವಿಕಲಚೇತನರು ಅಸಮರ್ಥರಲ್ಲ ಸಮರ್ಥರು ಎಂದು ರಾಷ್ಟ್ರೀಯ, ಅಂತರಾಷ್ಟ್ರೀಯ ಕ್ರೀಡಾಕೂಟದಲ್ಲಿ ಭಾಗವಹಿಸಿ ರಾಷ್ಟ್ರಕ್ಕೆ ಗೌರವ ತಂದಿದ್ದಾರೆ ಎಂದರು.

ಟ್ರಾಮಾಕೇರ್ ವೈದ್ಯಕೀಯ ಆಸ್ಪತ್ರೆ ಅಧೀಕ್ಷಕ ಶಿವನಾಯಕ್ ಮಾತನಾಡಿ ವಿಶೇಷ ಚೇತನ ಮಕ್ಕಳಿಗೆ ಅಗತ್ಯ ಸೌಲಭ್ಯವನ್ನು ಒದಗಿಸುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ. ಅವರಿಗೆ ವೈದ್ಯಕೀಯ ಸಂಸ್ಥೆಯಲ್ಲಿ ಯಾವುದೇ ಸೌಲಭ್ಯ ಬೇಕಾದರೂ ಒದಗಿಸಿಕೊಡಲಾಗುವುದು ಎಂದು ಹೇಳಿದರು.ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಶಿಶು ಅಭಿವೃದ್ಧಿ ಯೋಜನಾಧಿಕಾರಿ ನಂದಿನಿ,ನಿರಾಶ್ರಿತರ ಪರಿಹಾರ ಕೇಂದ್ರದ ಅಧೀಕ್ಷಕ ಚಿನ್ನಪಾಲಯ್ಯ, ಚೆಂಗಾರೆಡ್ಡಿ ಬುದ್ದಿಮಾಂದ್ಯ ಮಕ್ಕಳ ಶಾಲೆಯ ಮುಖ್ಯಗುರುಗಳಾದ ಚಂದ್ರಶೇಖರ್, ತಮ್ಮನ್ನ ಶಾಲೆಯ ಮುಖ್ಯಸ್ಥರಾದ ಸವಿತ, ಅನುಗ್ರಹ ಬುದ್ದಿಮಾಂದ್ಯ ಮಕ್ಕಳ ಸಂಸ್ಥೆಯ ಮುಖ್ಯಸ್ಥರಾದ ಸಿಸ್ಟರ್ ಪ್ರಜ್ಞಾ, ಡಾ.ಭೀಮಾ ಬುದ್ದಿಮಾಂದ್ಯ ಮಕ್ಕಳ ಸಂಸ್ಥೆಯ ಮುಖ್ಯಸ್ಥ ಮಹೇಶ್ ಕುಮಾರ್ ಹೆಚ್.ಎಂ., ಶ್ರೀ ದೊಡ್ಡ ಬಸವೇಶ್ವರ ಬುದ್ದಿಮಾಂದ್ಯ ಮಕ್ಕಳ ಶಾಲೆಯ ಮುಖ್ಯಸ್ಥ ಫಣಿರಾಜ್, ನವಜೀವನ ಸಂಸ್ಥೆಯ ಮುಖ್ಯಸ್ಥರಾದ ಸಿಸ್ಟರ್ ಎಸ್ಥರ್, ಸರ್ಕಾರಿ ಕಿವುಡು ಮಕ್ಕಳ ಪಾಠಶಾಲೆಯ ಮುಖ್ಯ ಶಿಕ್ಷಕ ರವಿ ಸಿ.ಕೆ., ನವತಾರೆ ಅಂಗವಿಕರ ಒಕ್ಕೂಟದ ಅಧಕ್ಷ ಸಾದಿಕ್, ಅಂಗವಿಕಲರ ಪಾಲಕರ ಒಕ್ಕೂಟದ ಮುಖ್ಯಸ್ಥ ಕುಮಾರಪ್ಪ, ಜಿಲ್ಲಾ ವಿಕಲಚೇತನರ ಪುನರ್ವಸತಿ ಕೇಂದ್ರದ ಮುಖ್ಯಸ್ಥರಾದ ನಾಗೇಂದ್ರ ಮತ್ತು ನಾರಾಯಣ ನಾಯಕ್, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಸಿಬ್ಬಂದಿ ವರ್ಗ, ಬಳ್ಳಾರಿ ಜಿಲ್ಲೆಯ ಎಂ.ಆರ್.ಡಬ್ಲೂ ಯು,ಆರ್. ಡಬ್ಲೂ ವಿ.ಆರ್.ಡಬ್ಲೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ಜೆಎಸ್‌ಡಬ್ಲೂ ಟೌನ್‌ಶಿಪ್‌ನಲ್ಲಿ ಕರಡಿ ಸೆರೆ



**ಬಳ್ಳಾರಿ:** ಸಂಡೂರಿನ ತೋರಣಗಲ್ಲಿನ ಜೆಎಸ್‌ಡಬ್ಲೂ ಟೌನ್‌ಶಿಪ್ ನಲ್ಲಿ ಹಲವಾರು ದಿನಗಳಿಂದ ಕಾಣಿಸಿಕೊಳ್ಳುತ್ತಿದ್ದ ಕರಡಿಯನ್ನು ಮಂಗಳವಾರ ಸೆರೆ ಹಿಡಿಯಲಾಗಿದೆ.

ಬೆಂಗಳೂರಿನ ಮುಖ್ಯ ವನ್ಯಜೀವಿ ಪರಿಪಾಲಕರ ಅನುಮತಿ ಮೇರೆಗೆ ಬಳ್ಳಾರಿ ಉಪ ವಿಭಾಗದ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಹಾಗೂ ಸಂಡೂರು ಪಶು ವೈದ್ಯಾಧಿಕಾರಿಗಳ ಸಮಕ್ಷಮದಲ್ಲಿ ಸೆರೆ ಹಿಡಿಯಲಾಗಿದೆ.

ಬನ್ನೇರುಘಟ್ಟ ವನ್ಯಜೀವಿ ಕರಡಿ ರಕ್ಷಣಾ ಕೇಂದ್ರ ಸಹಕಾರದೊಂದಿಗೆ ಅರವಳಿಕೆ ನೀಡಿ ಜಿಪಿಎಸ್ ಆಧಾರಿತ ರೇಡಿಯೋ-ಕಾಲರ್ ಐಡಿ ಅಳವಡಿಸಿ ಬೆಂಗಳೂರಿನ ಮುಖ್ಯ ವನ್ಯಜೀವಿ ಪರಿಪಾಲಕರ ಅನುಮತಿ ಪಡೆದು ಸೂಕ್ತವಾದ ಅರಣ್ಯ ಪ್ರದೇಶದಲ್ಲಿ ಬಿಡುಗಡೆ ಮಾಡಲಾಗಿದೆ.

ಕಾರ್ಯಾಚರಣೆಯನ್ನು ವಲಯ ಅರಣ್ಯಾಧಿಕಾರಿ, ಸಂಡೂರು ದಕ್ಷಿಣ ವಲಯ ಹಾಗೂ ಸಿಬ್ಬಂದಿಯವರು ಜೊತೆಗೂಡಿ ಕಾರ್ಯಗತಗೊಳಿಸಿದ್ದಾರೆ ಎಂದು ಬಳ್ಳಾರಿ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ ಡಾ.ಕೆ.ಎನ್.ಬಸವರಾಜ ಅವರು ತಿಳಿಸಿದ್ದಾರೆ.

# ಉಚಿತ ಹೊಲಿಗೆ ತರಬೇತಿಗೆ ಅರ್ಜಿ ಆಹ್ವಾನ

**ಹಾವೇರಿ:** ಉತ್ತರ ಕನ್ನಡ ಜಿಲ್ಲೆ ಹಳಿಯಾಳ ಕೆನರಾ ಬ್ಯಾಂಕ್ ದೇಶಪಾಂಡೆ ಆರ್ ಸೆಟ್ ತರಬೇತಿ ಸಂಸ್ಥೆಯಲ್ಲಿ ನಿರುದ್ಯೋಗಿ ಮಹಿಳೆಯರಿಗಾಗಿ 31 ದಿನಗಳ ಉಚಿತ ಹೊಲಿಗೆ ತರಬೇತಿ ಆಯೋಜಿಸಿದೆ.

ತರಬೇತಿಯು ಊಟ ಮತ್ತು ವಸತಿಯೊಂದಿಗೆ ಉಚಿತವಾಗಿರುತ್ತದೆ. ಅಭ್ಯರ್ಥಿಗಳು 18 ರಿಂದ 50ವರ್ಷದೊಳಗಿರಬೇಕು. ಗ್ರಾಮೀಣ ಭಾಗದ ನಿರುದ್ಯೋಗಿ ಯುವತಿಯರಿಗೆ ಆದ್ಯತೆ ನೀಡಲಾಗುವುದು. ಆಸಕ್ತ ಅಭ್ಯರ್ಥಿಗಳು ತಮ್ಮ ಸ್ವ ವಿವರಗಳೊಂದಿಗೆ ದಿನಾಂಕ 30-11-2025 ರೊಳಗಾಗಿ ನಿರ್ದೇಶಕರು, ಕೆನರಾ ಬ್ಯಾಂಕ್ ದೇಶಪಾಂಡೆ ಆರ್‌ಸೆಟ್ ಸಂಸ್ಥೆ, ಹಳಿಯಾಳ ಉತ್ತರ ಕನ್ನಡ ಜಿಲ್ಲೆ ಈ ವಿಳಾಸಕ್ಕೆ ಸಲ್ಲಿಸಬೇಕು

ಹೆಚ್ಚಿನ ಮಾಹಿತಿಗಾಗಿ ಮೊ. 9844796998, 9632225123 ಹಾಗೂ 9482188780 ಸಂಪರ್ಕಿಸಲು ಕೋರಲಾಗಿದೆ.

# ಅರ್ಜಿ ಆಹ್ವಾನ

**ಗದಗ :** ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯಿಂದ ಗದಗ ವಿಭಾಗದ ವ್ಯಾಪ್ತಿಗೆ ಬರುವ ವಿಭಾಗೀಯ ಕಾರ್ಯಾಗಾರ ಹಾಗೂ ಗದಗ, ರೋಣ, ಲಕ್ಷ್ಮೇಶ್ವರ, ನರಗುಂದ, ಮುಂಡರಗಿ, ಬೆಟಗೇರಿ, ಗಜೇಂದ್ರಗಡ, ಶಿರಹಟ್ಟಿ ಘಟಕಗಳಲ್ಲಿ ಫಿಟ್ಟರ್, ಇಲೆಕ್ಟ್ರಿಶಿಯನ್, ಮೆಕ್ಯಾನಿಕ್ (ಡಿಸೇಲ್) ವೃತ್ತಿಗಳಲ್ಲಿ ಅರ್ಹ ಅಭ್ಯರ್ಥಿಗಳಿಂದ ಒಂದು ವರ್ಷದ ಶಿಶಿಕ್ಷು ತರಬೇತಿಗೆ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ಅಭ್ಯರ್ಥಿಗಳು ತಿwww.apprenticeshipindia.gov.in ನಲ್ಲಿ ನೊಂದಣಿ ಮಾಡಿಕೊಂಡು, ಆನ್‌ಲೈನ್ ಮೂಲಕ ಡಿ.5 ರೊಳಗೆ ಅರ್ಜಿ ಸಲ್ಲಿಸಬಹುದಾಗಿದೆ

## ಎನ್.ಎಸ್.ವಿ ಪಾಕ್ಷಿಕ ಆಚರಣೆ

**ಗದಗ :** ಕುಟುಂಬ ಯೋಜನೆಯಲ್ಲಿ ಪುರುಷರ ಸಂತಾನ ನಿರೋಧ ಶಸ್ತ್ರ ಚಿಕಿತ್ಸೆಯು ಅತಿ ಸುರಕ್ಷಿತ ಸರಳ ಮತ್ತು ಪರಿಣಾಮಕಾರಿ ಶಾಶ್ವತ ಗರ್ಭ ನಿರೋಧಕವೆಂದು ಸಾಬೀತಾಗಿದ್ದು ಇಲಾಖೆಯು ಗುರ್ತಿಸಲ್ಪಡುತ್ತಿರುವ ಆರ್ಹ ಪುರುಷರು ಪುರುಷ ನಿರೋಧ ಶಸ್ತ್ರಚಿಕಿತ್ಸೆಗೆ ಮುಂದಾಗ ಬೇಕೆಂದು ಗದಗ ತಾಲೂಕ ಆರೋಗ್ಯ ಶಿಕ್ಷಣಾಧಿಕಾರಿ ಡಾ. ರಾಜೇಂದ್ರ ಎಸ್ ಗಡಾದ ಹೇಳಿದರು.

ಮಂಗಳವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಆಸ್ಪತ್ರೆ ಆಶ್ರಯದಲ್ಲಿ ದಂಡಪ್ಪ ಮಾನ್ವಿ ಹೆರಿಗೆ ಆಸ್ಪತ್ರೆಯಲ್ಲಿ ಏರ್ಪಡಿಸಿದ್ದ ಎನ್.ಎಸ್.ವಿ ಪಾಕ್ಷಿಕ 2025ರ ಸಮಾರಂಭದಲ್ಲಿ ಮಾತನಾಡಿದರು. ನಂತರ ಸಾರ್ವಜನಿಕರು ಕೇಳಿದ ಅನೇಕ ಪ್ರಶ್ನೆಗಳಿಗೆ ಉತ್ತರಿಸಿದರು. ಎನ್ ಎಸ್ ವಿ ಅಂದರೆ ಪುರುಷ ಸಂತಾನ ಹರಣ ಶಸ್ತ್ರಚಿಕಿತ್ಸೆಯ ಬಗೆಗೆ ಇರುವ ತಪ್ಪು ಗ್ರಹಿಕೆಗಳನ್ನು ಪರಿಹರಿಸುತ್ತಾ ಕುಟುಂಬ ಯೋಜನೆಯಲ್ಲಿ ಸಮಾನ ಭಾಗವಹಿಸುವಿಕೆಯ ಮೇಲೆ ಕೇಂದ್ರೀಕರಿಸುವುದು ಅವಶ್ಯವಿರುತ್ತದೆ ಎಂದರು.

ಬೂದೇಶ್ ಸಿದ್ದನಗೌಡರ ಸ್ವಾಗತಿಸಿದರು ಗುರುರಾಜ, ಕೋಟ್ಯಾಳ ನಿರೂಪಿಸಿದರು, ಪುಷ್ಪಾ ಮಡಿವಾಳರ. ವಂದಿಸಿದರು.

ಕಾರ್ಯಕ್ರಮದಲ್ಲಿ ತಾಲೂಕ ಹಿರಿಯ ಆರೋಗ್ಯ ಸುರಕ್ಷತಾಧಿಕಾರಿ ಎಸ್ ಎಸ್ ಕಟ್ಟಿಮನಿ, ಶೈಲಾ ಮಳೇಕರ ವಿವಿಧ ತಾಲೂಕಿನ ಪ್ರಾಥಮಿಕ ಆರೋಗ್ಯ ಸುರಕ್ಷತೆ ಅಧಿಕಾರಿಗಳು ಆಶಾ ಕಾರ್ಯಕರ್ತರು ಆರೋಗ್ಯ ಇಲಾಖೆಯ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

## ನಿಗಮದ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ

**ದಾವಣಗೆರೆ :** ಕರ್ನಾಟಕ ಭೋವಿ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ರಾಮಪ್ಪ.ಎಂ ಅವರ ಅಧ್ಯಕ್ಷತೆಯಲ್ಲಿ ಡಿಸೆಂಬರ್ 1 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿಗಳ ಸಮನ್ವಯದೊಂದಿಗೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಿಗಮದ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯನ್ನು ಆಯೋಜಿಸಲಾಗಿದೆ ಎಂದು ನಿಗಮದ ವ್ಯವಸ್ಥಾಪಕರು ತಿಳಿಸಿದ್ದಾರೆ.

## ಸಹಕಾರ ಸಂಘಗಳ ಗಮನಕ್ಕೆ

**ಗದಗ :** ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಹಕಾರ ಸಂಘಗಳು ಆಯಾ ಆರ್ಥಿಕ ಸ್ಪರ್ಷ ಮುಗಿದ ಕೂಡಲೇ ಲೆಕ್ಕಪರಿಶೋಧಕರಿಂದ ಲೆಕ್ಕಪರಿಶೋಧನೆಯನ್ನು ಜರುಗಿಸಿ ಸಕ್ಷಮ ಪ್ರಾಧಿಕಾರಿಗಳಿಗೆ ವರದಿ ಮಾಡಬೇಕಾಗಿರುತ್ತದೆ. ಆದರೆ, ಗದಗ ಜಿಲ್ಲೆಯಲ್ಲಿ ಒಟ್ಟು 467 'ಸಹಕಾರ ಸಂಘಗಳು ಬಹಳ ವರ್ಷಗಳಿಂದ ಲೆಕ್ಕಪರಿಶೋಧನೆಯನ್ನು ಜರುಗಿಸಿರುವುದಿಲ್ಲ. ಅಂತಹ ಸಹಕಾರ ಸಂಘಗಳ ಪಟ್ಟಿಯನ್ನು ಸಹಕಾರ ಸಂಘಗಳ ಉಪನಿಬಂಧಕರ ಕಚೇರಿ ಹಾಗೂ ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಉಪನಿರ್ದೇಶಕರ ಕಚೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲಾಗಿದೆ, ಸಹಕಾರ ಸಂಘಗಳು ಲೆಕ್ಕಪರಿಶೋಧನೆಯನ್ನು ಅತೀ ಜರೂರಾಗಿ ಜರುಗಿಸಿ ಸಕ್ಷಮ ಪ್ರಾಧಿಕಾರಿಗಳಿಗೆ ವರದಿ ನೀಡಬೇಕೆಂದು ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಉಪನಿರ್ದೇಶಕ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.ಹೆಚ್ಚಿನ ಮಾಹಿತಿಗಾಗಿ 9591278914, 9845651265, 9886026261, 9481125152 ಸಂಪರ್ಕಿಸಬಹುದಾಗಿದೆ.

# ದಾವಣಗೆರೆ ಜಿಲ್ಲಾ ಮಾದಿಗ ಮಹಾಸಭಾಕ್ಕೆ ನೂತನ ಪದಾಧಿಕಾರಿಗಳ ಆಯ್ಕೆ

**ದಾವಣಗೆರೆ:** ದಾವಣಗೆರೆ ಜಿಲ್ಲಾ ಮಾದಿಗ ಮಹಾಸಭಾವನ್ನು ಜಿಲ್ಲಾ ಸಂಘ ಸಂಸ್ಥೆಗಳ ನೋಂದಣಾಧಿಕಾರಿಗಳ ಕಚೇರಿಯಲ್ಲಿ ನೋಂದಾಯಿಸಲು ನಿರ್ಧರಿಸಿ 69 ಜನರ ಕಾರ್ಯಕಾರಿ ಸಮಿತಿಯನ್ನು ನೋಂದಣಿ ಮಾಡಿಸಿದ್ದು, ನೂತನ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಗಿದೆ ಎಂದು ದಾವಣಗೆರೆ ಜಿಲ್ಲಾ ಮಾದಿಗ ಮಹಾಸಭಾದ ಅಧ್ಯಕ್ಷ ಬಿ.ಹೆಚ್.ವೀರಭದ್ರಪ್ಪ ತಿಳಿಸಿದರು.

ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನೋಂದಣಿಗೊಂಡ ನೂತನ ಸಮಿತಿಗೆ ನಿವೃತ್ತ ಎಸ್ಪಿ ರವಿನಾರಾಯಣ್ ಗೌರವಾಧ್ಯಕ್ಷರಾಗಿ, ಬಿ.ಹೆಚ್. ವೀರಭದ್ರಪ್ಪ ಅಧ್ಯಕ್ಷರಾಗಿ, ಉಪಾಧ್ಯಕ್ಷರುಗಳಾಗಿ ಎಲ್.ಎಂ. ಹನುಮಂತಪ್ಪ, ಪೇಪರ್ ಚಂದ್ರಪ್ಪ, ನಲ್ಲೂರು ರೇಖರಪ್ಪ, ಹೆಚ್. ಮಲ್ಲೇಶ್ ಹರಿಹರ, ಕುಣೆಬೆಳಕೆರೆ ಸುರೇಶ್, ಪ್ರಧಾನ ಕಾರ್ಯದರ್ಶಿಯಾಗಿ ಹೆಗ್ಗೆರೆ ರಂಗಪ್ಪ, ಸಹ ಕಾರ್ಯದರ್ಶಿಗಳಾಗಿ ಸಿ. ಬಸವರಾಜ, ಕಡತಿ ಅಂಜಿನಪ್ಪ, ಕಣ್ಣಾಳ್ ಆಂಜಿನಪ್ಪ, ಜಿ. ರಾಕೇಶ್, ಆಯ್ಕೆ ಆಗಿದ್ದಾರೆ.

ದಾವಣಗೆರೆ ಜಿಲ್ಲಾ ಮಾದಿಗ ಮಹಾಸಭಾದ ಎಲ್ಲಾ ಪದಾಧಿಕಾರಿಗಳ ಪದಗ್ರಹಣ ಸಮಾರಂಭವನ್ನು ನವೆಂಬರ್ 26ರ ಬುಧವಾರ ಮಧ್ಯಾಹ್ನ 3 ಗಂಟೆಗೆ ದಾವಣಗೆರೆ ಪಿ.ಜಿ.ಬಡಾವಣೆಯ ಚೇತನ ಹೋಟೇಲ್‌ನ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ. ಮಾದಿಗ ಸಮುದಾಯದ ಗಣ್ಯರು ಭಾಗವಹಿಸುವ ಈ ಸಮಾರಂಭದಲ್ಲಿ ಮಹಾಸಭಾದ ಪದಾಧಿಕಾರಿಗಳಿಗೆ ನೇಮಕಾತಿ ಆದೇಶ ಪತ್ರಗಳನ್ನು ವಿತರಿಸಲಾಗುವುದು.

ಇದಲ್ಲದೇ 1949ರ ನವೆಂಬರ್ 26ರಂದು ಡಾ.ಬಿ.ಆರ್. ಅಂಬೇಡ್ಕರ್ ನೇತೃತ್ವದ ಸಂವಿಧಾನ ರಚನಾ ಸಮಿತಿ, ಆಗಿನ ರಾಷ್ಟ್ರಪತಿ ಡಾ.ಬಾಬುರಾಜೇಂದ್ರ ಪ್ರಸಾದ್ ಅವರಿಗೆ ಭಾರತದ ಸಂವಿಧಾನವನ್ನು ಸಮರ್ಪಿಸಿತು.

ಸುಮಾರು ಮೂರು ವರ್ಷಗಳ ಕಾಲ ರಚಿಸಲ್ಪಟ್ಟ ಈ ಪಲ್ಲಟ್ಟ ಈ ಸಂವಿಧಾನವನ್ನು ಧಾನವನ್ನು 1950ರ ಜನವರಿ 26ರಂದು ಸಂಸತ್ತಿನಲ್ಲಿ ಅಂಗೀಕರಿಸಿ ಆ ನ್ನೆಲೆಯಲ್ಲಿ ಇದೇ ಸಂದರ್ಭದಲ್ಲಿ ಈ ಹಿನ್ನೆಲೆಯಲ್ಲಿ ದಿನವನ್ನು ಗಣರಾಜ್ಯ ದಿನವನ್ನಾಗಿ ಘೋಷಿಸಲಾಯಿತು. ಸಂವಿಧಾನ ಸಮರ್ಪಣಾ ದಿನಾಚರಣೆಯನ್ನು ಆಚರಿಸಲಾಗುವುದು ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ರವಿ ನಾರಾಯಣ್, ಹೆಚ್. ಮಲ್ಲೇಶ್, ಹೆಗ್ಗೆರೆ ರಂಗಪ್ಪ, ಸಿ.ಬಸವರಾಜ್, ಮೈಲಪ್ಪ ಇತರರು ಇದ್ದರು.

# ನ 30 ರಂದು ಜಿಲ್ಲಾ ಮಟ್ಟದ ಚದರಂಗ ಸ್ಪರ್ಧೆ : ದಿನೇಶ್ ಕೆ ಶೆಟ್ಟಿ



**ದಾವಣಗೆರೆ :** ನವಂಬರ್ 30 ಭಾನುವಾರದಂದು ದಾವಣಗೆರೆ ಜಿಲ್ಲಾ ಚೆಸ್ ಅಸೋಸಿಯೇಷನ್ ವತಿಯಿಂದ ಜಿಲ್ಲಾ ಮಟ್ಟ ಚದುರಂಗ ಸ್ಪರ್ಧೆಯನ್ನು ನಗರದ ಎವಿಕೆ ಕಾಲೇಜ್ ರಸ್ತೆಯಲ್ಲಿರುವ ಗುರುಭವನದಲ್ಲಿ ಏರ್ಪಡಿಸಲಾಗಿದೆ ಎಂದು ಅಧ್ಯಕ್ಷರಾದ ದಿನೇಶ್ ಕೆ ಶೆಟ್ಟಿ ತಿಳಿಸಿದರು

ಈ ಸ್ಪರ್ಧೆಯಲ್ಲಿ ದಾವಣಗೆರೆ ಜಿಲ್ಲೆಯ ಸ್ಪರ್ಧಾಳುಗಳಿಗೆ ಮಾತ್ರ ಪ್ರವೇಶ ಈ ಪಂದ್ಯಾವಳಿಯಲ್ಲಿ 16 ವರ್ಷದೊಳಗಿನ ಹಾಗೂ ಹದಿನಾರು ವರ್ಷದ ಮೇಲ್ಪಟ್ಟು ಎರಡು ವಿಭಾಗಗಳಲ್ಲಿ ಸ್ಪರ್ಧೆಯನ್ನು ನಡೆಸಲಾಗುವುದು ಎರಡು ವಿಭಾಗಗಳಲ್ಲಿ ಪ್ರತ್ಯೇಕವಾಗಿ ತಲ ಮೊದಲ ಬಹುಮಾನ 2500/– ಟ್ರೋಫಿ ಎರಡನೇ ಬಹುಮಾನ 2000/– ಟ್ರೋಫಿ ಮೂರನೇ ಬಹುಮಾನ 1500/– ಟ್ರೋಫಿ ನಾಲ್ಕನೇ ಬಹುಮಾನ 1000/– ಟ್ರೋಫಿ 5ನೇ ಬಹುಮಾನ 500/– ಟ್ರೋಫಿ 5 ರಿಂದ 10ನೇ ಸ್ಥಾನದವರೆಗೆ ಪಾರಿತೋಷಕ ನೀಡಲಾಗುವುದು ಹಾಗೂ ಹದಿನಾರು ವರ್ಷದ ಒಳಗಿನ ವಿಭಾಗಗಳಲ್ಲಿ 08 ವರ್ಷದೊಳಗಿನ ಹಾಗೂ 10 ವರ್ಷದೊಳಗಿನ 12 ವರ್ಷದೊಳಗಿನ 14 ವರ್ಷದೊಳಗಿನ ವಿಭಾಗದವರಿಗೆ ಪ್ರತ್ಯೇಕವಾಗಿ ತಲಾ ಐದು ಸ್ಪರ್ಧಾಳುಗಳಿಗೆ ವಿಶೇಷ ಟ್ರೋಫಿ ವಿತ 'ರಿಸಲಾಗುವುದುಕಾರ್ಯಕ್ರಮವು ಭಾನುವಾರ ಬೆಳಿಗ್ಗೆ 10.30 ಗಂಟೆಗೆ ಪ್ರಾರಂಭವಾಗುವುದು ಹಾಗೂ ಸಂಜೆ 5:00 ಗಂಟೆಗೆ ಪ್ರಶಸ್ತಿ ಪ್ರಧಾನ ಸಮಾರಂಭ ನಡೆಯುವುದು ಹೆಸರನ್ನು ನೋಂದಾಯಿಸುವರು ಕಾರ್ಯದರ್ಶಿಗಳಾದ ಯುವರಾಜ್ (9945613469,7259310197) ಸಂಪರ್ಕಿಸಿ ಹೆಸರನ್ನು ನೋಂದಾಯಿಸಲು ತಿಳಿಸಿದರು.

# ರಾಷ್ಟ್ರೀಯ ವಾರ್ಷಿಕ ತಾಂತ್ರಿಕ ಸಮ್ಮೇಳನ ಮತ್ತು ಬೆಳ್ಳಿಹಬ್ಬದ ಆಚರಣೆ



**ಶಿವಮೊಗ್ಗ :** ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಬೀದರ ಇದರ ಅಂಗ ಸಂಸ್ಥೆಯಾದ ಪಶುವೈದ್ಯಕೀಯ ಮಹಾವಿದ್ಯಾಲಯ ಶಿವಮೊಗ್ಗದಲ್ಲಿ ಭಾರತೀಯ ಪಶುವೈದ್ಯಕೀಯ ಔಷಧ ಶಾಸ್ತ್ರಜ್ಞರ ಮತ್ತು ವಿಷಶಾಸ್ತ್ರಜ್ಞರ ಸಂಘದ (ಐಎಸ್ವಿಪಿಟಿ) ಬೆಳ್ಳಿಹಬ್ಬದ ಸಂದರ್ಭದಲ್ಲಿ 25 ನೇ ರಾಷ್ಟ್ರೀಯ ವಾರ್ಷಿಕ ತಾಂತ್ರಿಕ ಸಮ್ಮೇಳನವನ್ನು"ಜಾನುವಾರುಗಳ ಆರೋಗ್ಯದ ಸವಾಲುಗಳನ್ನು ಎದುರಿಸಲು ನವೀನ ಪಶುವೈದ್ಯಕೀಯ ಔಷಧಗಳ ತುರ್ತು ಅಗತ್ಯ" ಈ ವಿಷಯದ ಕುರಿತು ದಿನಾಂಕ: 25–28 ನವೆಂಬರ್ 2025 ರವರೆಗೆ 3 ದಿನಗಳ ಕಾಲ ಪಶು ವೈದ್ಯಕೀಯ ಔಷಧಶಾಸ್ತ್ರ ಮತ್ತು ವಿಷಶಾಸ್ತ್ರ ವಿಭಾಗವು ಆಯೋಜಿಸಿರುತ್ತದೆ. 25.11.2025 ರಂದು ನಡೆದ ಉದ್ಘಾಟನಾ ಸಮಾರಂಭದಲಿ ಪಶು ವೈದ್ಯಕೀಯ ಮಹಾವಿದ್ಯಾಲಯ, ಶಿವಮೊಗ್ಗದ ಡೀನ್ರವರಾದ ಡಾ. ಎನ್. ಪ್ರಕಾಶ್ ರವರು ಸ್ವಾಗತ ಭಾಷಣವನ್ನು ಮಾಡುತ್ತಾ ಜಾನುವಾರುಗಳ ಆರೋಗ್ಯದ ಕುರಿತು ನೂತನ ಔಷಧಗಳ ಆವಿಷ್ಕಾರದ ಕುರಿತು ಅವಶ್ಯಕತೆಯ ಬಗ್ಗೆ ತಿಳಿಸಿದರು. ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಕುಲಪತಿಗಳಾದ, ಡಾ. ಕೆ.ಸಿ ವೀರಣ್ಣರವರು ಸಮಾರಂಭವನ್ನು ಉದ್ಘಾಟಿಸಿ ಸಭೆಯನ್ನು ಉದ್ದೇಶಿಸಿ ಮಾತನಾಡಿ ಸಸ್ಯ ಮೂಲದಔಷಧಗಳ ಮಹತ್ವ ಮತ್ತು ಈ ಕುರಿತು ಹೆಚ್ಚಿನ ಆವಿಷ್ಕಾರಗಳ ಕುರಿತು ಕುರಿತು ತಿಳಿಸಿದರು. ಗೌರವ ಅತಿಥಿಗಳು ಮತ್ತು ಖ್ಯಾತ ವಿಷಶಾಸ್ತ್ರಜ್ಞರಾದ ಡಾ. ಕೆ. ಎಸ್. ರಾವ್ರವರು ಸಭೆಯನ್ನು ಉದ್ದೇಶಿಸಿ ಯುವ ಔಷಧ ಶಾಸ್ತ್ರಜ್ಞರು ಔಷಧ ಉಧ್ಯಮಗಳಲ್ಲಿ ಉದ್ಯೋಗದ ಅವಕಾಶದ ಕುರಿತ್ತು ತಿಳಿಸಿದರು. ಪ್ರಧಾನ ಕಾರ್ಯದರ್ಶಿಗಳಾದ ಡಾ. ಅತುಲ್ ಪ್ರಕಾಶ್ ರವರು ಐಎಸ್ವಿಪಿಟಿ ವಾರ್ಷಿಕ ವರದಿಯನ್ನು ಮಂಡಿಸಿದರು. ತದನಂತರ ಭಾರತೀಯ ಪಶು ವೈದ್ಯಕೀಯ ಔಷಧ ಶಾಸ್ತ್ರಜ್ಞರ ಮತ್ತು ವಿಷಶಾಸ್ತ್ರಜ್ಞರ ಸಂಘದ ಅಧ್ಯಕ್ಷರಾದ ಡಾ: ಸತೀಶ್ ಕೆ. ಗರ್ಗ್ರವರು ಅಧ್ಯಕೀಯ ಭಾಷಣದಲ್ಲಿ ಶಿವಮೊಗ್ಗದ ಐತಿಹಾಸಿಕ ಮಹತ್ವ ತಿಳಿಸುತ್ತಾ ಮುಂದಿನ ಪೀಳಿಗೆಗೆ ಈ ರೀತಿಯ ತಾಂತ್ರಿಕ ವಿಚಾರ ಸಂಕಿರಣದ ಅವಶ್ಯಕತೆಯ ಬಗ್ಗೆ ತಿಳಿಸಿದರು. ಈ ಕಾರ್ಯಕ್ರಮದ ಸಂಘಟನಾ ಕಾರ್ಯದರ್ಶಿಗಳಾದ ಡಾ. ಎನ್. ಬಿ, ಶ್ರೀಧರರವರು ಸಭೆಗೆ ವಂದನಾರ್ಪಣೆಯನ್ನು ಸಲ್ಲಿಸಿದರು.

ಈ ರಾಷ್ಟ್ರೀಯ ಸಮ್ಮೇಳನದಲ್ಲಿ ದೇಶದ ವಿವಿಧ ಭಾಗಗಳಿಂದ ಸುಮಾರು 210 ಕ್ಕಿಂತ ಹೆಚ್ಚು ವಿಜ್ಞಾನಿಗಳು, ಅಧ್ಯಾಪಕರು, ಸಂಶೋಧಕರು, ಕೈಗಾರಿಕಾ ತಜ್ಞರು ಹಾಗೂ ಸ್ನಾತಕೋತ್ತರ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಕೇಂದ್ರ ಸರ್ಕಾರದ ವಿರುದ್ಧ ರಾಮ್ಕೋ ಇಂಡಸ್ಟ್ರೀಸ್ ಕಾರ್ಮಿಕ ಆಕ್ರೋಶ



**ಹರಿಹರ :** ಜಂಟಿ ಕಾರ್ಮಿಕ ಸಂಘಟನೆಗಳ ಕರೆಯ ಮೇರೆಗೆ ರಾಮ್ಕೋ ಇಂಡಸ್ಟ್ರೀಸ್ ಕಾರ್ಮಿಕರು ಕೇಂದ್ರ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು

ಇಂದು ಹರಿಹರದ ಕರೂರಿನಲ್ಲಿರುವ ರಾಮ್ಕೋ ಇಂಡಸ್ಟ್ರೀಸ್ ನೌಕರರು ಕಾರ್ಖಾನೆಯ ಗೇಟ್ ಮುಂಭಾಗದಲ್ಲಿ ಕೇಂದ್ರ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗುವ ಮೂಲಕ 'ಶ್ರಮ ಸಂಹಿತೆ –2025' ಕರಡು ಪ್ರತಿಗಳನ್ನು ಸುಟ್ಟು ಪ್ರತಿಭಟಿಸಿದರು.

# ಅರ್ಜಿ ದಿನಾಂಕ ವಿಸ್ತರಣೆ

**ಗದಗ :** ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಮಕ್ಕಳು ಮತ್ತು ಯುವ ಜನರ ಕಲಾಪ್ರತಿಭೆಯನ್ನು ಗುರುತಿಸಿ ಅವರಿಗೆ ಉತ್ತೇಜನ ನೀಡುವ ಮತ್ತು ಕಲಾ ನೈಪುಣ್ಯ ವೃದ್ಧಿಗೊಳಿಸುವಂತೆ ಪ್ರೋತ್ಸಾಹಿಸಲು ಕಲಾ ಪ್ರತಿಭೋತ್ಸವ ಕಾರ್ಯಕ್ರಮ ಆಯೋಜಿಸಲು ಅರ್ಜಿ ಆಹ್ವಾನಿಸಲಾಗಿದೆ.ಆಸಕ್ತರು ಡಿ.1ರೊಳಗೆ ಅರ್ಜಿಯನ್ನು ಸಲ್ಲಿಸಬಹುದಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕಡಾ.ಬಸವರಾಜ ವಿ ಬಳ್ಳಾರಿ ತಿಳಿಸಿರುತ್ತಾರೆ.

### ಕಾನೂನು ಅರಿವು ಕಾರ್ಯಕ್ರಮದಲ್ಲಿ ನ್ಯಾಯಾಧೀಶೆ ಕೆ.ಜಿ.ಶಾಂತಿ ಹೇಳಿಕೆ

# ಮಹಿಳೆಯರು ಕೆಲಸದ ಸ್ಥಳದಲ್ಲಿ ಉತ್ತಮ ಭಾಂದವ್ಯ ಹೊಂದಿರಬೇಕು



**ಬಳ್ಳಾರಿ:** ಮಹಿಳೆಯರು ತಾವು ಕೆಲಸ ಮಾಡುವ ಸ್ಥಳ, ಕಚೇರಿ ಮತ್ತು ಮನೆಯಲ್ಲೂ ಉತ್ತಮ ಭಾಂದವ್ಯ ಹೊಂದಿರಬೇಕು ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರೂ ಆಗಿರುವ ಕೆ.ಜಿ.ಶಾಂತಿ ಅವರು ಹೇಳಿದರು.

ಜಿಲ್ಲಾ ನ್ಯಾಯಾಂಗ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಇವರ ಸಂಯುಕ್ತಾಶ್ರಯದಲ್ಲಿ ನಗರದ ತಾಳೂರು ರಸ್ತೆಯ ಹೊಸ ನ್ಯಾಯಾಲಯದ ಸಭಾಂಗಣದಲ್ಲಿ ಮಂಗಳವಾರ ಏರ್ಪಡಿಸಿದ್ದ 'ಮಹಿಳೆಯರ ಮೇಲಿನ ದೌರ್ಜನ್ಯ ನಿರ್ಮೂಲನೆಗೆ ಅಂತರಾಷ್ಟ್ರೀಯ ದಿನ' ಅಂಗವಾಗಿ ಕಾನೂನು ಅರಿವು ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಮಹಿಳೆಯರು ಮತ್ತು ಪುರುಷರು ಪರಸ್ಪರ ಗೌರವ ಮನೋಭಾವನೆಯಿಂದ ಕಾಣಬೇಕು. ಮಹಿಳೆಗೆ ಸಮಸ್ಯೆ ಉಂಟಾದಲ್ಲಿ ಅವರ ರಕ್ಷಣೆಗಾಗಿ ಮಹಿಳಾ ದೌರ್ಜನ್ಯ ನಿರ್ಮೂಲನಾ ಕಾಯ್ದೆ ಇದ್ದು, ಇದರ ಅರಿವು ಹೊಂದಬೇಕು ಎಂದು ಸಲಹೆ ನೀಡಿದರು.

ಜಿಲ್ಲಾ ವಕೀಲರ ಸಂಘದ ವಕೀಲರಾದ ಶಿವಲೀಲ ಅವರು ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸಿ ಮಾತನಾಡಿ, 10 ಜನಕ್ಕಿಂತ ಹೆಚ್ಚು ಮಹಿಳೆಯರು ಕೆಲಸ ಮಾಡುವ ಸ್ಥಳದಲ್ಲಿ ಮಹಿಳಾ ಆಂತರಿಕ ದೂರು ಸಮಿತಿ ಇರಬೇಕು. ಮಹಿಳೆ ತನ್ನ ಮೇಲೆ ದೈಹಿಕ, ಮಾನಸಿಕ ಸೇರಿದಂತೆ ಯಾವುದೇ ರೀತಿ ದೌರ್ಜನ್ಯವಾದಲ್ಲಿ ಮೂರು ತಿಂಗಳೊಳಗೆ ಆಂತರಿಕ ದೂರು ಸಮಿತಿಗೆ ದೂರು ಸಲ್ಲಿಸಬೇಕು. ಬಳಿಕ ಸಮಿತಿ ಪರಿಶೀಲನಾ ಕ್ರಮ ಕೈಗೊಳ್ಳಲಾಗುತ್ತದೆ. ಇಲ್ಲಿ ಸೌಹಾರ್ದಕ್ಕೆ ರಾಜಿ ಆಗಬಹುದು ಆದರೆ ಹಣಕ್ಕಾಗಿ ಅಲ್ಲ, ಪರಸ್ಪರ ಗೌರವದಿಂದ ಹೊಂದಿಕೊಂಡು ಕೆಲಸ ಮಾಡಬೇಕು ಎಂದರು.

ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದಿಂದ ಬಡ ಜನತೆಗೆ ಇರುವ ಕಾನೂನು ಸೇವೆಗಳ ಮಾಹಿತಿ ಕುರಿತ ವೀಡಿಯೋ ಚಿತ್ರಣ ಪ್ರದರ್ಶಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ ಸೇರಿದಂತೆ ಜಿಲ್ಲಾ ನ್ಯಾಯಾಲಯದ ಎಲ್ಲಾ ನ್ಯಾಯಾಧೀಶರು ಹಾಗೂ ನ್ಯಾಯಾಲಯದ ಅಧಿಕಾರಿ–ಸಿಬ್ಬಂದಿ ವರ್ಗ ಉಪಸ್ಥಿತರಿದ್ದರು.

# ಎಚ್.ಪಿ.ಎಫ್. ಮತ್ತು ಗ್ರಾಸಿಮ್ ನೌಕರ ಪ್ರತಿಭಟನೆ



**ದಾವಣಗೆರೆ :** ಮೋದಿ ನೇತೃತ್ವದ ಕೇಂದ್ರದ ಬಿ.ಜೆ.ಪಿ ಸರ್ಕಾರ ಕಾರ್ಮಿಕ ವಿರೋಧಿ ಕಾರ್ಮಿಕ ಸಂಹಿತೆಗಳನ್ನು ಏಕಪಕ್ಷೀಯವಾಗಿ ದಿನಾಂಕ 21.11.2025 ರಂದು ಅನುಷ್ಠಾನಮಾಡಿದೆಯಲ್ಲದೇ ಶ್ರಮ ಸಂಹಿತೆ 2025 ಕರಡು ರೂಪಿಸಿದೆ, ಈ ಕೇಂದ್ರ ಸರ್ಕಾರದ ಜನ ವಿರೋಧಿ ನಡೆಯನ್ನು ಬಿ.ಎಂ.ಎಸ್. ಕಾರ್ಮಿಕ ಸಂಘಟನೆಯನ್ನು ಹೊರತುಪಡಿಸಿ 10 ಕೇಂದ್ರ ಕಾರ್ಮಿಕ ಸಂಘಟನೆಗಳು ಈ ಸಂಹಿತೆಗಳನ್ನು ಜಾರಿ ಮಾಡದಂತೆ ವಿರೋಧಿಸಿವೆ, ಇದು ದೇಶದ ದುಡಿಯುವ ಜನರ ವಿರುದ್ಧ ಕೇಂದ್ರ ಸರ್ಕಾರ ಮಾಡಿರುವ ವಂಚನೆ, ಈ ಹಿಂದೆ ಕಾರ್ಮಿಕರಿಗೆ ಇದ್ದಂತಹ ಎಂಟು ಗಂಟೆಯ ಕೆಲಸ 12 ಗಂಟೆಗೆ ಹೆಚ್ಚಿಸಲಾಗಿದೆ ಎಂದು ಸಿ.ಐ.ಟಿ.ಯು. ರಾಜ್ಯ ಕಾರ್ಯದರ್ಶಿ ಆನಂದರಾಜು ಕೆ.ಹೆಚ್. ಹೇಳಿದರು, ಎಚ್.ಪಿ.ಎಫ್. ನೌಕರರ ಸಂಘದ ಅಧ್ಯಕ್ಷರಾದ ವಿ ಜೆ ಕೆ ನಾಯರ್ ರವರು ಮಾತನಾಡಿ ಕಾರ್ಮಿಕ ಸಂಹಿತೆಗಳು ಸಂಪೂರ್ಣ ಕಾರ್ಮಿಕರ ಹಕ್ಕುಗಳನ್ನು ಕಸಿಯುತ್ತಿದೆಯಲ್ಲದೇ ಈ ಸಂಹಿತೆಗಳು ಅನಿಯಂತ್ರಿತ ಮತ್ತು ಪ್ರಜಾಪ್ರಭುತ್ವ ವಿರೋಧಿ ಆಗಿದ್ದು ಮಾಲೀಕರ ಪರವಾಗಿವೆ, ಈ ನಾಲ್ಕು ಕಾರ್ಮಿಕ ಸಂಹಿತೆಗಳನ್ನು ತಕ್ಷಣ ಕೇಂದ್ರ ಸರ್ಕಾರವು ವಾಪಸ್ ಪಡೆಯಬೇಕು ಅಲ್ಲಿಯವರೆಗೂ ನಮ್ಮ ಹೋರಾಟ ನಿರಂತರ ಎಂದು ಹೇಳಿದರು. ಕೇಂದ್ರ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗುವ ಮೂಲಕ 'ಶ್ರಮ ಸಂಹಿತೆ –2025' ಕರಡು ಪ್ರತಿಗಳನ್ನು ಸುಟ್ಟು ಪ್ರತಿಭಟಿಸಲಾಯಿತು.

ಪ್ರತಿಭಟನೆಯಲ್ಲಿ ಸಿ.ಐ.ಟಿ.ಯು. ವಿನ ಜಿಲ್ಲಾ ಸಂಚಾಲಕರಾದ ಮುದಿಮಲ್ಲನಗೌಡ, ಎಚ್.ಪಿ.ಎಫ್. ನೌಕರರ ಸಂಘದ ಮುಖಂಡರಾದ ಕೊಟ್ರೇಶ್ ಓಲೆಕಾರ್, ಮಂಜುನಾಥ್ ಎನ್, ಸತೀಶ್, ಮಾರುತಿ, ಬಸವರಾಜು, ಗ್ರಾಸಿಂ ನೌಕರರ ಸಂಘದ ಮುಖಂಡರಾದ ಶಿವಪ್ಪ ಕೊಲ್ಕರ್, ದೇವರಾಜ್, ಮಂಜುನಾಥ್ ವೈ ಆರ್, ಮತ್ತಿತರರು ಭಾಗವಹಿಸಿದ್ದರು.


## ಶೇ.50% ರಷ್ಟು ರಿಯಾಯಿತಿಯಲ್ಲಿ ದಂಡ ಪಾವತಿಗೆ ಅವಕಾಶ :ಆರ್‌ಟಿಓ

**ಶಿವಮೊಗ್ಗ:** ಸಾರಿಗೆ ಇಲಾಖೆಯಲ್ಲಿ ವಾಹನಗಳ ಸಂಚಾರ ನಿಯಮ ಉಲ್ಲಂಘನೆ ಪ್ರಕರಣಗಳನ್ನು ಶೇಕಡಾ 50% ರಷ್ಟು ದಂಡ ಪಾವತಿಸಿ ಇತ್ಯರ್ಥಪಡಿಸಿಕೊಳ್ಳಲು ಸರ್ಕಾರ ಅವಕಾಶ ಕಲ್ಪಿಸಿದೆ. ವಾಹನ ಮಾಲೀಕರು ತಮ್ಮ ವಾಹನದ ವಿರುದ್ಧ ದಾಖಲಾಗಿರುವ ಪ್ರಕರಣ ಸಂಬಂಧ ದಂಡ ಮೊತ್ತದ ಅರ್ಧದಷ್ಟು ಪಾವತಿ ಮಾಡಬಹುದಾಗಿದೆ. 1990–91 ರಿಂದ 2019–20 ರೊಳಗೆ ಪ್ರಾದೇಶಿಕ ಸಾರಿಗೆ ಕಛೇರಿ (ಆರ್.ಟಿ.ಓ) ಅಧಿಕಾರಿಗಳು ದಾಖಲಿಸಿರುವ ಪ್ರಕರಣಗಳು ಮಾತ್ರ ಶೇಕಡಾ 50% ರಷ್ಟು ದಂಡ ಪಾವತಿ ರಿಯಾಯಿತಿ ವ್ಯಾಪ್ತಿಗೆ ಒಳಪಡುತ್ತವೆ. ಶಿವಮೊಗ್ಗ ಜಿಲ್ಲಾ ವ್ಯಾಪ್ತಿಯಲ್ಲಿ ಸದರಿ ಅವಧಿಯಲ್ಲಿ 790 ಪ್ರಕರಣಗಳು ಇತ್ಯರ್ಥಕ್ಕೆ ಬಾಕಿಯಿದ್ದು ಸಂಬಂಧಪಟ್ಟ ವಾಹನ ಮಾಲೀಕರು ಡಿ.12 ರೊಳಗೆ ರಿಯಾಯಿತಿ ಬಳಸಿಕೊಂಡು ದಂಡ ಪಾವತಿಸಿ ಪ್ರಕರಣ ಮುಕ್ತಾಯಗೊಳಿಸಿ ಕೊಳ್ಳಬಹುದಾಗಿದೆ ಎಂದು ಆರ್.ಟಿ.ಓ ಮುರಗೇಂದ್ರ.ಬಿ.ಶಿರೋಲ್ಕರ್ ಇವರು ತಿಳಿಸಿದ್ದಾರೆ.

## ವಿದ್ಯಾರ್ಥಿಗಳ ಗಮನಕ್ಕೆ

**ಗದಗ :** ಬಿ.ಇ ಇಂಜನೀಯರಿಂಗ್ ಮತ್ತು ಎಮ್.ಬಿ.ಬಿಎಸ್ ಶಿಕ್ಷಣ ಪಡೆಯುತ್ತಿರುವ ವಿದ್ಯಾರ್ಥಿಗಳಿಗೆ 2025–26ನೇ ಸಾಲಿನ ಶೇ 24.10 ಹಾಗೂ ಶೇ 5 ಯೋಜನೆಯಡಿ ಪರಿಶಿಷ್ಟ ಪಂಗಡದವರಿಗೆ ಹಾಗೂ ಅಂಗವಿಕಲರ ವಿಕಲಚೇತನರ ಫಲಾನುಭವಿಗಳಿಗೆ ಎಸ್.ಎಫ್.ಸಿ ಮತ್ತು ನಗರಸಭೆ ಅನುದಾನದಡಿ ಸಹಾಯಧನ ನೀಡುಲಾಗುತ್ತಿದೆ. ಆಸಕ್ತರು ಡಿ.5 ರೊಳಗೆ ಅರ್ಜಿ ಸಲ್ಲಿಸಬಹುದಾಗಿದೆ.

# ಕರ್ತಿಕೆರೆ ಗ್ರಾ.ಪಂ ನೂತನ ಅಧ್ಯಕ್ಷರಾಗಿ ರೇಖಾ ಶಂಕರ್ ಅವಿರೋಧ ಆಯ್ಕೆ



**ಚಿಕ್ಕಮಗಳೂರು:** ತಾಲ್ಲೂಕು ಕರ್ತಿಕೆರೆಗ್ರಾಮ ಪಂಚಾಯಿತಿಯ ನೂತನಅಧ್ಯಕ್ಷರಾಗಿರೇಖಾ ಶಂಕರ್‌ಅವಿರೋಧಆಯ್ಕೆಯಾದರು.

ಇಂದುಕರ್ತಿಕೆರೆಗ್ರಾ.ಪಂ ಅಧ್ಯಕ್ಷ ಸ್ಥಾನಕ್ಕೆ ಚುನಾವಣೆ ನಡೆಸಲು ಸಮಯ ನಿಗಧಿಪಡಿಸಲಾಗಿದ್ದು, ರೇಖಾ ಶಂಕರ್‌ಇವರು ನಾಮಪತ್ರ ಸಲ್ಲಿಸಿದ್ದು ಯಾವುದೇ ನಾಮಪತ್ರ ಸಲ್ಲಿಕೆಯಾಗದಕಾರಣ ನೂತನಅಧ್ಯಕ್ಷರಾಗಿರೇಖಾ ಶಂಕರ್‌ಅವರುಅವಿರೋಧ‌ಆಯ್ಕೆಯಾಗಿದ್ದಾರೆಂದುಚುನಾವಣಾಧಿಕಾರಿಯಾಗಿದ್ದ ಶಿಶು ಅಭಿವೃದ್ಧಿಯೋಜನಾಧಿಕಾರಿರಂಗನಾಥ್ ಘೋಷಿಸಿದರು.ಮಾಜಿ ನಗರಾಭಿವೃದ್ಧಿ ಪ್ರಾಧಿಕಾರದಅಧ್ಯಕ್ಷಕೋಟೆರಂಗನಾಥ್ ನೂತನಅಧ್ಯಕ್ಷರನ್ನು ಅಭಿನಂದಿಸಿ ಮಾತನಾಡಿ, ಬಿಜೆಪಿಯ 16 ಸದಸ್ಯರುಒಟ್ಟಿಗೆ ಸಭೆ ನಡೆಸಿ ಅವಧಿ ಹಂಚಿಕೆಮಾಡಿದ್ದು, ಅದರಂತೆ ಕಳೆದ 25 ವರ್ಷಗಳಿಂದ ಬಿಜೆಪಿ ಸದಸ್ಯರು ಪಂಚಾಯಿತಿಯಅಧಿಕಾರ ಹಿಡಿಯುತ್ತಿದ್ದಾರೆಎಂದರು.

ನೂತನಅಧ್ಯಕ್ಷರು ಸಿಕ್ಕಿರುವ ತಮ್ಮಅಧಿಕಾರವಧಿಯಲ್ಲಿಗ್ರಾ.ಪಂ ವ್ಯಾಪ್ತಿಯ ಹಳ್ಳಿಗಳ ಅಭಿವೃದ್ಧಿಗೆ ಶ್ರಮಿಸಿ ಎಂದು ಶುಭ ಹಾರೈಸಿದರು.ರಾಜ್ಯ ಸಫಾಯಿಕರ್ಮಚಾರಿ ನಿಗಮದ ಮಾಜಿಅಧ್ಯಕ್ಷಕುರುವಂಗಿ ವೆಂಕಟೇಶ್‌ಮಾತನಾಡಿ, ರೇಖಾ ಶಂಕರ್‌ಅವರುಅವಿರೋಧ‌ಆಯ್ಕೆಯಾಗಿರುವುದು ನೂತನಅಧ್ಯಕ್ಷರಅಧಿಕಾರ ಸುವರ್ಣಾವಕಾಶವಾಗಿದೆ. ಉಪಾಧ್ಯಕ್ಷರು, ಸದಸ್ಯರ ವಿಶ್ವಾಸದೊಂದಿಗೆಗ್ರಾಮಸ್ಥರ ಸಹಕಾರ ಪಡೆದುಗ್ರಾಮ ಪಂಚಾಯಿತಿಅಭಿವೃದ್ಧಿಗೆ ಶ್ರಮಿಸುವಜೊತೆಗೆರಾಜಕೀಯವಾಗಿ ಬೆಳೆಯಲಿ ಎಂದು ಶುಭಕೋರಿದರು.ಪಂಚಾಯಿತಿ ವ್ಯಾಪ್ತಿಯಜನರ ಇ–ಖಾತೆ, ವಿದ್ಯುತ್, ಕುಡಿಯುವ ನೀರು, ರಸ್ತೆ, ಸ್ವಚ್ಛತೆ ಸೇರಿದಂತೆ ಮೂಲಭೂತ ಸೌಕರ್ಯಗಳು ಪ್ರತಿಯೊಬ್ಬಗ್ರಾಮಸ್ಥರಿಗೂತಲುಪುವಂತೆಕರ್ತವ್ಯ ನಿರ್ವಹಿಸಿ ಎಂದು ಸಲಹೆ ನೀಡಿದರು.ನೂತನಅಧ್ಯಕ್ಷೆರೇಖಾ ಶಂಕರ್‌ಮಾತನಾಡಿ, ಎಲ್ಲರ ಸಹಕಾರ, ವಿಶ್ವಾಸದೊಂದಿಗೆ ಕೆಲಸ ಮಾಡುವುದಾಗಿ ಭರವಸೆ ನೀಡಿದಅವರು, ಈ ಸಂದರ್ಭದಲ್ಲಿ ಪಂಚಾಯಿತಿಉಪಾಧ್ಯಕ್ಷರಾದ ಪುಟ್ಟಸ್ವಾಮಿಶೆಟ್ಟಿ, ಸದಸ್ಯರುಗಳಾದ ಆಶಾರಾಣಿಗುರುಸ್ವಾಮಿ, ಟಿ.ಹೆಚ್ ಹೇಮಾವತಿ, ಗಣೇಶ್‌ರಾಜ್‌ಅರಸ್, ಚಂದ್ರಶೇಖರ್‌ರಾಜ್‌ಅರಸ್, ಪಾರ್ವತಮ್ಮ, ರೇಣುಕಮ್ಮ.ಬಿ.ಎಸ್, ಸಿದ್ದರಾಮೇಶ್ವರ ಸಿ.ಎಲ್, ನಾಗೇಶ್.ಎಂ.ಡಿ, ಮೋಹನ್.ಬಿ, ನೇತ್ರ, ಸೌಮ್ಯ.ಕೆ.ಪಿ, ಯತೀಶ್, ಲೋಕೇಶ್, ಪಿಡಿಓನರಸಿಂಹಮೂರ್ತಿ, ಕಾರ್ಯದರ್ಶಿ ಹಂಪಯ್ಯ, ಹಿರೇಮಗಳೂರು ಕೇಶವ , ರೇವನಾಥ್, ಮತ್ತಿತರರು ಉಪಸ್ಥಿತರಿದ್ದರು.

# ಗ್ರಾಮ ಮಟ್ಟದಲ್ಲಿ ಅರಿವು ಮೂಡಿಸುವ ಕಾರ್ಯಕ್ರಮ

**ಗದಗ :** ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಇಲಾಖೆಯಿಂದ ಅನುಷ್ಠಾನಗೊಳಿಸಲಾಗುತ್ತಿರುವ ಆಧಾರ ಯೋಜನೆ, ಅಂಧ ವಿದ್ಯಾರ್ಥಿಗಳಿಗೆ ಟಾಕಿಂಗ್ ಲ್ಯಾಪ್‌ಟಾಪ್ ಯೋಜನೆ, ವೈದ್ಯಕೀಯ ಪರಿಹಾರ ನಿಧಿ ಯೋಜನೆ, ದೃಷ್ಟಿದೋಷ ಹೊಂದಿರುವ ವಿಕಲಚೇತನರಿಗೆ ಬ್ರೈಲ್‌ಕಿಟ್ ಯೋಜನೆ, ಪ್ರತಿಭಾವಂತ ಅಂಗವಿಕಲ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ಯೋಜನೆ, ದೈಹಿಕ ವಿಕಲಚೇತನರಿಗೆ ಯಂತ್ರಚಾಲಿತ ದ್ವಿಚಕ್ರ ವಾಹನ ಯೋಜನೆ, ನಿರುದ್ಯೋಗ ಭತ್ಯೆ ಯೋಜನೆ,ಶ್ರವಣದೋಷವುಳ್ಳ ವ್ಯಕ್ತಿಗಳಿಗೆ ಸ್ವಯಂ ಉದ್ಯೋಗಕ್ಕಾಗಿ ಹೊಲಿಗೆ ಯಂತ್ರ ಯೋಜನೆ, ಶಿಶುಪಾಲನಾ ಭತ್ಯೆ ಯೋಜನೆ, ಸಾಧನೆ ಸಲಕರಣೆಗಳ ಯೋಜನೆ, ಮರಣ ಪರಿಹಾರ ನಿಧಿ ಯೋಜನೆ, ವಿಕಲಚೇತನ ವ್ಯಕ್ತಿಗಳಿಗೆ ಬ್ಯಾಟರಿ ಚಾಲಿತ ವ್ಹೀಲ್ ಚೇರ್ ಯೋಜನೆ, ಪ್ರತಿಭೆ ಯೋಜನೆ,ಸೇರಿದಂತೆ ಒಟ್ಟು 13 ಯೋಜನೆಗಳ ಬಗ್ಗೆ ಗ್ರಾಮ ಸಭೆಗಳಲ್ಲಿ, ಜನ ಪ್ರತಿನಿಧಿಗಳ ಸಭೆಗಳಲ್ಲಿ ಅರಿವು ಮೂಡಿಸಲು ಕೋರಲಾಗಿದೆ ಎಂದು ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಇಲಾಖೆ ಕಲ್ಯಾಣಾಧಿಕಾರಿ ಕೆ.ಮಹಾಂತೇಶ ತಿಳಿಸಿರುತ್ತಾರೆ.

# ಉಚಿತ ಸಿಸಿಟಿವಿ ಅಳವಡಿಕೆ ಮತ್ತು ಸರ್ವೀಸಿಂಗ್ ತರಬೇತಿ

**ಚಿಕ್ಕಮಗಳೂರು:** ಬೆಂಗಳೂರು ಗ್ರಾಮಾಂತರ ಜಿಲ್ಲೆ ಹೊಸಕೋಟೆ ತಾಲ್ಲೂಕು ಸೊಣ್ಣಹಳ್ಳಿಪುರದಲ್ಲಿರುವ ಕೆನರಾ ಬ್ಯಾಂಕ್ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆಯಲ್ಲಿ ಡಿಸೆಂಬರ್ 15 ರಿಂದ 13 ದಿನಗಳ ಕಾಲ ನಿರುದ್ಯೋಗಿ ಪುರುಷರಿಗೆ ಉಚಿತ ಸಿಸಿಟಿವಿ ಅಳವಡಿಕೆ ಮತ್ತು ಸರ್ವೀಸಿಂಗ್ ತರಬೇತಿ ಶಿಬಿರವನ್ನು ಏರ್ಪಡಿಸಿದೆ.

ಸ್ವಯಂ ಉದ್ಯೋಗಿಗಳಾಗಲು ಬಯಸುವ 18 ರಿಂದ 45 ವರ್ಷ ವಯಸ್ಸಿನ ಕರ್ನಾಟಕ ರಾಜ್ಯದ ಯಾವುದೇ ಜಿಲ್ಲೆಯ ನಿರುದ್ಯೋಗಿ ಪುರುಷರು ಈ ಶಿಬಿರದಲ್ಲಿ ಪಾಲ್ಗೊಳ್ಳಬಹುದು. ಈ ಶಿಬಿರದ ಸಮಯದಲ್ಲಿ ತರಬೇತಿ, ಊಟ ಹಾಗೂ ವಸತಿ ಸೌಕರ್ಯಗಳನ್ನು ಶಿಬಿರಾರ್ಥಿಗಳಿಗೆ ಉಚಿತವಾಗಿ ಕಲ್ಪಿಸಲಾಗುವುದು. ಗ್ರಾಮೀಣ ಭಾಗದ ಬಿಪಿಎಲ್ ಅಭ್ಯರ್ಥಿಗಳಿಗೆ ಮೊದಲ ಆದ್ಯತೆ ನೀಡಲಾಗುವುದು. ಅಭ್ಯರ್ಥಿಗಳು ಸ್ಥಳೀಯ ಭಾಷೆ ಬಲ್ಲವರಾಗಿದ್ದು, ಕನ್ನಡ ಓದಲು ಮತ್ತು ಬರೆಯಲು ತಿಳಿದಿರಬೇಕು. ತರಬೇತಿ ನಂತರ ಕೇಂದ್ರ ಸರ್ಕಾರದ ಗ್ರಾಮೀಣ ಸಚಿವಾಲಯದಿಂದ ಪ್ರಮಾಣ ಪತ್ರವನ್ನು ವಿತರಿಸಲಾಗುವುದು.

ಆಸಕ್ತಿಯುಳ್ಳ ಶಿಬಿರಾರ್ಥಿಗಳು ಡಿಸೆಂಬರ್ 4 ರಂದು ಬೆಳಿಗ್ಗೆ 9.30 ಗಂಟೆಗೆ ಕೆನರಾ ಬ್ಯಾಂಕ್ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆ, ಸೊಣ್ಣಹಳ್ಳಿಪುರ, ಹಸಿಗಾಳ (ಅಂಚೆ), ಹೊಸಕೋಟೆ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇಲ್ಲಿ ನಡೆಯುವ ನೇರ ಸಂದರ್ಶನಕ್ಕೆ ವಿದ್ಯಾರ್ಹತೆಗಳೊಂದಿಗೆ ಮತ್ತು ವಿಳಾಸ ದಾಖಲಾತಿಗಳೊಂದಿಗೆ ಹಾಜರಾಗಬೇಕಾಗಿ ಈ ಮೂಲಕ ಸೂಚಿಸಲಾಗಿದೆ. ಸಂದರ್ಶನಕ್ಕೆ ಹಾಜರಾಗಲು ಅಸಾಧ್ಯವಾದಲ್ಲಿ ಡಿಸೆಂಬರ್ 4 ರೊಳಗೆ ಸಂಸ್ಥೆಯನ್ನು ಈ ಕೆಳಕಂಡ ದೂರವಾಣಿ ಸಂಖ್ಯೆ 8970476050, 9591514154, 9686248369, 9505894247 ಗಳಿಗೆ ಸಂಪರ್ಕಿಸಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬಹುದೆಂದು ಸಂಸ್ಥೆಯ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹುಲಿ ದಾಳಿಗೆ ಸಾವು

**ಗುಂಡ್ಲುಪೇಟೆ (ಚಾಮರಾಜನಗರ ಜಿಲ್ಲೆ):** ತಾಲ್ಲೂಕಿನ ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶಕ್ಕೆ ಹೊಂದಿ ಕೊಂಡಿರುವ ಮಧುಮಲೈ ಹುಲಿ ಸಂರಕ್ಷಿತ ಪ್ರದೇಶ ವ್ಯಾಪ್ತಿಯಲ್ಲಿ ಸೋಮವಾರ ಹುಲಿ ದಾಳಿಗೆ ಮಹಿಳೆ ಮೃತಪಟ್ಟಿದ್ದಾರೆ.

ತಮಿಳುನಾಡಿನ ನಾಗಿಯಮ್ಮ ನೀಲಗಿರಿ (ಊಟಿ)

ಜಿಲ್ಲೆಯ ಗೂಡೂರು ತಾಲ್ಲೂಕಿನ ಮಾವನಹಳ್ಳ ಗ್ರಾಮದ ನಾಗಿಯಮ್ಮ (61) ಮೃತರು. ಮೇಕೆ ಮೇಯಿಸುವಾಗ ಹುಲಿ ಮಹಿಳೆಯನ್ನು ಎಳೆದೊಯ್ದಿದೆ.

ಇದೇ ಸ್ಥಳದಲ್ಲಿ 5 ತಿಂಗಳ ಹಿಂದೆ 2 ಹಸುಗಳನ್ನು ಹುಲಿ ಕೊಂದಿತ್ತು

# ಉಚಿತವಾಗಿ ದೇಶಿ ಕೋಳಿಮರಿ ಪಡೆಯಲು ಅರ್ಜಿ ಆಹ್ವಾನ

**ದಾವಣಗೆರೆ :** ಕರ್ನಾಟಕ ಕುಕ್ಕುಟ ಮಹಾಮಂಡಳಿ ನಿಯಮಿತ ವತಿಯಿಂದ ಪ್ರಸಕ್ತ ಸಾಲಿನ ಜಗಳೂರು ತಾಲ್ಲೂಕಿನಲ್ಲಿ 99 ಗ್ರಾಮೀಣ ಮಹಿಳೆಯರಿಗೆ ಉಚಿತವಾಗಿ 5 ವಾರಗಳ ದೇಶೀ ಕೋಳಿಮರಿಗಳನ್ನು ವಿತರಿಸಲು ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ರೈತ ಮಹಿಳಾ ಫಲಾನುಭವಿಗಳ ಡಿಸೆಂಬರ್ 5 ರೊಳಗಾಗಿ ಜಗಳೂರು ತಾಲ್ಲೂಕಿನ ಹತ್ತಿರದ ಪಶುವೈದ್ಯ ಸಂಸ್ಥೆಗಳಲ್ಲಿ ಅರ್ಜಿ ಪಡೆಯಬಹುದೆಂದು ಪಶು ಆಸ್ಪತ್ರೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

# ದೆಹಲಿ ಸ್ಫೋಟದ ಉಗ್ರ ಉಮರ್ ಮನೆ ನೆಲಸಮ

**ನವದೆಹಲಿ:** ಕಾರು ಸ್ಫೋಟ ಪ್ರಕರಣದಲ್ಲಿ 13 ಮಂದಿ ಅಮಾಯಕರನ್ನು ಬಲಿ ತೆಗೆದುಕೊಂಡ ಉಗ್ರ ಡಾ. ಉಮರ್ ನಬಿ ಅವರ ಮನೆಯನ್ನು ನೆಲಸಮಗೊಳಿಸಲಾಗಿದೆ. ದೆಹಲಿಯಲ್ಲಿ ನವೆಂಬರ್ 10ರಂದು ಸಂಭವಿಸಿದ ಕಾರು ಸ್ಫೋಟದ ಘಟನೆಯಲ್ಲಿ 13 ರ ಮಂದಿ ಪ್ರಾಣ ಕಳೆದುಕೊಂಡಿದ್ದರು. ಈ ದಾಳಿ ಹಿಂದಿದ್ದ ಡಾ. ಉಮರ್ ನಬಿ ಮನೆಯನ್ನು ರಾತ್ರೋರಾತ್ರಿ ನೆಲಸಮ ಮಾಡಲಾಗಿದೆ.

ದಕ್ಷಿಣ ಕಾಶ್ಮೀರದ ಪುಲ್ವಾಮಾದಲ್ಲಿ ಆತನ ಮನೆ ಇತ್ತು. ಆತನ ಮನೆಯನ್ನು ರಾತ್ರೋರಾತ್ರಿ ನೆಲಸಮಗೊಳಿಸಲಾಗಿದೆ ಎಂದು ವರದಿಯಾಗಿದೆ. ಕಾರು ಸ್ಫೋಟದಲ್ಲಿ ಉಮರ್ ಕೂಡ ಸಾವನ್ನಪ್ಪಿರುವುದು ಡಿಎನ್ಎ ಪರೀಕ್ಷೆಯಿಂದ ದೃಢಪಟ್ಟಿದೆ. ಸ್ಫೋಟಕ್ಕೆ ಆತನೇ ಕಾರಣ ಎನ್ನುವುದು ತಿಳಿಯುತ್ತಿದ್ದಂತೆ ಆತನ ಮನೆಯನ್ನು ಧ್ವಂಸ ಮಾಡಲಾಗಿದೆ.

# 33 ಲಕ್ಷರೂ. ವೆಚ್ಚದಲ್ಲಿ ಚೆನ್ನಾಪುರ ರಸ್ತೆ ಡಾಂಬರೀಕರಣ

ಚಿಕ್ಕಮಗಳೂರು–ಹೆಚ್ಚು ಜನ ಸಂಚರಿಸುವ ನಗರದಆಯ್ದ ಪ್ರಮುಖ ರಸ್ತೆಗಳನ್ನು ಮೊದಲ ಹಂತದಲ್ಲಿ ಸಮಗ್ರಅಭಿವೃದ್ಧಿಪಡಿಸಲು ಮುಖ್ಯಮಂತ್ರಿಗಳ ವಿಶೇಷ ಅನುದಾನದಲ್ಲಿ ಈಗಾಗಲೇ ಕಾಮಗಾರಿಗಳನ್ನು ಆರಂಭಿಸಲಾಗಿದೆಎಂದು ಶಾಸಕ ಹೆಚ್.ಡಿ. ತಮ್ಮಯ್ಯ ತಿಳಿಸಿದರು.

ಅವರುಇಂದು ವಾರ್ಡ್ ನಂ. 5 ರಲ್ಲಿ ಸಮಾರು 33 ಲಕ್ಷರೂ ವೆಚ್ಚದಲ್ಲಿರೈಲ್ವೆ ಸೇತುವೆಯಿಂದ ಸರ್ಕಲ ್ವರೆಗೆಚೆನ್ನಾಪುರರಸ್ತೆಡಾಂಬರೀಕರಣಕಾಮಗಾರಿಗೆಗುದ್ದಲಿ ಪೂಜೆ ನೆರವೇರಿಸಿ ಮಾತನಾಡಿದರು.

ನಗರದಎಲ್ಲಾ ರಸ್ತೆಗಳು ಡಿ.1 ರಿಂದ ಫೆಬ್ರವರಿ ಅಂತ್ಯದೊಳಗೆ ಡಾಂಬರೀಕರಣ ಆಗಬೇಕು, ಜೆ ೊತೆಗೆಗುತ್ತಿಗೆದಾರರಿಂದಗುಣಮಟ್ಟದಕಾಮಗಾರಿ ನಡೆಸಬೇಕೆಂದು ಅಧಿಕಾರಿಗಳಿಗೆ ಕಡಕ್ ಸೂಚನೆ ನೀಡಿದರು.

ಈಗ ಚಿಕ್ಕಚಿಕ್ಕ ರಸ್ತೆಗಳನ್ನು 30–40 ಲಕ್ಷರೂ. ವೆಚ್ಚದಲ್ಲಿ ಅಭಿವೃದ್ಧಿಪಡಿಸಿ ಡಾಂಬರೀಕರಣ ಕೈಗೊಳ್ಳಲು ಡಿಪಿಆರ್ ತಯಾರಿಸಿ ಕಾಮಗಾರಿಗಳಿಗೆ ಗುದ್ದಲಿ ಪೂಜೆ ನೆರವೇರಿಸಿ ಚಾಲನೆ ನೀಡಲಾಗಿದೆಎಂದು ಹೇಳಿದರು.

ಸುಮಾರು ಹನ್ನೆರಡುವರೆಕೋಟಿರೂ. ಮುಖ್ಯಮಂತ್ರಿಗಳ ವಿಶೇಷ ಅನುದಾನದಲ್ಲಿಯುಜಿಡಿ ಮತ್ತುಅಮೃತ್‌ಯೋಜನೆಯಿಂದಗುಂಡಿಬಿದ್ದಿರ ುವ ರಸ್ತೆಗಳನ್ನು ಅಭಿವೃದ್ಧಿಪಡಿಸಬೇಕು ಎಂಬ ನಿರ್ಧಾರಕ್ಕೆ ನಗರಸಭೆ ಸಾಮಾನ್ಯ ಸಭೆಯಲ್ಲಿಎಲ್ಲಾ



ಸದಸ್ಯರುಒಕ್ಕೊರಲ ಮನವಿ ಮಾಡಿದ ಸದಸ್ಯರಿಗೆ ಧನ್ಯವಾದಗಳನ್ನು ಅರ್ಪಿಸಿದರು.

"ಸೈಕಲ್ ತುಳಿ ಸಮಸ್ಯೆ ತಿಳಿ" ಘೋಷಣೆಯೊಂದಿಗೆ ಸಂಚರಿಸಿದ ರಸ್ತೆಗಳಲ್ಲಿ ಮನವಿಯನ್ನು ಸ್ವೀಕರಿಸಿದ್ದು, ಮಾ.1 ರಿಂದ ಪುನಹಾ ನಗರ ವೀಕ್ಷಣೆ ಸಂದರ್ಭದಲ್ಲಿಎಲ್ಲಾ ರಸ್ತೆಗಳು ಗುಣಮಟ್ಟದಿಂದಕೂಡಿರಬೇಕು, ಇಲ್ಲದಿದ್ದರೆ ಸಂಬಂಧಿಸಿದ ಇಂಜಿನಿಯರ್ ಮತ್ತುಗುತ್ತಿಗೆದಾರರನ್ನು ಹೊಣೆಗಾರರನ್ನಾಗಿಸುವುದಾಗಿ ಎಚ್ಚರಿಸಿದರು.

ನಗರದ ಸರ್ವತೋಮುಖಅಭಿವೃದ್ಧಿಗೆ ನಗರಸಭೆಅಧ್ಯಕ್ಷರು–ಉಪಾಧ್ಯಕ್ಷರು ಹಾಗೂ ಸದಸ್ಯರನ್ನು ವಿಶ್ವಾಸಕ್ಕೆತೆಗೆದುಕೊಂಡು ಕೆಲಸ ಮಾಡುತ್ತಿರುವುದಾಗಿ ತಿಳಿಸಿದರು.

ಜಿಲ್ಲಾಕಾಂಗ್ರೆಸ್ ಮಾಜಿಅಧ್ಯಕ್ಷಎಂ.ಎಲ್ ಮೂರ್ತಿ ಮಾತನಾಡಿ, ಕನಿಷ್ಠ 5 ವರ್ಷಇರುವ ಶಾಶ್ವತಗುಣಮಟ್ಟದಕಾಮಗಾರಿ ಕೈಗೊಳ್ಳಬೇಕೆಂದು ಗ್ರಾಮಸ್ಥರು ಮನವಿ ಮಾಡಿದ್ದು, ಅದರಂತೆಕಾಮಗಾರಿ ನಿರ್ವಹಿಸುವಂತೆ ತಿಳಿಸಿದ ಅವರು, ಇಲ್ಲಿನ ಪಾರ್ಕ್‌ಅಭಿವೃದ್ಧಿಗೆರಾಜ್ಯಸಭಾ ಸದಸ್ಯಜಯರಾಂರಮೇಶ್‌ರವರಅನುದಾನ 30 ಲಕ್ಷರೂ. ವೆಚ್ಚದಲ್ಲಿಅಭಿವೃದ್ಧಿಪಡಿಸಬೇಕೆಂದು ಹೇಳಿದರು.ರಸ್ತೆಕಿರಿದಾಗಿರುವುದರಿಂದ ದಿನನಿತ್ಯ ಈ ಮಾರ್ಗದಲ್ಲಿ ಸಂಚರಿಸುವ ಭಾರಿಗಾತ್ರದ ವಾಹನಗಳನ್ನು ನಿಷೇಧಿಸಬೇಕು ಹಾಗೂ ಸರ್ಕಲ್‌ನಿಂದಈಚೆಗೊಂದು–ಆಚೆಗೊಂದು ಹಂಪ್ಸ್ ನಿರ್ಮಾಣ ಮಾಡಿ ಅಪಘಾತಗಳನ್ನು ತಡೆಯುವಂತೆ ಇಂಜಿನಿಯರ್‌ಗಳಲ್ಲಿ ಮನವಿ ಮಾಡಿದರು.

ಅಧ್ಯಕ್ಷತೆ ವಹಿಸಿದ್ದ ನಗರಸಭಾಧ್ಯಕ್ಷೆ ಶೀಲಾ ದಿನೇಶ್ ಮಾತನಾಡಿ, ನಗರದ ಸರ್ವಾಂಗೀಣಅಭಿವೃದ್ಧಿಗೆ ಶಾಸಕ ಹೆಚ್.ಡಿ. ತಮ್ಮಯ್ಯಅವರು ಶ್ರಮಿಸುತ್ತಿದ್ದು, 20 ಕೋಟಿರೂ. ವೆಚ್ಚದಲ್ಲಿಅತ್ಯಾಧುನಿಕ ಸಾರಿಗೆ ಬಸ್ ನಿರ್ಮಾಣಕಾಮಗಾರಿಗೆ ಶಂಕುಸ್ಥಾಪನೆ ನೆರವೇರಿಸಿದ್ದಾರೆಂದು ಶ್ಲಾಘಿಸಿದರು.

ಪ್ರಾಸ್ತಾವಿಕವಾಗಿ ನಗರಸಭೆ ಸದಸ್ಯ ಮಧುಕುಮಾರ್‌ರಾಜ್‌ಅರಸ್ ಮಾತನಾಡಿದರು, ವೇದಿಕೆಯಲ್ಲಿ ಸಿಡಿಎ ಅಧ್ಯಕ್ಷ ನಯಾಜ್‌ಅಹಮದ್, ಬ್ಲಾಕ್‌ಕಾಂಗ್ರೆಸ್‌ಅಧ್ಯಕ್ಷ ಹೆಚ್.ಪಿ ಮಂಜೇಗೌಡ, ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಡಾ. ಡಿ.ಎಲ್ ವಿಜಯ್‌ಕುಮಾರ್, ಪೌರಾಯುಕ್ತ ಬಿ.ಸಿ. ಬಸವರಾಜು, ನಗರಸಭೆ ಸದಸ್ಯರಾದರೂಪಕುಮಾರ್, ಜಾವಿದ್, ಸುಜಾತಶಿವಕುಮಾರ್, ಲಕ್ಷ್ಮಣ್, ಅರುಣ್ ,ಕುಮಾರೇಗೌಡ,ಸ್ಥಳಿಯರಾದ ಆನಂದ್, ಅಶೋಕ್, ನಾಗೇಶ್, ಸೋಮಣ್ಣ, ಜಗದೀಶ್, ಚಿದಾನಂದ್, ಮಂಜೇಗೌಡ, ಅರ್ಜುನ್, ಸುರೇಶ್, ವೆಂಕಟೇಶ್ ನಾಯ್ಡು, ತನೂಜ್ ನಾಯ್ಡು, ಪ್ರಸಾದ್‌ಅಮೀನ್, ಶಿವಣ್ಣ, ಶ್ರೀನಿವಾಸ್, ಪಾಪಣ್ಣ, ದಯಾನಂದ್ ನಾಯ್ಡು ಮತ್ತಿತರರು ಉಪಸ್ಥಿತರಿದ್ದರು.

# ಸಂವಿಧಾನ ದಿನಾಚರಣೆ ಕಾರ್ಯಕ್ರಮ ಆಚರಣೆ

**ಚನ್ನಗಿರಿ :** ಸಂವಿಧಾನವು ನಮ್ಮ ರಾಷ್ಟ್ರಕ್ಕೆ ಇಂದು ಅರ್ಪಣೆಯಾದ ದಿನವಾಗಿದ್ದು ನಮ್ಮ ದೇಶದಲ್ಲಿ ಪ್ರತಿಯೊಬ್ಬ ನಾಗರೀಕರಿಗೂ ಬದುಕುವ ಹಕ್ಕನ್ನು ನೀಡಿದೆ ಎಂದು ರಾಜ್ಯ ಸರಕಾರದ ಜೀವ ವೈವಿಧ್ಯಮಯ ನಿಗಮದ ಅಧ್ಯಕ್ಷ ವಡ್ನಾಳ್ ಜಗದೀಶ್ ಹೇಳಿದರು.

ಬುಧವಾರ ಪಟ್ಟಣದ ವಾಲ್ಮೀಕಿ ಸಮುದಾಯ ಭವನದಲ್ಲಿ ತಾಲೂಕು ಆಡಳಿತ, ಸಮಾಜಕಲ್ಯಾಣ ಇಲಾಖೆ, ಪುರಸಭೆ ಮತ್ತು ವಿವಿಧ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ ಸಂವಿಧಾನ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ ದೇಶಕ್ಕೆ ಉತ್ತಮವಾದ ಸಂವಿಧಾನವನ್ನು ನೀಡುವಲ್ಲಿ ಸಾಕಷ್ಟು ಹಿರಿಯರ ಕೊಡುಗೆ ಇದ್ದು ಅದರಲ್ಲಿ ಬಾಬಾ ಸಾಹೇಬ್ ಅಂಬೇಡ್ಕರ್‌ರವರ ಕೊಡುಗೆ ಆಪಾರವಾಗಿದೆ ಎಂದರು.

ಛಲವಾದಿ ಸಮಾಜದ ಜಿಲ್ಲಾ ಉಪಾಧ್ಯಕ್ಷ ಸಿ.ನಾಗರಾಜ್ ಮಾತನಾಡಿ ಸಂವಿಧಾನವನ್ನು ನಮಗೆ ನಾವು ಅರ್ಪಣೆ ಮಾಡಿಕೊಂಡ ದಿನವಾಗಿದ್ದು ದೇಶದಲ್ಲಿ ಬಾಷೆ, ಸಂಸ್ಕೃತಿ ವೈವಿಧ್ಯಮಯವಾಗಿದ್ದರೂ ಎಲ್ಲಾ ನಾಗರೀಕರಿಗೂ ಒಂದೇ ಸಂವಿಧಾನವನ್ನು ನೀಡಿರುವ ಹೆಗ್ಗಳಿಕೆ ಬಾಬಾ ಸಾಹೇಬ್ ಅಂಬೇಡ್ಕರ್‌ರವರಿಗೆ ಸಲ್ಲುತ್ತದೆ. ಸಂವಿಧಾನ ಓದಿರುವವರ ಸಂಖ್ಯೆ ವಿರಳ. ಅದನ್ನು



ಕೇಳಿದ್ದೇವೆ. ಆದರೆ ಅದನ್ನು ಪ್ರತಿಯೊಬ್ಬರಿಗೂ ತಲುಪಿಸುವ ಉದ್ದೇಶದಿಂದ ಸರಕಾರವು ಪ್ರತಿ ಗ್ರಾಮಗಳಲ್ಲಿಯೂ ತಿಳಿಸುವ ಪ್ರಯತ್ನ ಮಾಡಲಾಗುತ್ತಿದೆ ಎಂದರು.

ಬಿ.ಇ.ಓ. ಜಯ್ಯಪ್ಪ ಮಾತನಾಡಿ ಇಂದು ನಮಗೆ ಮಹತ್ವದ ದಿನವಾಗಿದ್ದು ನಮ್ಮ ದೇಶದಲ್ಲಿ ಬದುಕುವ ಪ್ರತಿಯೊಬ್ಬರೂ ಸಂವಿಧಾನದ ಬಗ್ಗೆ ತಿಳಿದುಕೊಳ್ಳಬೇಕಿದೆ. ಸಂವಿಧಾನವು ದೇಶದ ಆಡಳಿತದ ಚುಕ್ಕಾಣಿಯಾಗಿದ್ದು ಸ್ವಾತಂತ್ರ್ಯ ಬಂದ ನಂತರ ದೇಶ ನಡೆಸಲು ಸಂವಿಧಾನ ಆಗತ್ಯವಾಗಿದ್ದು 1946 ರಲ್ಲಿ ಬಾಬು ರಾಜೇಂದ್ರ ಪ್ರಸಾದ್‌ರವರ ನೇತ್ರತ್ವದಲ್ಲಿ 22 ಸಮಿತಿಗಳನ್ನು ಮಾಡಿದ್ದು ಅದರಲ್ಲಿ ಕರಡು ಅಭಿವೃದ್ಧಿ ಸಮಿತ ರಚನೆ ಮಾಡಿ ಅದರ ನೇತ್ರತ್ವವನ್ನು ಅಂಬೇಡ್ಕರ್‌ರವರಿಗೆ ನೀಡಿದ್ದು ದೇಶದ ಮೂಲೆ ಮೂಲೆಗಳಿಗೆ ತೆರಳಿ ಈ ಸಂವಿಧಾನವನ್ನು ರಚಿಸಲಾಗಿದೆ ಎಂದರು. ಈ ಸಂದರ್ಭದಲ್ಲಿ ಗ್ರೇಡ್ 2 ತಹಶೀಲ್ದಾರ್ ರುಕ್ಮಿಣಿಬಾಯಿ, ಇ.ಓ. ಪ್ರಕಾಶ್, ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘದ ಅಧ್ಯಕ್ಷ ಗಣೇಶ್, ಸಮಾಜಕಲ್ಯಾಣಾಧಿಕಾರಿ ಮಲ್ಲಿಕಾರ್ಜುನ್, ಪುರಸಭೆಯ ಮ್ಯಾನೇಜರ್ ವೈ.ಎಸ್. ಆರಾಧ್ಯ, ರವೀಂದ್ರಕುಮಾರ್ ಅಥರ್ಗಾ, ಸಹಾಯಕ ಕೃಷಿ ನಿರ್ದೇಶಕ ಅರುಣ್‌ಕುಮಾರ್ ಇತರರು ಹಾಜರಿದ್ದರು.

# ಸೈನಿಕರ ಮಕ್ಕಳಿಗೆ ಶಿಷ್ಯವೇತನಕ್ಕೆ ಅರ್ಜಿ ಆಹ್ವಾನ

**ಹಾಸನ :** ವೃತ್ತಿಪರ ಪದವಿಗಳಾದ BE, BE (Lateral entry), B Tec, BDS, MBBS, BBA, BCA, B Sc(AG), B Pharma, MBA, MCA, B Ed, LLB ಇತ್ಯಾದಿ ಕೋರ್ಸುಗಳಲ್ಲಿ 2025–26ನೇ ಸಾಲಿಗಾಗಿ ಪ್ರಸಕ್ತ ವರ್ಷ ಪ್ರವೇಶ ಪಡೆದು ವ್ಯಾಸಂಗ ಮಾಡುತ್ತಿರುವ

ಮಾಜಿ ಸೈನಿಕರ ಮಕ್ಕಳಿಗೆ ಪ್ರಧಾನ ಮಂತ್ರಿಗಳ ಶಿಷ್ಯವೇತನಕ್ಕಾಗಿ ಅರ್ಜಿಗಳನ್ನು ವೆಬ್ ಸೈಟ್ https://ksb.gov.in/index.htm ರಲ್ಲಿ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿದ್ದು ಅರ್ಹ ಅಭ್ಯರ್ಥಿಗಳು ಅರ್ಜಿಸಲ್ಲಿಸಿ ದಾಖಲಾತಿಗಳ ನೈಜತೆಯನ್ನು ಉಪ ನಿರ್ದೇಶಕರ ಕಾರ್ಯಾಲಯ,

ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ, ಶಂಕರಿಪುರಂ, ಹಾಸನ ಇವರಲ್ಲಿ ಪರಿಶೀಲನೆಗಾಗಿ ಸಲ್ಲಿಸುವಂತೆ ಸೂಚಿಸಲಾಗಿದೆ. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ ಡಿ.31 ಆಗಿರುತ್ತದೆ ಎಂದು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಉಪ ನಿರ್ದೇಶಕರು ತಿಳಿಸಿದ್ದಾರೆ.

# ಕೆ.ಟಿ.ಜೆ. ನಗರದಲ್ಲಿ ಭಾರತ ಸಂವಿಧಾನ ದಿವಸ ಆಚರಣೆ



**ದಾವಣಗೆರೆ :** ಭಾರತವನ್ನು ಸಾರ್ವಭೌಮ, ಸಮಾಜವಾದಿ, ಧರ್ಮನಿರಪೇಕ್ಷ ಪ್ರಜಾಸತ್ತಾತ್ಮಕ ಗಣರಾಜ್ಯವನ್ನಾಗಿ ರೂಪಿಸುವುದಕ್ಕಾಗಿ ಭಾರತದ ಸಂವಿಧಾನ ಪರಿಣಾಮಕಾರಿಯಾಗಿದೆ ಎಂದು ಮಹಾನಗರ ಪಾಲಿಕೆ ಮಾಜಿ ಸದಸ್ಯರಾದ ಗಡಿಗುಡಾಳ್ ಮಂಜುನಾಥ್ ತಿಳಿಸಿದರು.

ಅವರು ಇಂದು ಕೆ.ಟಿ.ಜೆ. ನಗರದ 3ನೇ ಮೇನ್, 15ನೇ ಕ್ರಾಸ್‌ನಲ್ಲಿ ಭಾರತ ಸಂವಿಧಾನ ದಿವಸ ಆಚರಣೆ ನಿಮಿತ್ತವಾಗಿ ಅಂಬೇಡ್ಕರ್ ಭಾವಚಿತ್ರಕ್ಕೆ ಪುಷ್ಪಾರ್ಚಣೆ ಮಾಡಿ ಮಾತನಾಡಿ ವ್ಯಕ್ತಿ ಗೌರ, ದೇಶದ ಏಕತೆ ಮತ್ತು ಸಮಗ್ರತೆಗಾಗಿ ಎಲ್ಲರಲ್ಲಿ ಭಾತೃತ್ವ ಭಾವನೆ ಮೂಡಿಸುವುದೇ ಸಂವಿಧಾನವಾಗಿದೆ ಎಂದರು.

ಈ ಸಂದರ್ಭದಲ್ಲಿ ಕೆ.ಜಿ. ಶಿವಕುಮಾರ್, ಕೇರಂ ಗಣೇಶ್, ಚೇತನ್‌ಕುಮಾರ್,

ಗೋಣೆಪ್ಪ, ಎಸ್. ಮಾನು, ಮೈಲಾರಪ್ಪ, ಸತ್ಯನಾರಾಯಣ, ಕೆ.ಎಸ್. ವಿಜಯಕುಮಾರ್, ಪ್ರಕಾಶಣ್ಣ, ವಸಂತಕುಮಾರ್, ಸುರೇಶ್, ಟೈಲರ್ ಸಾಲೇಶಪ್ಪ, ಶ್ರೀಧರ್, ಹುಲಿಗೇಶ್‌ಗೌಡ, ಅಂಬರೀಷ್, ಅಣ್ಣಪ್ಪ, ಹಸೀನಾ, ಟೈಲರ್ ವೆಂಕಟೇಶಪ್ಪ, ಮತ್ತಿತರರು ಉಪಸ್ಥಿತರಿದ್ದರು.

# ವೈದ್ಯಕೀಯ ವಿಜ್ಞಾನ ಸಂಸ್ಥೆಯ ಪ್ರಾಧ್ಯಾಪಕನ ವಿರುದ್ಧ ಆರೋಪ ವಿದ್ಯಾರ್ಥಿನಿ ದೂರು ಸಲ್ಲಿಸಿಲ್ಲ: ಸಂಸ್ಥೆ ಹೇಳಿಕೆ

**ಚಿಕ್ಕಮಗಳೂರು:** ನಗರದ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ 3ನೇ ವರ್ಷದ ಎಂ.ಬಿ.ಬಿ.ಎಸ್. ವಿದ್ಯಾರ್ಥಿನಿಯೊಬ್ಬರು ಪ್ರಾಧ್ಯಾಪಕರೊಬ್ಬರ ವಿರುದ್ಧ ಹಲವು ಆರೋಪಗಳನ್ನು ಮಾಡಿದ್ದು, ಈ ಬಗ್ಗೆ ಸಂಸ್ಥೆಗಾಗಲಿ, ಪೊಲೀಸ್ ಠಾಣೆಗಾಗಲಿ ದೂರು ನೀಡಿಲ್ಲ ಎಂದು ವೈದ್ಯಕೀಯ ವಿಜ್ಞಾನ ಸಂಸ್ಥೆಗಳ ನಿರ್ದೇಶಕರು ತಿಳಿಸಿದ್ದಾರೆ.

ಈ ಕುರಿತು ಹೇಳಿಕೆಯೊಂದನ್ನು ಬಿಡುಗಡೆ ಮಾಡಿರುವ ಅವರು, ಈ ವಿದ್ಯಾರ್ಥಿನಿ ಇನ್‌ಸ್ಟಾಗ್ರಾಮ್ ಮತ್ತು ಯುಟ್ಯೂಬ್ ಮಾಧ್ಯಮಗಳಲ್ಲಿ ನೀಡಿರುವ ಸಂದರ್ಶನದಲ್ಲಿ ಸಂಸ್ಥೆಯ ಪ್ರಾಧ್ಯಾಪಕರೊಬ್ಬರ ವಿರುದ್ಧ ಕೆಲವು ಆರೋಪಗಳನ್ನು ಮಾಡಿದ್ದಾರೆ. ಈ ವಿದ್ಯಾರ್ಥಿನಿಯೊಡನೆ ಪ್ರಾಧ್ಯಾಪಕ ನಡೆಸಿರುವ ವಾಟ್ಸಾಪ್ ಚಾಟ್‌ಗಳ ಮಾಹಿತಿಗಳನ್ನು ಕೆಲವು ಸಂಘ–ಸಂಸ್ಥೆಗಳು ಅಕ್ಟೋಬರ್ 29 ರಂದು ಸಂಸ್ಥೆಯ ಡೀನ್ ಹಾಗೂ ನಿರ್ದೇಶಕರ ಗಮನಕ್ಕೆ ಮೌಖಿಕವಾಗಿ ದೂರು ಸಲ್ಲಿಸಿದ್ದವು ಎಂದು ತಿಳಿಸಿದ್ದಾರೆ. ಈ ನಡುವೆ ಆರೋಪ ಮಾಡಿದ ವಿದ್ಯಾರ್ಥಿನಿಗೆ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ಹಾಗೂ ಎನ್.ಎಂ.ಸಿ. ನಿಗದಿಪಡಿಸಿರುವ ಮಾನದಂಡದ ಹಿನ್ನೆಲೆಯಲ್ಲಿ ಹಾಜರಾತಿ ಕೊರತೆಯಿಂದ ಪರೀಕ್ಷೆ ಬರೆಯಲು ಅರ್ಹತೆ ಇರುವುದಿಲ್ಲ. ವಿಶ್ವ ವಿದ್ಯಾಲಯಗಳ ಪರೀಕ್ಷೆ ಬರೆಯಲು ಆರ್‌ಜಿಯುಹೆಚ್‌ಎಸ್ ನಿಯಮಾನುಸಾರ ಮಾನದಂಡಗಳನ್ನು ಪೂರೈಸಿದ ವಿದ್ಯಾರ್ಥಿಗಳಿಗೆ ಮಾತ್ರ ಪರೀಕ್ಷೆ ಬರೆಯಲು ಅರ್ಹತೆ ದೊರೆಯುತ್ತದೆ. ಶೈಕ್ಷಣಿಕ ದಾಖಲೆಗಳ ಪ್ರಕಾರ ಕಮ್ಯೂನಿಟಿ ಮೆಡಿಸಿನ್ ಹಾಗೂ ಫೋರೆನ್ಸಿಕ್ ಮೆಡಿಸಿನ್ ವಿಷಯಗಳಲ್ಲಿ ಹಾಜರಾತಿ ಕೊರತೆ ಹಾಗೂ ಪಡೆದಿರುವ ಅಂಕಗಳಲ್ಲಿ ಅನರ್ಹತೆ ಇರುವುದರಿಂದ ಪರೀಕ್ಷೆ ಬರೆಯಲು ಅವಕಾಶ ದೊರೆಯುತ್ತಿಲ್ಲ ಎಂದು ಅವರು ತಿಳಿಸಿದ್ದಾರೆ.

ಆರ್‌ಜಿಯುಹೆಚ್‌ಎಸ್ ನಿಯಮಾನುಸಾರ ವಿದ್ಯಾರ್ಥಿನಿಗೆ ಪ್ರಸ್ತುತ ಸಾಲಿನ ವಿಶ್ವವಿದ್ಯಾಲಯ ಪರೀಕ್ಷೆ ಬರೆಯಲು ಸಾಧ್ಯವಿಲ್ಲದಿರುವಂತೆಯೇ ಈ ಸಂಸ್ಥೆಯಲ್ಲಿ ಒಟ್ಟು 13 ವಿದ್ಯಾರ್ಥಿಗಳು ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ಹಾಗೂ ಎನ್.ಎಂ.ಸಿ. ನಿಗದಿಪಡಿಸಿರುವ ಮಾನದಂಡಗಳನ್ನು ಪೂರೈಸದ ಹಿನ್ನೆಲೆಯಲ್ಲಿ ಪರೀಕ್ಷೆ ಬರೆಯಲು ಅನರ್ಹರಾಗಿದ್ದಾರೆ ಎಂದು ಅವರು ಮಾಹಿತಿ ನೀಡಿದ್ದಾರೆ.ಈ ಪ್ರಕರಣಕ್ಕೂ ಹಾಗೂ ಶಾಸಕರು,

ಜಿಲ್ಲಾಡಳಿತ, ಅಧಿಕಾರಿಗಳು, ಡೀನ್ ಹಾಗೂ ನಿರ್ದೇಶಕರು ಮತ್ತು ನ್ಯಾಯ ವೈದ್ಯ ಹಾಗೂ ವಿಧಿ ವೈದ್ಯಶಾಸ್ತ್ರ ವಿಭಾಗದ ಮುಖ್ಯಸ್ಥರಿಗೂ ಯಾವುದೇ ರೀತಿಯ ಸಂಬಂಧವಿಲ್ಲ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಭಾಷೆಯನ್ನು ಉಳಿಸಿ ಬೆಳಸುವ ಹೊಣೆಗಾರಿಕೆ ನಮ್ಮೆಲ್ಲರ ಮೇಲಿದೆ

**ಚಿತ್ರದುರ್ಗ:** ಕನ್ನಡ ನಮ್ಮ ಮಾತೃ ಭಾಷೆ, ಆಂಗ್ಲ ಭಾಷೆ ಪರಕೀಯ ಭಾಷೆ, ನಮ್ಮ ಮಾತೃ ಭಾಷೆಯನ್ನು ಹೆಚ್ಚಾಗಿ ಬಳಕೆ ಮಾಡಿ ಅದನ್ನು ಉಳಿಸಿ ಬೆಳಸುವ ಹೊಣೆಗಾರಿಕೆ ನಮ್ಮೆಲ್ಲ ಮೇಲಿದೆ ಅತ್ಯಂತ ಸುಮಧುರ ಭಾಷೆ ಕನ್ನಡ ಇದು ಅತ್ಯಂತ ಪ್ರಾಚೀನ ಭಾಷೆಗಳಲ್ಲಿ ಒಂದಾಗಿದೆ ಎಂದು ಹಿರಿಯೂರಿನ ಭೀಮನಬಂಡೆಯ ಯಜ್ಞವ ಪದವಿ ಪೂರ್ವ ಕಾಲೇಜಿನ ಕನ್ನಡ ಉಪನ್ಯಾಸಕರಾದ ಶಿವಾನಂದ್ ಬಂಡೆಹಳ್ಳಿ ತಿಳಿಸಿದರು.

ಶ್ರೀ ಗಾನಯೋಗಿ ಸಂಗೀತ ಬಳಗದವತಿಯಿಂದ ನಗರದ ಶ್ರೀಮತಿ. ಶಾರದಮ್ಮ ಶ್ರೀ ರುದ್ರಪ್ಪ ಕಲ್ಯಾಣ ಮಂಟಪದಲ್ಲಿ ಮಂಗಳವಾರ ಸಂಜೆ ಹಮ್ಮಿಕೊಂಡಿದ್ದ 70ನೇ ಕನ್ನಡ ರಾಜ್ಯೋತ್ಸವದಲ್ಲಿ ಭಾಗವಹಿಸಿ ಉಪನ್ಯಾಸ ನೀಡಿ ಮಾತನಾಡಿದ ಅವರು. ಕನ್ನಡದ ಬಗ್ಗೆ ಸರಿಯಾದ ತಿಳುವಳಿಕೆ ಹಾಗೂ ಅನುಭವಗಳು ಇಲ್ಲದ ಕಾರಣ ಭಾಷಾಪ್ರೇಮ ಮೂಲೆಗುಂಪಾಗುತ್ತಿದೆ ಕನ್ನಡ ಭಾಷೆ ನಮಗೆ ಸಂತೋಷ ನೀಡುವ, ಆನಂದ ಭಾಷ್ಪ ತರುವ ಶಕ್ತಿ ಹೊಂದಿದೆ. ಕನ್ನಡ ಲಿಪಿ ಅತ್ಯಂತ ಸುಂದರವಾದ ಲಿಪಿಯಾಗಿದೆ. ಜಗತ್ತಿನ ಅನೇಕ ವಿದ್ವಾಂಸರು ಕನ್ನಡ ಲಿಪಿಯನ್ನು ಸುಂದರವಾದ ಲಿಪಿಯೆಂದು ಹೇಳಿದ್ದಾರೆ ಪ್ರಾಚೀನ ಭಾಷೆಗಳಾದ ಸಂಸ್ಕೃತ, ಪಾಳಿ, ಪ್ರಾಕೃತ ಹಾಗೂ ತಮಿಳು ಭಾಷೆಗಳ ಸಾಲಿನಲ್ಲಿ ಕನ್ನಡ ಸೇರುತ್ತದೆ. ಕನ್ನಡದ 8 ಜನ ಸಾಹಿತಿಗಳು ಜ್ಞಾನಪೀಠ ಪುರಸ್ಕಾರ ಪಡೆದಿದ್ದಾರೆ. ಜ್ಞಾನಪೀಠ ಪ್ರಶಸ್ತಿ ಪಡೆದ



ಮಹನೀಯರ ಆ ಎಂಟು ಕೃತಿಗಳು ಅದ್ಭುತವಾಗಿವೆ. ಕನ್ನಡದ ಉಳಿವಿಗಾಗಿ ನಮ್ಮ ಪ್ರಯತ್ನ ಸಹ ಬೇಕು. ಕನ್ನಡಪರ ಕನಿಷ್ಠ ಪ್ರೇಮವನ್ನಾದರೂ ನಾವು ತೋರಬೇಕು. ಕನ್ನಡ ಬಳಸದ್ದಕ್ಕೆ ಕಾರಣ ನೀಡುವ, ಬೇರೆ ಭಾಷೆ ಬಳಸಿದ್ದಕ್ಕೆ ಸಮರ್ಥನೆ ಮಾಡುವುದನ್ನು ಬಿಟ್ಟು ಕನ್ನಡವನ್ನೇ ಎಲ್ಲಡೆ ಬಳಸಬೇಕು. ಕನ್ನಡ ಚಿರಸ್ಥಾಯಿಯಾಗಿ ಉಳಿಯಬೇಕು ಎಂದು ನುಡಿದರು.

ಬಹುಭಾಷೆಗಳ ನಡುವೆ ಕನ್ನಡದ ಸಾರ್ವಭೌಮತ್ವವನ್ನು ಹಾಗೂ ಆಸ್ಮಿತೆಯನ್ನು ಕಾಪಾಡುವ ಜವಾಬ್ದಾರಿ ನಮ್ಮೆಲರದ್ದಾಗಿದೆ. ಕನ್ನಡವನ್ನು ನಾವು ಉಳಿಸಿದರೆ ನಾವು ಕನ್ನಡವನ್ನು ಬೆಳಸಿದಂತೆ. ದೈನಂದಿನ ಜೀವನದಲ್ಲಿ ಕನ್ನಡ ಬಳಕೆಗೆ ಪ್ರಾಮುಖ್ಯತೆ ನೀಡಿದರೆ ಸಾಕು. ಅನಿವಾರ್ಯ ಸಂದರ್ಭಗಳಲ್ಲಿ ಮಾತ್ರ ಅನ್ಯ ಭಾಷೆಯನ್ನು ಬಳಸಬೇಕು. ಉಳಿದಂತೆ ಕನ್ನಡದಲ್ಲೇ ಮಾತನಾಡೋಣ, ಬರೆಯೋಣ. ಕನ್ನಡ ಸಾಹಿತ್ಯ ಅದ್ಭುತವಾಗಿದೆ. ಕನ್ನಡ ಸಾಹಿತ್ಯವನ್ನೇ ಓದೋಣ. ಅನ್ಯಭಾಷಿಕರಿಗೆ ಕನ್ನಡದ ಮಹತ್ವ ತಿಳಿಸೋಣ ಕನ್ನಡ ಕಲಿಸೋಣ. ನುಡಿ ಉಳಿದರೆ ನಾಡು ಉಳಿಯುತ್ತದೆ. ನಾಡು ಉಳಿದರೆ ನಾವು ಉಳಿಯಲು ಸಾಧ್ಯ ಎಂದು ತಿಳಿಸಿದರು.

ಶ್ರೀಮತಿ ಶಾಂತಮ್ಮ ಕೆ.ಟಿ. ಪ್ರಾಸ್ತಾವಿಕವಾಗಿ ಮಾತನಾಡಿ, ಕಳೆದ ಆರು ವರ್ಷಗಳ ಹಿಂದೆ ಶ್ರೀ ಗಾನಯೋಗಿ ಸಂಗೀತ ಬಳಗವನ್ನು ಚಿತ್ರದುರ್ಗದಲ್ಲಿ ಪ್ರಾರಂಭ ಮಾಡಲಾಯಿತು ಅಂದು ಕೇವಲ 15 ರಿಂದ 20 ಜನರಿದ್ದ ತಂಡ ಇದು 100 ಜನರಿಗೆ ತಲುಪಿದೆ ಇಲ್ಲಿ ಸಂಗೀತವನ್ನು ಕಲಿಸುವುದರ ಜೊತೆಗೆ ಮನಕ್ಕೆ ಆನಂದವನ್ನು ನೀಡುವಮತ ಕಾರ್ಯವನ್ನು ಮಾಡಲಾಗುತ್ತಿದೆ. ತೋಟಪ್ಪರವರು ಯಾವುದೇ ಫಲಾಪೇಕ್ಷೆ ಇಲ್ಲದೆ ಸಂಗೀತದ ಸೇವೆಯನ್ನು ಮಾಡುತ್ತಿದ್ದಾರೆ ಎಂದರು.


ಸಮಾರಂಭದ ಅಧ್ಯಕ್ಷತೆಯನ್ನು ಶ್ರೀ ಗಾನಯೋಗಿ ಸಂಗೀತ ಬಳಗದ ಅಧ್ಯಕ್ಷರಾದ ತೋಟಪ್ಪ ಉತ್ತಂಗಿ ವಹಿಸಿದ್ದರು. ಇದೇ ಸಂದರ್ಭದಲ್ಲಿ ಸಂಗೀತ ಶಿಕ್ಷಕರಾದ ವಿದೂಷಿ ಶ್ರೀಮತಿ ಮೀನಾಕ್ಷಿ ಭಟ್, ತಬಲಾ ವಾದಕರಾದ ಚಂದ್ರಪ್ಪ ಐಯಿತೋಳ್, ರಂಗ ಕಲಾವಿದರಾದ ಗದಿಗಯ್ಯ ಕಿತ್ತೂರಮಠ ಹಾಗೂ ಜಾನಪದ ಕಲಾವಿದರಾದ ಗಂಜಿಗಟ್ಟಿ ಆರ್ ಕೃಷ್ಣಮೂರ್ತಿಯವರನ್ನು ಸನ್ಮಾನಿಸಲಾಯಿತು.

ಶ್ರೀ ಗಾನಯೋಗಿ ಸಂಗೀತ ಬಳಗದ ಹಿರಿಯ ಸದಸ್ಯರಾದ ಶ್ರೀಮತಿ ಶಾರದಮ್ಮ ರುದ್ರಪ್ಪ, ಗೌರವಾಧ್ಯಕ್ಷರಾದ ಬಸವರಾಜ ಕಟ್ಟಿ, ಕಾರ್ಯಾಧ್ಯಕ್ಷರಾದ ನಂದೀಶ್ ಜಿ.ಟಿ, ಕಾರ್ಯದರ್ಶಿ, ಶ್ರೀಮತಿ ಶೋಭ ಮಲ್ಲಿಕಾರ್ಜುನ್, ಸದಸ್ಯರಾದ ಶ್ರೀಮತಿ ಸೌಭಾಗ್ಯ ರಾಜ್ ಹಾಗೂ ಜಿಲ್ಲಾ ಸಾಂಸ್ಕೃತಿಕ ಕಲಾವಿದರ ಸಂಘದ ಅಧ್ಯಕ್ಷರಾದ ಕರಿಯಪ್ಪ ಸಿ, ಜ್ಞಾನಮೂರ್ತಿ ಭಾಗವಹಿಸಿದ್ದರು.

ಶ್ರೀ ಗಾನಯೋಗಿ ಸಂಗೀತ ಬಳಗದ ಸದಸ್ಯರು ಪ್ರಾರ್ಥಿಸಿದರೆ, ಶ್ರೀಮತಿ ರೀನಾ ವೀರಭದ್ರಪ್ಪ ಸ್ವಾಗತಿಸಿದರು,

ಶ್ರೀಮತಿ ನಿರ್ಮಲಾ ಬಿ. ವಂದಿಸಿದರು. ಶ್ರೀಮತಿ ಗೀತಾ ರುದ್ರೇಶ್ ಕಾರ್ಯಕ್ರಮ ನಿರೂಪಿಸಿದರು. ಇದೇ ಸಂದರ್ಭದಲ್ಲಿ ಶ್ರೀ ಗಾನಯೋಗಿ ಸಂಗೀತ ಬಳಗದ ಸದಸ್ಯರಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು.

# ಕೆಂಪು ಕೋಟೆಯ ಬಳಿ ಸ್ಫೋಟದ ನಡೆಸಿದ ಉಗ್ರರಿಗೆ ಶಿಕ್ಷೆಯಾಗಬೇಕು ; ತರೂರ್



**ನವದೆಹಲಿ:** ಕೆಂಪು ಕೋಟೆಯ ಬಳಿ ನಡೆದ ದೆಹಲಿ ಸ್ಫೋಟದ ಕುರಿತು ಸರ್ಕಾರದ ಸಂಶೋಧನೆಗಳನ್ನು ಕಾಂಗ್ರೆಸ್ ಸಂಸದ ಶಶಿ ತರೂರ್ ಬೆಂಬಲಿಸಿದ್ದಾರೆ. ಭಯೋತ್ಪಾದಕ ದಾಳಿಗೆ ಶಿಕ್ಷೆಯಾಗದೆ ಇರಲು ಸಾಧ್ಯವಿಲ್ಲ ಎಂದು ತರೂರ್ ಹೇಳಿದರು ಮತ್ತು ಅಪರಾಧಿಗಳನ್ನು ನ್ಯಾಯಕ್ಕೆ ತರುವ ಸರ್ಕಾರದ ಮೇಲೆ ನಂಬಿಕೆ ಇಟ್ಟಿದ್ದಾರೆ.

ಫರಿದಾಬಾದ್‌ನ ಅಲ್–ಫಲಾಹ್ ವಿಶ್ವವಿದ್ಯಾಲಯದ ವೈದ್ಯ ಉಮರ್ ಮೊಹಮ್ಮದ್ ಅಲಿಯಾಸ್ ಉಮರ್ ಉನ್ ನಬಿ ಸ್ಫೋಟಗೊಂಡ ಕಾರಿನಲ್ಲಿ ಇದ್ದರು ಎಂದು ಡಿಎನ್ಎ ಪರೀಕ್ಷಾ ಫಲಿತಾಂಶಗಳು ದೃಢಪಡಿಸಿವೆ.ಸ್ಫೋಟ ಸ್ಥಳದಲ್ಲಿ ಕಂಡುಬಂದ ಡಿಎನ್ಎ ಮಾದರಿಗಳು ಡಾ. ಉಮರ್ ಅವರ ತಾಯಿಯೊಂದಿಗೆ ಹೊಂದಿಕೆಯಾಗುತ್ತವೆ.

ಕಠಿಣ ಶಿಕ್ಷೆಯನ್ನು ನೀವು ಪ್ರತಿಪಾದಿಸುತ್ತೀರಾ ಎಂದು ಕೇಳಿದಾಗ, ತರೂರ್ ಹೇಳಿದರು, ಈ ಹಂತದಲ್ಲಿ, ಸರ್ಕಾರ ಏನು ಮಾಡುತ್ತದೆ ಎಂದು ನಾನು ಊಹಿಸಲು ಬಯಸುವುದಿಲ್ಲ ಆದರೆ ಭಯೋತ್ಪಾದಕ ದಾಳಿಯು ಶಿಕ್ಷೆಯಿಂದ ತಪ್ಪಿಸಿಕೊಳ್ಳಲು ಸಾಧ್ಯವಿಲ್ಲ.ಸರ್ಕಾರ ಈಗಾಗಲೇ ಅಪರಾಧಿಗಳನ್ನು ಬೇಟೆಯಾಡುವುದಾಗಿ ಹೇಳಿದೆ, ಮತ್ತು ಅವರಲ್ಲಿ ಕೆಲವರು ಸ್ಫೋಟದ ಪ್ರಕ್ರಿಯೆಯಲ್ಲಿ ಸಾವನ್ನಪ್ಪಿದ್ದಾರೆ ಎಂದು ನಮಗೆ ತಿಳಿದಿದೆ. ಕೆಲವು ಸಿದ್ಧಾಂತಗಳೆಂದರೆ ಇನ್ನೂ ಹೆಚ್ಚಿನದನ್ನು ಯೋಜಿಸಲಾಗಿತ್ತು ಮತ್ತು ಅವುಗಳಲ್ಲಿ ಕೆಲವನ್ನು ತಡೆಯಲಾಗಿದೆ ಮತ್ತು ಅದಕ್ಕಾಗಿ ನಾವು ಕೃತಜ್ಞರಾಗಿರಬೇಕು ಎಂದು ನಾನು ಭಾವಿಸುತ್ತೇನೆ ಎಂದಿದ್ದಾರೆ.

# ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ: ಅರ್ಜಿ ಸಲ್ಲಿಕೆಯ ಅವಧಿ ವಿಸ್ತರಣೆ

**ಬಳ್ಳಾರಿ:** ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಪಿಯುಸಿ ಹೊರತುಪಡಿಸಿ ಉಳಿದ ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ–1ರ ಅಲೆಮಾರಿ/ಅರೆ ಅಲೆಮಾರಿ ವಿದ್ಯಾರ್ಥಿಗಳಿಂದ 2025–26ನೇ ಸಾಲಿಗೆ ನೀಡಲಾಗುತ್ತಿರುವ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ, ಅಲೆಮಾರಿ/ಅರೆ ಅಲೆಮಾರಿ ಜನಾಂಗದ ಮೆಟ್ರಿಕ್ ನಂತರದ ಅರ್ಹತಾ ವಿದ್ಯಾರ್ಥಿ ವೇತನ, ವಿದ್ಯಾಸಿರಿ ಊಟ ಮತ್ತು ವಸತಿ ಸಹಾಯ ಮತ್ತು ಶುಲ್ಕ ಮರುಪಾವತಿ ಕಾರ್ಯಕ್ರಮಗಳ ಸೌಲಭ್ಯಕ್ಕಾಗಿ ಈಗಾಗಲೇ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಕೆಯ ಅವಧಿಯನ್ನು ಡಿ.20 ರವರೆಗೆ ವಿಸ್ತರಿಸಲಾಗಿದೆ ಎಂದು ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಿಲ್ಲಾ ಪೊಲೀಸ್ ದೂರುಗಳ ಪ್ರಾಧಿಕಾರದಲ್ಲಿ ಸದಸ್ಯರ ನೇಮಕ: ಅರ್ಜಿ ಆಹ್ವಾನ

**ಬಳ್ಳಾರಿ:** ಜಿಲ್ಲಾ ಪೊಲೀಸ್ ದೂರುಗಳ ಪ್ರಾಧಿಕಾರಕ್ಕೆ ನಿವೃತ್ತ ನಾಗರೀಕ ಸೇವಾ ಅಧಿಕಾರಿ ಒಬ್ಬರನ್ನು ಸದಸ್ಯರಾಗಿ ಹಾಗೂ ನಾಗರೀಕ ಸಮಾಜದ ಒಬ್ಬರನ್ನು ಸದಸ್ಯರಾಗಿ ಕಾರ್ಯ ನಿರ್ವಹಿಸಲು ನೇಮಕ ಮಾಡಿಕೊಳ್ಳಲು ಉದ್ದೇಶಿಸಲಾಗಿದ್ದು, ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತರು ತಮ್ಮ ಸ್ವ–ವಿವರ ಹಾಗೂ ಇತ್ತೀಚಿನ ವಿಳಾಸದ ಮಾಹಿತಿಯೊಂದಿಗೆ ಅರ್ಜಿಯ ಜೊತೆಗೆ ಪೂರಕ ದಾಖಲೆಗಳೊಂದಿಗೆ ಡಿಸೆಂಬರ್ 11 ರೊಳಗಾಗಿ ಜಿಲ್ಲಾ ಪೊಲೀಸ್ ದೂರುಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳೂ ಆದ ಜಿಲ್ಲಾ ಪೊಲೀಸ್ ಅಧೀಕ್ಷಕರ ಕಚೇರಿಗೆ ಸಲ್ಲಿಸಬೇಕು.

ಹುದ್ದೆಗಳ ವಿವರ(ಸದಸ್ಯರು): ನಿವೃತ್ತ ನಾಗರೀಕ ಸೇವಾ ಅಧಿಕಾರಿ (ಸಹಾಯಕ ಆಯುಕ್ತರ ಶ್ರೇಣಿಗಿಂದ ಕಡಿಮೆಯಿಲ್ಲದ), ನಾಗರೀಕ ಸಮಾಜದ ಒಬ್ಬ ವ್ಯಕ್ತಿ.

ಹೆಚ್ಚಿನ ಮಾಹಿತಿಗಾಗಿ ದೂ.08392–258400 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಪೊಲೀಸ್ ಅಧೀಕ್ಷಕರಾದ ಡಾ.ಶೋಭಾರಾಣಿ ವಿ.ಜೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಲಾಭವನ ನಿರ್ವಹಣೆ ಅಚ್ಚುಕಟ್ಟಾಗಿ ನಿರ್ವಹಿಸಲು ಸೂಚನೆ

**ಹಾಸನ :** ನಗರದಲ್ಲಿರುವಕಲಾಭವನವನ್ನುಅತ್ಯಂತಅಚ್ಚುಕಟ್ಟಾಗಿ ನಿರ್ವಹಣೆ ಮಾಡುವುದರ ಮೂಲಕ ಕಲಾಸಕ್ತರ ಕಾರ್ಯಕ್ರಮಗಳಿಗೆ ಅವಕಾಶ ಕಲ್ಪಿಸಲುಅಪರಜಿಲ್ಲಾಧಿಕಾರಿ ಮಂಜುನಾಥ್ಅವರು ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಜಿಲ್ಲಾಧಿಕಾರಿಕಚೇರಿ ಸಭಾಂಗಣದಲ್ಲಿಇಂದು ನಡೆದ ಹಾಸನಾಂಬ ಕಲಾಭವನ ನಿರ್ವಹಣೆ ಮತ್ತು ಸಲಹಾ ಸಮಿತಿ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದಅವರು ಸ್ವಚ್ಚತೆಕಾಪಾಡಲುಕಸದ ಬುಟ್ಟಿಗಳನ್ನು ಇಡುವಂತೆ ಸೂಚಿಸಿದರಲ್ಲದೆ, ಪ್ಲಾಸ್ಟಿಕ್ ಬಳಕೆ ನಿಷೇಧಿಸಿ, ವಾಹನಗಳ ಕ್ರಮಬದ್ಧ ನಿಲುಗಡೆಗೆಕ್ರಮವಹಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಕಲಾಭವನದ ಹೊರಆವರಣಕ್ಕೆ ಬಾಡಿಗೆ ನಿಗದಿಪಡಿಸಲು ಲೋಕೋಪಯೋಗಿಇಲಾಖೆಯಿಂದದರಪಟ್ಟಿ ಪಡೆಯುವಂತೆ ತಿಳಿಸಿದರು.

ಕಲಾಭವನದ ಒಳಗೆ ಕಾರ್ಯಕ್ರಮ ನಡೆಯುವ ಸಂದರ್ಭದಲ್ಲಿ ಹೊರಆವರಣದಲ್ಲಿಧ್ವನಿ ವರ್ಧಕ ಅಳವಡಿಸದಂತೆ ಕ್ರಮವಹಿಸುವಂತೆ ತಿಳಿಸಿದರಲ್ಲದೆ, ಅನುಪಯುಕ್ತ ವಸ್ತುಗಳ ವಿಲೇವಾರಿಗೆಕ್ರಮವಹಿಸಲು ತಿಳಿಸಿದರು.

ಸಾರ್ವಜನಿಕರುತಮ್ಮ ಅನಿಸಿಕೆಗಳನ್ನು ಬರೆಯಲುಒಂದುರಿಜಿಸ್ಟರ್ಇಡುವಂತೆ ಸೂಚಿಸಿದರಲ್ಲದೆ, ಅನಿಸಿಕೆಗಳನ್ನು ಆಧಾರಿಸಿ ಕೆಲವು ಮಾರ್ಪಾಡುಗಳನ್ನು ಮಾಡಲು ಸಹಾಯವಾಗುತ್ತದೆಎಂದರಲ್ಲದೆ, ಕಲೆ ಬಗ್ಗೆ ಹೆಚ್ಚಿನ ಆಸಕ್ತಿವಹಿಸಿ ನಗರದಕಲಾಭವನಕ್ಕೆಅಗತ್ಯವಿರುವ ಸೌಲಭ್ಯಒದಗಿಸಲುಕ್ರಮವಹಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಕಲಾಭವನದ ಬಾಡಿಗೆ ಪರಿಷ್ಕರಣೆಗೆ ಶೇ.10 ರಷ್ಟು ಹೆಚ್ಚಳ ಮಾಡಲು ಸಮಿತಿ ಸಭೆಯಲ್ಲಿತೀರ್ಮಾನಿಸಲಾಯಿತು.

ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಬಾಬು, ಜಿಲ್ಲಾಧಿಕಾರಿಕಚೇರಿ ಸಹಾಯಕರಾದರಮೇಶ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರಾದತಾರಾನಾಥ್,ಕಲಾವಿದರಾದಗ್ಯಾರಂಟಿರಾಮಣ್ಣ ಮತ್ತಿತರರು ಸಭೆಯಲ್ಲಿ ಹಾಜರಿದ್ದರು.

# ಇಂಡೋನೇಷ್ಯಾದಲ್ಲಿ ಭೂ ಕುಸಿತ, ಇಬ್ಬರ ದುರ್ಮರಣ, 21 ಮಂದಿ ನಾಪತ್ತೆ

**ಜಕಾರ್ತ:** ಇಂಡೋನೇಷ್ಯಾದ ಜಾವಾ ದ್ವೀಪದಲ್ಲಿ ಧಾರಾಕಾರ ಮಳೆಯಿಂದ ಉಂಟಾದ ಭೂಕುಸಿತದಲ್ಲಿ ಇಬ್ಬರು ಸಾವನ್ನಪ್ಪಿದ್ದು, 21 ಜನರು ಕಾಣೆಯಾಗಿದ್ದಾರೆ. ಕಾಣೆಯಾದ 21 ಜನರಿಗಾಗಿ ರಕ್ಷಣಾ ಕಾರ್ಯಕರ್ತರು ಇನ್ನೂ ಹುಡುಕಾಟ ನಡೆಸುತ್ತಿದ್ದಾರೆ.ಈ ಪ್ರದೇಶದಲ್ಲಿ ಹಲವಾರು ದಿನಗಳ ಭಾರೀ ಮಳೆಯಿಂದಾಗಿ ಇಂಡೋನೇಷ್ಯಾದ ಮಧ್ಯ ಜಾವಾ ಪ್ರಾಂತ್ಯದ ಮೂರು ಹಳ್ಳಿಗಳಲ್ಲಿ ಡಜನ್‌ಗಟ್ಟಲೆ ಮನೆಗಳಿಗೆ ಭೂಕುಸಿತ ಸಂಭವಿಸಿದೆ ಎಂದು ಅಧಿಕಾರಿಗಳು ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಇಂತಹ ಸಮಯದಲ್ಲಿ ಬಲಿಪಶುಗಳನ್ನು ಹುಡುಕುವಲ್ಲಿ ಅಸ್ಥಿರ ನೆಲದ ಪರಿಸ್ಥಿತಿಗಳು ಶೋಧ ಮತ್ತು ರಕ್ಷಣಾ ತಂಡಕ್ಕೆ ಸವಾಲನ್ನು ಒಡ್ಡಿದವು.

ಆದಾಗ್ಯೂ, ಜಂಟಿ ತಂಡವು ಇಂದು ಬೆಳಿಗ್ಗೆ ತಮ್ಮ ಶೋಧ ಮತ್ತು ರಕ್ಷಣಾ ಪ್ರಯತ್ನಗಳನ್ನು ಮುಂದುವರೆಸಿತು ಎಂದು ರಾಷ್ಟ್ರೀಯ ವಿಪತ್ತು ನಿರ್ವಹಣಾ ಸಂಸ್ಥೆಯ ವಕ್ತಾರ ಅಬ್ದುಲ್ ಮುಹಾರಿ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಕಾರ್ಯಾಚರಣೆಯನ್ನು ವೇಗಗೊಳಿಸಲು ಭಾರೀ ಉಪಕರಣಗಳನ್ನು ನಿಯೋಜಿಸಲಾಗಿದೆ ಎಂದು ಅವರು ಹೇಳಿದರು.

ಅಕ್ಟೋಬರ್ ನಿಂದ ಮಾರ್ಚ್ ವರೆಗೆ ಸುರಿಯುವ ಭಾರೀ ಮಳೆಯಿಂದಾಗಿ ಇಂಡೋನೇಷ್ಯಾದಲ್ಲಿ ಆಗಾಗ್ಗೆ ಪ್ರವಾಹ ಮತ್ತು ಭೂಕುಸಿತ ಉಂಟಾಗುತ್ತದೆ. ಇದು 17,000 ದ್ವೀಪಗಳ ದ್ವೀಪಸಮೂಹವಾಗಿದ್ದು, ಲಕ್ಷಾಂತರ ಜನರು ಪರ್ವತ ಪ್ರದೇಶಗಳಲ್ಲಿ ಅಥವಾ ಫಲವತ್ತಾದ ಪ್ರವಾಹ ಪ್ರದೇಶಗಳ ಬಳಿ ವಾಸಿಸುತ್ತಿದ್ದಾರೆ.

ಜನವರಿಯಲ್ಲಿ, ಮಧ್ಯ ಜಾವಾ ಪ್ರಾಂತ್ಯದಲ್ಲಿ ಧಾರಾಕಾರ ಮಳೆಯ ನಂತರ ಪ್ರವಾಹ ಮತ್ತು ಭೂಕುಸಿತಗಳಲ್ಲಿ ಕೊಚ್ಚಿಹೋಗಿ 20 ಕ್ಕೂ ಹೆಚ್ಚು ನಿವಾಸಿಗಳು ಸಾವನ್ನಪ್ಪಿದರು.

# ದೇಶದ ಹೃದಯ ಸಂವಿಧಾನ: ಲಿಡ್ಕರ್ ಅಧ್ಯಕ್ಷ ಮುಂಡರಗಿ ನಾಗರಾಜ ಅಭಿಮತ



**ಬಳ್ಳಾರಿ:** ಭಾರತದ ಸಂವಿಧಾನ ನಮ್ಮ ದೇಶದ ಹೃದಯ ಇದ್ದಂತೆ ಎಂದು ಡಾ.ಬಾಬು ಜಗನ್ ಜೀವನ್ ರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಮುಂಡರಗಿ ನಾಗರಾಜ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಮತ್ತು ಸಮಾಜ ಕಲ್ಯಾಣ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ನಗರದ ಮಹರ್ಷಿ ವಾಲ್ಮೀಕಿ ಭವನದಲ್ಲಿ ಬುಧವಾರ ಏರ್ಪಡಿಸಿದ್ದ ಸಂವಿಧಾನ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಭಾರತ ವೈವಿಧ್ಯತೆಯಿಂದ ಕೂಡಿರುವ ದೇಶ. ಹೀಗಾಗಿ ಭಾರತೀಯ ಸಂವಿಧಾನ ರಚಿಸುವುದು ಸುಲಭದ ಕೆಲಸವಾಗಿರಲಿಲ್ಲ. ಎಲ್ಲಾ ಧರ್ಮಗಳು, ನಂಬಿಕೆಗಳು, ಜಾತಿಗಳು ಮತ್ತು ವೈವಿಧ್ಯಮಯ ಸಿದ್ಧಾಂತಗಳ ಜನರ ಒಟ್ಟುಗೂಡಿಸುವುದು ಕಷ್ಟಕರವಾಗಿತ್ತು. ಸಂವಿಧಾನವನ್ನು ರಚಿಸುವಾಗ ಸಾಮಾನ್ಯರ ಜೀವನವನ್ನು ಸುಧಾರಣೆ ತರುವ ತತ್ವಗಳನ್ನು ಸೇರಿಸಿ ಜಾರಿಗೆ ತರಲಾಯಿತು ಎಂದು ತಿಳಿಸಿದರು.

ಪ್ರಸ್ತುತ ಸಮಾಜದಲ್ಲಿ ಓದು ಮತ್ತು ಜ್ಞಾನದಿಂದ ಮಾತ್ರ ಸಮಸ್ಯೆ ಎದುರಿಸಲು ಸಾಧ್ಯ. ಮಕ್ಕಳಿಗೆ ಉಜ್ವಲ ಭವಿಷ್ಯವಿದ್ದು, ಅಂಬೇಡ್ಕರ್ ರಂತೆ ಅಪಾರ ಜ್ಞಾನ ಹೊಂದಿ, ಮೊಬೈಲ್ ಗೀಳಿಗೆ ಬೀಳದೇ ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಉತ್ತಮ ನಾಗರಿಕನಾಗಿ ಬಾಳುವುದಾಗಿ ಮಕ್ಕಳು ಸಂಕಲ್ಪ ಹೊಂದಬೇಕು ಎಂದರು.

ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಮಾತನಾಡಿ, ವಿದ್ಯಾರ್ಥಿಗಳು ಸಂವಿಧಾನವನ್ನು ತಿಳಿದುಕೊಂಡು ಅರ್ಥೈಸಿಕೊಳ್ಳಬೇಕು. ಇದು ಭವಿಷ್ಯದಲ್ಲಿ ಪ್ರಮುಖ ಪಾತ್ರವಹಿಸಲಿದೆ. ಜಗತ್ತಿನ ಅತಿದೊಡ್ಡ ಸಂವಿಧಾನವನ್ನು ಡಾ.ಬಿ.ಆರ್ ಅಂಬೇಡ್ಕರ್ ಅವರು ಭಾರತೀಯರಿಗೆ ನೀಡಿದ್ದಾರೆ. ಸಂವಿಧಾನವನ್ನು ರಚಿಸಲು ಅನೇಕರ ಶ್ರಮವಿದೆ. ಬಾಬಾ ಸಾಹೇಬರು ಸಂವಿಧಾನ ಕರಡು ರಚನಾ ಸಮಿತಿಯ ಅಧ್ಯಕ್ಷತೆ ವಹಿಸಿ ಪ್ರಪಂಚದ ಎಲ್ಲಾ ಸಂವಿಧಾನಗಳನ್ನು ಅಧ್ಯಯನ ಮಾಡಿ ನಮ್ಮ ದೇಶದ ಆರ್ಥಿಕ ಮತ್ತು ಸಾಮಾಜಿಕ ಸ್ಥಿತಿಗೆ ಹೊಂದುವಂತೆ ಒಂದು ಸಮಗ್ರವಾದ ಸಂವಿಧಾನವನ್ನು ಸಿದ್ಧಪಡಿಸಿದ್ದಾರೆ. ನಮ್ಮ ಸಂವಿಧಾನ ವಿಶ್ವದ ಅತಿದೊಡ್ಡ ಲಿಖಿತ ಸಂವಿಧಾನವಾಗಿದೆ ಎಂದು ತಿಳಿಸಿದರು.

ಭಾರತವನ್ನು ಸಾರ್ವಭೌಮ, ಜಾತ್ಯತೀತ, ಸಮಾಜವಾದಿ ಮತ್ತು ಪ್ರಜಾಸತ್ತಾತ್ಮಕ ಗಣತಂತ್ರ ದೇಶ ಎಂದು ಸಂವಿಧಾನದಲ್ಲಿ ಘೋಷಿಸಲಾಗಿದೆ. ಇಲ್ಲಿರುವ ಪ್ರತಿಯೊಬ್ಬ ಪ್ರಜೆಗೂ ಸಮಾನತೆ, ನ್ಯಾಯ ಮತ್ತು ಸ್ವಾತಂತ್ರ ಒದಗಿಸಲಾಗಿದೆ. ಭಾರತದ ಸಂವಿಧಾನವನ್ನು ವಿಶ್ವದ ಶ್ರೇಷ್ಠ ಸಂವಿಧಾನಗಳಲ್ಲಿ ಒಂದು ಎಂದು ಪರಿಗಣಿಸಲಾಗಿದೆ. ಸಾಮಾನ್ಯರು ಅತ್ಯುನ್ನತ ಪದವಿ ಅಲಂಕರಿಸಲು ಸಂವಿಧಾನವೇ ಮೂಲ ಕಾರಣ ಎಂದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ಅವರು ಮಾತನಾಡಿ, ಸಂವಿಧಾನವನ್ನು ಕೇವಲ ಓದಿದರೆ ಸಾಲದು. ಸಂವಿಧಾನದ ಆಶಯ ಮತ್ತು ಅದರ ಮೌಲ್ಯಗಳನ್ನು ಅಳವಡಿಸಿಕೊಂಡಾಗ ಮಾತ್ರ ಭಾರತ ದೇಶ ಸುಸ್ಥಿರ ಅಭಿವೃದ್ಧಿ ಹೊಂದಲಿದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಗಂಗಾವತಿಯ ಎಸ್‌ಕೆಎನ್‌ಜಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಹಾಯಕ ಪ್ರಾಧ್ಯಾಪಕ ಬಾರಿಕರ ಫಣಿರಾಜ ಅವರು ವಿಶೇಷ ಉಪನ್ಯಾಸ ನೀಡಿದರು.

ಕಾರ್ಯಕ್ರಮದಲ್ಲಿ 'ನನ್ನ ಮತ ನನ್ನ ಹಕ್ಕು' ಎಂಬ ಧ್ಯೇಯವಾಕ್ಯದ ಮಹತ್ವ ತಿಳಿಯಲು ಹಮ್ಮಿಕೊಂಡಿದ್ದ ಸ್ಪರ್ಧೆಗಳಲ್ಲಿ ವಿಜೇತರಾದ ಸ್ಪರ್ಧಾರ್ಥಿಗಳನ್ನು ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಮಹಾನಗರ ಪಾಲಿಕೆಯ ಮೇಯರ್ ಪಿ.ಗಾದೆಪ್ಪ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ ವಿ.ಜೆ., ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಚಿದಾನಂದ, ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಶಾಷು ಮೋದಿನ್, ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಜಲಾಲಪ್ಪ, ಬಳ್ಳಾರಿ ತಾಲ್ಲೂಕು ತಹಶೀಲ್ದಾರ ರೇಖಾ, ಸಫಾಯಿ ಕರ್ಮಚಾರಿಗಳ ಜಿಲ್ಲಾ ಮಟ್ಟದ ಜಾಗೃತಿ ಸಮಿತಿಯ ಸದಸ್ಯ ಕಂದಕೂರ ರಾಮುಡು, ಮಹಾನಗರ ಪಾಲಿಕೆ ಸದಸ್ಯ ಹನುಮಂತಪ್ಪ, ಮುಖಂಡರಾದ ಮಾನಯ್ಯ, ಎಲ್.ಮಾರೆಣ್ಣ, ಡಿ.ವೆಂಕಮ್ಮ, ಕಮಲ ಮರಿಸ್ವಾಮಿ, ಬೌದ್ಧ ಧರ್ಮ ಗುರು ಕಮಲರತ್ನ ಬಜೆಂತಿ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು, ವಿವಿಧ ಶಾಲಾ–ಕಾಲೇಜುಗಳ ವಿದ್ಯಾರ್ಥಿಗಳು, ವಿವಿಧ ವಸತಿ ನಿಲಯಗಳ ಪ್ರಾಂಶುಪಾಲರು, ವಿದ್ಯಾರ್ಥಿಗಳು ಮತ್ತು ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳು, ಸದಸ್ಯರು, ಎನ್‌ಎಸ್‌ಎಸ್ ಘಟಕ, ಸ್ಕೌಟ್ಸ್ ಮತ್ತು ಗೈಡ್ಸ್ ಘಟಕದ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

## ಗಮನ ಸೆಳೆದ ಬೃಹತ್ ಜಾಥ

ಸಂವಿಧಾನ ದಿನಾಚರಣೆ ಅಂಗವಾಗಿ ಹಮ್ಮಿಕೊಂಡಿದ್ದ ಜಾಥವು ನೋಡುಗರ ಗಮನ ಸೆಳೆಯಿತು. ಜಾಥಾಗೆ ಮೇಯರ್ ಪಿ.ಗಾದೆಪ್ಪ, ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ., ಜಿಪಂ ಸಿಇಒ ಮಹಮ್ಮದ್ ಹಾರೀಸ್ ಸುಮೇರ್ ಅವರು ಹಸಿರು ನಿಶಾನೆ ತೋರಿಸಿ ಸೈಕಲ್ ಸವಾರಿ ಮಾಡುವ ಚಾಲನೆ ನೀಡಿದರು.

ಜಾಥಾದಲ್ಲಿ ಶಾಲಾ–ಕಾಲೇಜು ಮಕ್ಕಳು ಸಂವಿಧಾನ ಕುರಿತಂತೆ ರಾಷ್ಟ್ರಧ್ವಜ ಮತ್ತು ಸಂವಿಧಾನದ ಪ್ರಮುಖ ಕಲಂಗಳು, ಭಾಗಗಳು ಹಾಗೂ ಪ್ರಮುಖ ನುಡಿಮುತ್ತುಗಳನ್ನು ಪ್ಲಕಾರ್ಡ್ ನಲ್ಲಿ ಪ್ರತಿಬಿಂಬಿಸುವಂತೆ ಪ್ರದರ್ಶಿಸುವುದರ ಮೂಲಕ ಸಾಗಿದರು.

ಭಾರತ ಮಾತೆಯ ಜೊತೆಗೆ ಮಹಾತ್ಮ ಗಾಂಧೀಜಿ, ಜವಾಹರಲಾಲ್ ನೆಹರು, ಗೌತಮ ಬುದ್ಧ, ವಿಶ್ವಗುರು ಬಸವಣ್ಣ, ಡಾ.ಬಿ.ಆರ್. ಅಂಬೇಡ್ಕರ್, ಝಾನ್ಸಿ ರಾಣಿ ಲಕ್ಷ್ಮೀಬಾಯಿ ಒಳಗೊಂಡ ಮಹನೀಯರ ವೇಷಧಾರಿ ಮಕ್ಕಳು ಗಮನಸೆಳೆದರು.

# ಮಂದಿರ ಮಸೀದಿಗಳಿಗಿಂತ ಶಾಲೆಗಳೇ ಮುಖ್ಯ



**ಚಿಕ್ಕಮಗಳೂರು:** ಮಂದಿರ ಮಸೀದಿಗಳು ಶಾಂತಿ ನೆಮ್ಮದಿಯ ಕೇಂದ್ರಗಳಾದರೆ, ಶಾಲೆಗಳು ಜ್ಞಾನವನ್ನು ನೀಡಿ ಬದುಕನ್ನುರೂಪಿಸುತ್ತವೆ . ಹಾಗಾಗಿ ಮಂದಿರ ಮಸಿದಿಗಳಿಗಿಂತ ಶಾಲೆಗಳೇ ಮುಖ್ಯಎಂದು ಶಾಸಕ ಹೆಚ್ ಡಿ ತಮ್ಮಯ್ಯ ಹೇಳಿದರು.

ಸಖರಾಯಪಟ್ಟಣದಲ್ಲಿ ನೂತನವಾಗಿ ನಿರ್ಮಿಸಿದ ಸರಕಾರಿಕಿರಿಯಉರ್ದು ಪ್ರಾಥಮಿಕ ಶಾಲೆಯಕಟ್ಟಡವನ್ನು ಉದ್ಘಾಟಿಸಿ ಮಾತನಾಡಿ, ನಮ್ಮ ಸರಕಾರದ ಮೊದಲ ಆದ್ಯತೆ ಶಿಕ್ಷಣ. ಅದರೊಟ್ಟಿಗೆಆರೋಗ್ಯ ಮತ್ತುಅಭಿವೃದ್ಧಿಗೂ ಪ್ರಾದಾನ್ಯತೆಇದೆ. ಇತ್ತೀಚೆಗೆ ಸರಕಾರಿ ಶಾಲೆಗಳು ಉತ್ತಮವಾಗಿಕಾರ್ಯ ನಿರ್ವಹಿಸುತ್ತಿವೆ.

ಅವುಗಳಿಗೆ ಮೂಲ ಸೌಕರ್ಯಗಳನ್ನು ಕೊಡಲು ನಮ್ಮ ಸರಕಾರ ಸಿದ್ಧವಿದೆ. ನಮ್ಮದೇಶಜಾತ್ಯಾತೀತ ವಾಗಿದ್ದು, ನಾವೆಲ್ಲರೂ ಭಾರತೀಯರೆಂಬ ಹೆಮ್ಮೆಇರಬೇಕು. ನಮ್ಮ ಮಾತೃ ಭಾಷೆಯನ್ನುಉಸಿರಾಗಿ ,ಜೀವನಕ್ಕಾಗಿಇಂಗ್ಲೀಷ ಭಾಷೆ. ಬೇರೆ ಭಾಷೆಗಳಿಗೆ ಗೌರವಕೊಡಬೇಕು. ನಮ್ಮ ಸರಕಾರಯಾವುದೇಅಭಿವೃದ್ಧಿಯಲ್ಲಿ ಹಿಂದೆ ಬಿದ್ದಿಲ್ಲ. ಸಖರಾಯಪಟ್ಟಣ ಮತ್ತು ಲಕ್ಯಾಡಮಬರೀಕರಣಕ್ಕೆ 30 ಕೋಟಿ ಮೀಸಲಿಟ್ಟಿದೆ.

ಚಿಕ್ಕಮಗಳೂರಿನಲ್ಲಿ ಉರ್ದುಅಕಾಡೆಮಿಯನ್ನು ಸ್ಥಾಪಿಸಲು ಜಾಗವನ್ನುಗೊತ್ತು ಮಾಡಲಾಗುವುದುಎಂದರು.

ಪ್ರಾಸ್ತಾವಿಕವಾಗಿ ಬಿಇಒ ಬಹರುದ್ದೀನ್‌ಚೋಪ್ದಾರ್ ಮಾತನಾಡಿ, ರಾಜ್ಯ ವಲಯಯೋಜನೆಯಡಿಯಲ್ಲಿ ಸುಮಾರು 17 ಲಕ್ಷ ರೂ.ಗಳಲ್ಲಿ ಉತ್ತಮಕಟ್ಟಡವನ್ನು ನಿರ್ಮಾಣ ಮಾಡಿದೆ. ನಮ್ಮ ಶಾಸಕರು ಶಿಕ್ಷಣದ ಬಗ್ಗೆ ಹೆಚ್ಚು ಕಾಳಜಿ ವಹಿಸುತ್ತಿದ್ದಾರೆ. ಅಡುಗೆ ಮನೆ, ಶೌಚಾಲಯ, ಕುಡಿಯುವ ನೀರು, ಸೇರಿದಂತೆ ಮೂಲ ಸೌಕರ್ಯಗಳನ್ನು ಒದಗಿಸುವಂತೆ ಶಾಸಕರಲ್ಲಿ ಮನವಿ ಮಾಡಿದರು.

ಬ್ಲಾಕ್‌ಕಾಂಗ್ರೆಸ್‌ಅಧ್ಯಕ್ಷ ಮಹಡಿಮನೆ ಸತೀಶ್ ಮಾತನಾಡಿ, ಕಟ್ಟಡಅತ್ಯುತ್ತಮವಾಗಿ ನಿರ್ಮಾಣವಾಗಿದೆ.

ಅದಕ್ಕೆ ಪೋಷಕರು ಮಕ್ಕಳನ್ನು ಶಾಲೆಗೆ ಸೇರಿಸಿ ಮಕ್ಕಳಿಗೆ ಉತ್ತಮ ಬದುಕನ್ನುರೂಪಿಸಬೇಕು ಎಂದರು.

ಪಿಎಲ್ಡಿ ಬ್ಯಾಂಕ್ ನಿರ್ದೇಶಕಆನಂದನಾಯ್ಕ ಮಾತನಾಡಿ, ಕುವೆಂಪು ಹೇಳಿದಂತೆ ಜಾತ್ಯಾತೀತರಾಷ್ಟ್ರ ವಾದ್ದರಿಂದಎಲ್ಲರಿಗೂ ಸಮಾನತೆ ಯಿದೆ. ಮಸೀದಿ ಮಂದಿರಗಳನ್ನು ಯಾವರೀತಿ ನಿರ್ವಹಣೆ ಮಾಡುತ್ತೇವೆಯೇಅದೇರೀತಿ ಶಾಲೆಗಳನ್ನು ನಿರ್ಮಾಣ ಮಾಡಬೇಕು. ಈ ನಿಟ್ಟಿನಲ್ಲಿ ಶಾಸಕರುಉತ್ತಮವಾಗಿ ಸ್ಪಂದಿಸುತ್ತಿದ್ದಾರೆಎಂದರು.

ಈ ಸಂದರ್ಭದಲ್ಲಿಕಾಂಗ್ರೆಸ್‌ಕಿಸಾನ್ ಸೆಲ್ಲ್‌ನಅಧ್ಯಕ್ಷಅಕ್ಮಲ್ ,ಗ್ರಾಪಂ. ಅಧ್ಯಕ್ಷೆರಾಜಮ್ಮ ಮಾತನಾಡಿದರು.

ಈ ಸಂದರ್ಭದಲ್ಲಿಗ್ರಾಪಂ. ಉಪಾಧ್ಯಕ್ಷೆತಾರಾ, ಸದಸ್ಯರಾದ ದಿನೇಶ್‌ಗೌಡ, ಫೈರೋಝ್‌ಖಾನ್, ಚೇತನ್, ಸುಮನ್, ಗಣೇಶ್‌ಗೌಡ, ದೊಡ್ಡಮ್ಮ, ಜರೀನಾಬಿ, ಶಕುಂತಲಾ, ಪಿಡಿಒ ಲತಾ, ಶಿಕ್ಷಕರ ಸಂಘದಜಗದೀಶ್, ಜಿಲ್ಲಾಗ್ಯಾರೆಂಟಿಯೋಜನೆಯಉಪಾಧ್ಯಕ್ಷ ಮಂಜುನಾಥ್, ಎಸ್ಡಿಎಂಸಿ ಅಧ್ಯಕ್ಷರಫೀಕ್, ಮಸೀದಿ ಅಧ್ಯಕ್ಷ ಫಯಾಝ್, ಶಿಕ್ಷಕರು ಮಕ್ಕಳು ಹಾಜರಿದ್ದರು. ಸ್ವಾಗತವನ್ನು ಮುಖ್ಯ ಶಿಕ್ಷಕಿ ಖುರ್ಷಿದ್ದಾರ, ಶಿಕ್ಷಕಿ ಮಂಜುಳ ನಿರೂಪಿಸಿ ವಂದಿಸಿದರು.

# ಜೀವನದ ಸಂದೇಹಗಳಿಗೆ ಸಂವಿಧಾನದಲ್ಲಿ ಉತ್ತರವಿದೆ




**ಶಿವಮೊಗ್ಗ :** ಜೀವನದಲ್ಲಿ ಯಾವುದೇ ರೀತಿಯ ಸಂಶಯ, ಸಂದೇಹಗಳು ಎದುರಾದಲ್ಲಿ ನಮ್ಮ ಸಂವಿಧಾನ ಓದಿದರೆ ಉತ್ತರ ಸಿಗುತ್ತದೆ ಎಂದು ಜಿಲ್ಲಾಧಿಕಾರಿಗಳಾದ ಗುರುದತ್ತ ಹೆಗಡೆ ನುಡಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ, ಮಹಾನಗರಪಾಲಿಕೆ, ಶಾಲಾ ಶಿಕ್ಷಣ ಮತ್ತು ಕಾಲೇಜು ಶಿಕ್ಷಣ ಇಲಾಖೆ ಶಿವಮೊಗ್ಗ ಇವರ ಸಂಯುಕ್ತಾಶ್ರಯದಲ್ಲಿ ಬುಧವಾರ ನಗರದ ಅಂಬೇಡ್ಕರ್ ಭವನದಲ್ಲಿ ಏರ್ಪಡಿಸಲಾಗಿದ್ದ ಸಂವಿಧಾನ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಎಲ್ಲರನ್ನೂ ಸಮಾನತೆಯಿಂದ ಕಾಣಲು, ಎಲ್ಲ ರೀತಿಯ ನ್ಯಾಯ ಒದಗಿಸಲು ಮಾರ್ಗಸೂಚಿಯಾಗಿರುವ ನಮ್ಮ ಸಂವಿಧಾನವನ್ನು ಮಕ್ಕಳು ಸೇರಿದಂತೆ ಎಲ್ಲರೂ ಓದಿ, ತಿಳಿದುಕೊಳ್ಳಬೇಕು ಎಂದು ಕರೆ ನೀಡಿದರು.

ಸಂವಿಧಾನಕ್ಕೆ ಸಾಕಷ್ಟು ಆಯಾಮಗಳಿದ್ದು, ಇದನ್ನು ಓದಿ ಅರ್ಥ ಮಾಡಿಕೊಳ್ಳಬೇಕು. ಇದರ ಮಹತ್ವ ತಿಳಿಯಲು ಸಾಕಷ್ಟು ಚಿಂತನೆ ನಡೆಸಬೇಕು. ನಾನು ಐಎಎಸ್ ಮಾಡುವಾಗ ಪ್ರತಿ ಸಲ ಸಂವಿಧಾನ ಓದಿದಾಗಲೂ ಹೊಸ ಹೊಸ ಅರ್ಥ ಮತ್ತು ಪ್ರೇರಣೆ ಲಭಿಸುತ್ತಿತ್ತು. ನಮ್ಮ ಮಕ್ಕಳು ಸಂವಿಧಾನದ ಮೂಲಭೂತ ಉದ್ದೇಶ, ಇದು ನೀಡಿರುವ ಹಕ್ಕುಗಳು, ಬಾಧ್ಯತೆಗಳನ್ನು ತಿಳಿದುಕೊಳ್ಳಬೇಕು. ಅಧಿಕಾರಿಗಳಾದ ನಮಗೆ ಎಲ್ಲರನ್ನೂ ಸಮಾನತೆಯಿಂದ ಕಾಣುವ, ಎಲ್ಲ ರೀತಿಯ ನ್ಯಾಯ ಒದಗಿಸಲು ಕಲಿಸಿಕೊಟ್ಟ ಸಂವಿಧಾನದ ಮಾರ್ಗದಲ್ಲಿ ನಡೆಯುವ ಮೂಲಕ ಮಾದರಿಯಾಗಬೇಕು ಎಂದರು.

ಕರ್ನಾಟಕ ಪಬ್ಲಿಕ್ ಶಾಲೆಯ ಶಿಕ್ಷಕರಾದ ಡಾ. ಬಸವರಾಜಪ್ಪ ಎಂ. ವಿಶೇಷ ಉಪನ್ಯಾಸ ನೀಡಿ ಮಾತನಾಡಿ,

1930 ರ ನ.26 ರಂದು ದೇಶ ಪೂರ್ಣ ಸ್ವರಾಜ್ಯ ಘೋಷಿಸಿದ್ದು, ಇದರ ಸ್ಮರಣಾರ್ಥ 1949 ರ ನ.26 ರಂದು ಸಂವಿಧಾನವನ್ನು ಅಂಗೀಕರಿಸಲಾಯಿತು.

ಸಮಾಜದ ಸ್ವಾಸ್ಥ್ಯ ಕಾಪಾಡಲು ನಮ್ಮ ಸರ್ಕಾರ ವಿದ್ಯಾರ್ಥಿಗಳಿಗೆ ಸಂವಿಧಾನ ಪೀಠಿಕೆ ಓದು ಕಾರ್ಯಕ್ರಮ ಜಾರಿಗೊಳಿಸಿದೆ. ಸಂವಿಧಾನವನ್ನು ಅರ್ಥ ಮಾಡಿಕೊಂಡರೆ ಡಾ. ಬಿ.ಆರ್. ಅಂಬೇಡ್ಕರ್‌ರವರನ್ನು ಅರ್ಥ ಮಾಡಿಕೊಂಡಂತೆ. ಪ್ರತಿ ಮನೆಗಳಲ್ಲಿ ಸಂವಿಧಾನ ಪುಸ್ತಕ ಇರಬೇಕು. ಮೂಲ ಸಂವಿಧಾನದ ಆಶಯಗಳನ್ನು ನಾವು ಬದುಕಬೇಕು ಎಂದರು.

. ಸಂವಿಧಾನದ ಭಾಗಗಳಲ್ಲಿ ಸಿಂಧೂ ಕಣಿವೆ ನಾಗರೀಕ ಮುದ್ರೆ, ಗುರುಕುಲದ ದೃಶ್ಯ, ರಾಮಾಯಣದ ಒಂದು ದೃಶ್ಯ, ರಾಜ್ಯ ನಿರ್ದೇಶಕ ತತ್ವಗಳ ಬಗ್ಗೆ ಹೇಳುವಾಗ ಭಗವದ್ಗೀತೆಯ ಕೃಷ್ಣಾರ್ಜುನರ ದೃಶ್ಯ, ಬುದ್ದನ ಪ್ರಥಮ ಉಪದೇಶದ ಚಿತ್ರ, ಮಹಾವೀರನ ಅಹಿಂಸಾ ತತ್ವ ದೃಶ್ಯ, ಬೌದ್ಧ ಸನ್ಯಾಸಿಗಳೊಂದಿಗೆ ಅಶೋಕನ ಚಿತ್ರ, ಗಂಧರ್ವರ ದೃಶ್ಯ, ರಾಜ ವಿಕ್ರಮಾದಿತ್ಯ, ನಳಂದ ವಿಶ್ವವಿದ್ಯಾಲಯ, ನಟರಾಜನ ವಿಗ್ರಹ, ಮೊಗಲ್ ಆಸ್ಥಾನದ ವಾಸ್ತುಶಿಲ್ಪ, ಶಿವಾಜಿ, ಗುರುಗೋವಿಂದ್, ಲಕ್ಷ್ಮಿ ಬಾಯಿ, ಟಿಪ್ಪು ಸುಲ್ತಾನ್, ಗಾಂಧೀಜಿ ದಂಡಿ ಸತ್ಯಾಗ್ರಹ, ಹೀಗೆ ವಿವಿಧ ಐತಿಹಾಸಿಕ, ಭೌಗೋಳಿಕತೆಯ ಚಿತ್ರಗಳನ್ನು ಬಳಸಲಾಗಿದೆ ಎಂದು ವಿವರಿಸಿದರು.

ಕಾರ್ಯಕ್ರಮದಲ್ಲಿ ಸಂವಿಧಾನ ಪೀಠಿಕೆಯನ್ನು ಬೋಧಿಸಲಾಯಿತು.

ಕಾರ್ಯಕ್ರಮದಲ್ಲಿ ಜಿ.ಪಂ. ಸಿಇಓ ಹೇಮಂತ್ ಎನ್, ಡಿವೈಎಸ್‌ಪಿ ಬಾಬು ಅಂಜಿನಪ್ಪ, ಶಿವಮೊಗ್ಗ ಎಸಿ ಸತ್ಯನಾರಾಯಣ, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಡಿ.ಮಲ್ಲೇಶಪ್ಪ, ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಶ್ರೀನಿವಾಸ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಉಮೇಶ್, ಜಿಲ್ಲಾ ಮಟ್ಟದ ಅಧಿಕಾರಿಗಳು, ವಿವಿಧ ಸಂಘಟನೆಗಳ ಮುಖಂಡರು, ವಿದ್ಯಾರ್ಥಿಗಳು ಹಾಜರಿದ್ದರು.

# ಸಾಲದ ವಿಮಾ ಮೊತ್ತ ನೀಡಲು ಇನ್ಶೂರೆನ್ಸ್ ಕಂಪನಿಗೆ ಆದೇಶ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ ತೀರ್ಪು

**ಚಿಕ್ಕಮಗಳೂರು:** ಸಾಲಗಾರ ಸಾವಿಗೀಡಾದ ಪ್ರಕರಣದಲ್ಲಿ ಸಾಲದ ಮೇಲೆ ಪಡೆದಿದ್ದ ವಿಮಾ ಪಾಲಿಸಿಯ ಹಣವನ್ನು ನೀಡದ ಇನ್ಶೂರೆನ್ಸ್ ಕಂಪನಿ ವಿರುದ್ಧ ತೀರ್ಪು ನೀಡಿರುವ ನಗರದ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗವು ಸಾಲದ ಮೊತ್ತ 25 ಲಕ್ಷ ರೂ. ಹಾಗೂ ಪರಿಹಾರವಾಗಿ 60 ಸಾವಿರ ರೂ.ಗಳನ್ನು ನೀಡುವಂತೆ ಆದೇಶ ನೀಡಿದೆ.

ಅಜ್ಜಂಪುರ ಗ್ರಾಮದ ಬಿ.ಕಲ್ಲೇಶಪ್ಪ ಎಂಬುವವರು ಟೀಚರ್‌ಸ್ ಕೋ–ಆಪರೇಟಿವ್ ಬ್ಯಾಂಕ್‌ನ ಚಿಕ್ಕಮಗಳೂರು ಶಾಖೆಯಿಂದ ಸಾಲ ಪಡೆದಿದ್ದು, ಈ ಸಂಬಂಧ ಹೆಚ್.ಡಿ.ಎಫ್.ಸಿ. ಲೈಫ್ ಇನ್ಶೂರೆನ್ಸ್ ಕಂಪನಿಯಿಂದ 25 ಲಕ್ಷ ರೂ.ಗಳ ಜೀವವಿಮೆ ಪಡೆದುಕೊಂಡಿದ್ದರು. ಸಂಭವಿಸಿದ ಅಪಘಾತದ ಪರಿಣಾಮವಾಗಿ ಕಲ್ಲೇಶಪ್ಪ ಅವರು 2023ರ ಜುಲೈ 26 ರಂದು ಸಾವಿಗೀಡಾಗಿದ್ದರು. ಈ ಹಿನ್ನೆಲೆಯಲ್ಲಿ ಸಾಲ ಮರುಪಾವತಿ ಸಾಧ್ಯವಾಗದಿದ್ದಾಗ ಮೃತ ಕಲ್ಲೇಶಪ್ಪ ಅವರ ಪತ್ನಿ ಬಿ.ಎಂ.ಸುನೀತ, ಪುತ್ರಿಯರಾದ ಬಿ.ಕೆ.ಕೀರ್ತನಾ, ಬಿ.ಕೆ. ಅಮೂಲ್ಯ ಕೋರಿದರೂ ಮುಂಬೈನ ಬಂದ್ರಾ(ಪೂರ್ವ)ದ ಹೆಚ್.ಡಿ.ಎಫ್.ಸಿ. ಲೈಫ್ ಇನ್ಶೂರೆನ್ಸ್ ಕಂಪನಿ ವಿಮಾ ಮೊತ್ತವನ್ನು ನೀಡಲು ವಿಫಲವಾಯಿತು ಎನ್ನಲಾಗಿದೆ. ಈ ಹಿನ್ನೆಲೆಯಲ್ಲಿ ಸುನೀತ ಹಾಗೂ ಅವರ ಇಬ್ಬರು ಪುತ್ರಿಯರು ವಿಮಾ ಕಂಪನಿಯ ವ್ಯವಸ್ಥಾಪಕರ ವಿರುದ್ಧ ನಗರದ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗಕ್ಕೆ 2024ರ ಆಗಸ್ಟ್ 19 ರಂದು ದೂರು ಸಲ್ಲಿಸಿದ್ದರು.ಈ ಬಗ್ಗೆ ವಿಚಾರಣೆ ನಡೆಸಿದ ಆಯೋಗವು ಅಕ್ಟೋಬರ್ 31 ರಂದು ತೀರ್ಪು ನೀಡಿದ್ದು, ಇನ್ಶೂರೆನ್ಸ್ ಕಂಪನಿಯು ದೂರುದಾರರಿಗೆ ವಿಮಾ ಪರಿಹಾರವಾಗಿ 25 ಲಕ್ಷ ರೂ.ಗಳನ್ನು 2023ರ ಸೆಪ್ಟಂಬರ್ 29 ರಿಂದ ವಾರ್ಷಿಕ ಶೇ.9ರ ಬಡ್ಡಿ ದರದಲ್ಲಿ ನೀಡುವಂತೆ ಹಾಗೂ ಪರಿಹಾರವಾಗಿ 60 ಸಾವಿರ ರೂ.ಗಳು ಮತ್ತು ಪ್ರಕರಣದ ಖರ್ಚು–ವೆಚ್ಚಕ್ಕಾಗಿ 10 ಸಾವಿರ ರೂ.ಗಳನ್ನು ನೀಡುವಂತೆ ಆದೇಶ ನೀಡಿದೆ. ಆಯೋಗದ ಅಧ್ಯಕ್ಷರಾದ ಎನ್.ಆರ್.ಚೆನ್ನಕೇಶವ, ಸದಸ್ಯರಾದ ಈ.ಪ್ರೇಮಾ ಮತ್ತು ಡಾ.ಮಂಜುನಾಥ ಬಮ್ಮನಕಟ್ಟಿ ಇವರುಗಳು ಈ ಆದೇಶವನ್ನು ನೀಡುವ ಮೂಲಕ ಇನ್ಶೂರೆನ್ಸ್ ಕಂಪನಿಯು ಸೇವಾ ನ್ಯೂನತೆ ಎಸಗಿರುವುದನ್ನು ಎತ್ತಿಹಿಡಿದು ಗ್ರಾಹಕರ ಹಿತರಕ್ಷಣೆ ಮಾಡಿದೆ. ಪ್ರಕರಣದಲ್ಲಿ ದೂರುದಾರರ ಪರವಾಗಿ ವಕೀಲರಾದ ಬಿ.ಎಂ.ಲಕ್ಷ್ಮಣಗೌಡ ಅವರು ವಾದ ಮಂಡಿಸಿದ್ದರು.

# ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿಯರ ಹುದ್ದೆಗೆ ಅರ್ಜಿ ಆಹ್ವಾನ

**ಶಿವಮೊಗ್ಗ:** ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಜಿಲ್ಲೆಯ 07 ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯಲ್ಲಿ ಖಾಲಿ ಇರುವ ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿಯರ ಹುದ್ದೆಗಳನ್ನು ಗೌರವಧನ ಸೇವೆ ಆಧಾರದ ಮೇಲೆ ಭರ್ತಿ ಮಾಡಲು ಅರ್ಜಿ ಆಹ್ವಾನಿಸಲಾಗಿದೆ.

ಭದ್ರಾವತಿಯಲ್ಲಿ 19 ಅಂಗನವಾಡಿ ಕಾರ್ಯಕರ್ತೆಯರು ಮತ್ತು 59 ಸಹಾಯಕಿಯರು, ಹೊಸನಗರದಲ್ಲಿ 6 ಅಂಗನವಾಡಿ ಕಾರ್ಯಕರ್ತೆಯರು ಮತ್ತು 144 ಸಹಾಯಕಿಯರು, ಸಾಗರದಲ್ಲಿ 3 ಅಂಗನವಾಡಿ ಕಾರ್ಯಕರ್ತೆಯರು ಮತ್ತು 62 ಸಹಾಯಕಿಯರು, ಶಿಕಾರಿಪುರದಲ್ಲಿ 1 ಅಂಗನವಾಡಿ ಕಾರ್ಯಕರ್ತೆಯರು ಮತ್ತು 23 ಸಹಾಯಕಿಯರು, ಶಿವಮೊಗ್ಗದಲ್ಲಿ 16 ಅಂಗನವಾಡಿ ಕಾರ್ಯಕರ್ತೆಯರು ಮತ್ತು 93 ಸಹಾಯಕಿಯರು, ಸೊರಬದಲ್ಲಿ 3 ಅಂಗನವಾಡಿ ಕಾರ್ಯಕರ್ತೆಯರು ಮತ್ತು 42 ಸಹಾಯಕಿಯರು ತೀರ್ಥಹಳ್ಳಿಯಲ್ಲಿ 11 ಅಂಗನವಾಡಿ ಕಾರ್ಯಕರ್ತೆಯರು ಮತ್ತು 69 ಸಹಾಯಕಿಯರ ಹುದ್ದೆಗಳು ಖಾಲಿ ಇವೆ.ಅರ್ಜಿ ಸಲ್ಲಿಸಲು ಡಿ.15 ಕೊನೆಯ ದಿನಾಂಕವಾಗಿದ್ದು, ಅರ್ಹ ಅಭ್ಯರ್ಥಿಗಳು ವೆಬ್‌ಸೈಟ್ https://karnemakaone.kar.nic.in/abcd/ ಮೂಲಕ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಮೇಲಿನ ವೆಬ್‌ಸೈಟ್ ಅಥವಾ ಸಂಬಂಧಿಸಿದ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಕಚೇರಿಗೆ ಸಂಪರ್ಕಿಸಬಹುದೆಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕಿ ಭಾರತಿ ಬಣಕಾರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶೋಭಾಯಾತ್ರೆ ಹಿನ್ನೆಲೆ: ವಾರದ ಸಂತೆ ಮುಂದೂಡಿಕೆ

**ಚಿಕ್ಕಮಗಳೂರು :** ನಗರದಲ್ಲಿ ಡಿಸೆಂಬರ್ 3ರ ದತ್ತ–ಜಯಂತಿ ಕಾರ್ಯಕ್ರಮದ ಪ್ರಯುಕ್ತ ಜರುಗುವ ಶೋಭಾಯಾತ್ರೆ ಸಂದರ್ಭದಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವ ಸಲುವಾಗಿ ಮತ್ತು ಸುಗಮ ಸಂಚಾರದ ಹಿತದೃಷ್ಟಿಯಿಂದ ಮುಂಜಾಗೃತಾ ಕ್ರಮವಾಗಿ ಅಂದೇ ನಗರದಲ್ಲಿ ನಡೆಯಲಿರುವ ವಾರದ ಸಂತೆಯನ್ನು ಮುಂದಿನ ಸೂಕ್ತ ದಿನಾಂಕಕ್ಕೆ ಮುಂದೂಡಿಕೊಳ್ಳುವಂತೆ ಸೂಚಿಸಿ ಜಿಲ್ಲಾ ದಂಡಾಧಿಕಾರಿಗಳು ಹಾಗೂ ಜಿಲ್ಲಾಧಿಕಾರಿಗಳು ಆದ ಸಿ.ಎನ್.ಮೀನಾ ನಾಗರಾಜ್ ಅವರು ಆದೇಶ ಹೊರಡಿಸಿದ್ದಾರೆ.

## ಕೇಂದ್ರ ಸಚಿವರ ಜಿಲ್ಲಾ ಪ್ರವಾಸ

**ಚಿಕ್ಕಮಗಳೂರು :** ಮಾನ್ಯ ಕೇಂದ್ರ ಶಿಕ್ಷಣ ಸಚಿವ ಶ್ರೀ ಧರ್ಮೇಂದ್ರ ಪ್ರಧಾನ್ ಅವರು ನವೆಂಬರ್ 29 ಹಾಗೂ 30 ರಂದು ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳುವರು.
ನವೆಂಬರ್ 29 ರಂದು ಶೃಂಗೇರಿಗೆ ಆಗಮಿಸುವ ಸಚಿವರು ರಾತ್ರಿ ವಾಸ್ತವ್ಯ ಮಾಡುವರು. ನವೆಂಬರ್ 30 ರಂದು ಬೆಳಿಗ್ಗೆ 7 ರಿಂದ 8 ಗಂಟೆವರೆಗೆ ಶಾರದಾ ಪೀಠದಲ್ಲಿ ನಡೆಯುವ ಖಾಸಗಿ ಕಾರ್ಯಕ್ರಮದಲ್ಲಿ ಭಾಗವಹಿಸುವ ಸಚಿವರು, ಬೆಳಿಗ್ಗೆ 9 ಗಂಟೆಗೆ ಶೃಂಗೇರಿಯಿಂದ ಮಂಗಳೂರಿಗೆ ತೆರಳುವರು ಎಂದು ಕೇಂದ್ರ ಶಿಕ್ಷಣ ಸಚಿವಾಲಯದ ಪ್ರಕಟಣೆ ತಿಳಿಸಿದೆ.

# ನಗರದಲ್ಲಿ ಕನಿಷ್ಠ 5 ವರ್ಷ ಶಾಶ್ವತ ಗುಣಮಟ್ಟದ ರಸ್ತೆಗಳಾಗಬೇಕು : ಶಾಸಕ ತಮ್ಮಯ್ಯ

**ಚಿಕ್ಕಮಗಳೂರು**–ನಗರದ ಎಲ್ಲಾ ರಸ್ತೆಗಳು ಸಮಗ್ರವಾಗಿ ಅಭಿವೃದ್ಧಿಪಡಿಸಿದ ಬಳಿಕ ಕನಿಷ್ಠ 5 ವರ್ಷ ಶಾಶ್ವತವಾಗಿ ಗುಣಮಟ್ಟದ ರಸ್ತೆಗಳಾಗಬೇಕು. ಈ ನಿಟ್ಟಿನಲ್ಲಿ ಸ್ಥಳೀಯರ ಸಹಭಾಗಿತ್ವದ ಜೊತೆಗೆ ನಗರಸಭೆ ಸದಸ್ಯರು ಕ್ರಮವಹಿಸಬೇಕು ಎಂದು ಶಾಸಕ ಹೆಚ್.ಡಿ ತಮ್ಮಯ್ಯ ತಿಳಿಸಿದರು.



ಅವರು ನಗರಸಭೆ ವ್ಯಾಪ್ತಿಯ ವಾರ್ಡ್ ಸಂಖ್ಯೆ 8 ರಲ್ಲಿ 'ಸೈಕಲ್ ತುಳಿ ಜನರ ಸಮಸ್ಯೆ ತಿಳಿ' ಕಾರ್ಯಕ್ರಮದಡಿಯಲ್ಲಿ ಜಯನಗರ ಬಡಾವಣೆಯ ಶ್ರೀ ಸಾಯಿಮಂದಿರದ ರಸ್ತೆ ಹಾಗೂ ಹೊಸಮನೆ ಬಡಾವಣೆಯ ಮುಖ್ಯರಸ್ತೆಯ ಡಾಂಬರೀಕರಣ ಕಾಮಗಾರಿಗೆ ಗುದ್ದಲಿ ಪೂಜೆ ನೆರವೇರಿಸಿ ಮಾತನಾಡಿದರು.

ನಗರದ ರಸ್ತೆಗಳ ಬಗ್ಗೆ ಹಾಗೂ ಜನರ ಸಮಸ್ಯೆಗಳನ್ನು ಅರಿಯಲು 'ಸೈಕಲ್ ತುಳಿ ಜನರ ಸಮಸ್ಯೆ ತಿಳಿ' ಅಂತಿಮ ದಿನದ ಕಾರ್ಯಕ್ರಮದಲ್ಲಿ ಹಲವಾರು ಸಮಸ್ಯೆಗಳಿಗೆ ಸ್ಥಳದಲ್ಲೇ ಅಧಿಕಾರಿಗಳಿಂದ ಪರಿಹರಿಸುವ ಭರವಸೆ ನೀಡಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದ ರಾಜ್ಯಸರ್ಕಾರಕ್ಕೆ ಮನವಿ ಮಾಡಿದ ಮೇರೆಗೆ 10 ಕೋಟಿ ವಿಶೇಷ ಅನುದಾನ ನಗರಸಭೆಗೆ ಹಾಗೂ 2.50 ಕೋಟಿ ಅನುದಾನ ಪಿಡಬ್ಲೂಡಿ ಗೆ ಮತ್ತು ಈಗ 10 ಕೋಟಿ ಸೇರಿ ಒಟ್ಟು 20 ಕೋಟಿ ರೂ ವೆಚ್ಚದಲ್ಲಿ ನಗರದ ಎಲ್ಲಾ ನಾಗರಿಕರ ಅವಶ್ಯಕತೆಗಳಿಗುಣವಾಗಿ ಪ್ರಮುಖ ರಸ್ತೆಗಳನ್ನು ಡಾಂಬರೀಕರಣ ಮತ್ತು ಕಾಂಕ್ರೀಟ್ ರಸ್ತೆ ನಿರ್ಮಾಣ ಮಾಡುತ್ತಿದ್ದೇವೆ ಎಂದರು.

ಜಯನಗರ ಬಡಾವಣೆಯ ರಸ್ತೆ ಅಭಿವೃದ್ಧಿಗೆ 26 ಲಕ್ಷರೂ., ಕೆಎಂ ರಸ್ತೆಯಿಂದ ದೊಡ್ಡೇಗೌಡರ ಮನೆವರೆಗೆ 19 ಲಕ್ಷರೂ., ಎಸ್ಪಿ ಕಚೇರಿಯಿಂದ ಅರಣ್ಯ ಇಲಾಖೆ ಕಚೇರಿವರೆಗೆ 30.85 ಲಕ್ಷರೂ. ಅನುದಾನ ಮೀಸಲಿಟ್ಟಿದ್ದು, ಗುಣಮಟ್ಟದ ಶಾಶ್ವತ ಕಾಮಗಾರಿ ಮಾಡುವಂತೆ ಅಧಿಕಾರಿಗಳು ಮತ್ತು ಗುತ್ತಿಗೆದಾರರಿಗೆ ಸೂಚಿಸಿದರು.

ನೆನೆಗುದಿಗೆ ಬಿದ್ದಿರುವ ಆಶ್ರಯ ನಿವೇಶನ ಮತ್ತು ಇಂದಿರಾಗಾಂಧಿ ಬಡಾವಣೆಯಲ್ಲಿ ವಾಸಿಸುತ್ತಿರುವವರಿಗೆ ಶೀಘ್ರದಲ್ಲೇ ಹಕ್ಕುಪತ್ರ ವಿತರಿಸುವುದಾಗಿ ಭರವಸೆ ನೀಡಿದರು.

ಹಿಂದಿನ ಬಿಜೆಪಿ ಸರ್ಕಾರದ ಅವಧಿಯಲ್ಲಿ ಮಂಜೂರಾಗಿದ್ದ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗೆ ರಾಜ್ಯಸರ್ಕಾರ ಪೂರ್ಣಪ್ರಮಾಣದ ಹಣ ಮಂಜೂರು ಮಾಡಿದೆ. ಇನ್ನು ಒಂದೂವರೆ ವರ್ಷದಲ್ಲಿ ಎಲ್ಲಾ ರೀತಿಯ ವೈದ್ಯರನ್ನೊಳಗೊಂಡ ವ್ಯವಸ್ಥೆ ಮಾಡಿ, ಸಾರ್ವಜನಿಕರಿಗೆ ಆಸ್ಪತ್ರೆಯನ್ನು ಸಮರ್ಪಿಸುತ್ತೇವೆಂದು ಹೇಳಿದರು.

ನಗರಸಭಾಧ್ಯಕ್ಷೆ ಶೀಲಾದಿನೇಶ್ ಮಾತನಾಡಿ, ನಮ್ಮ ವಾರ್ಡಿನಿಂದಲೇ ಸೈಕಲ್ ತುಳಿ ಸಮಸ್ಯೆ ತಿಳಿ ಘೋಷಣೆಯೊಂದಿಗೆ ಆರಂಭವಾದ ನಗರ ಪ್ರದಕ್ಷಿಣೆ ಕಾರ್ಯಕ್ರಮ ಯಶಸ್ವಿಯಾಗಿ ನಡೆದಿದ್ದು, ನಗರವನ್ನು ಸುಂದರವಾಗಿ ಅಭಿವೃದ್ಧಿಗೊಳಿಸಲು ಶಾಸಕರು ಶ್ರಮಿಸುತ್ತಿದ್ದಾರೆ ಎಂದರು.

ನಗರಸಭೆ ಸದಸ್ಯ ಎ.ಸಿ ಕುಮಾರೇಗೌಡ ಮಾತನಾಡಿ, ಶಾಸಕಾಂಗ, ಕಾರ್ಯಾಂಗ, ನ್ಯಾಯಾಂಗ ಸದೃಢವಾಗಿ ಚಾಲನೆಗೆ ತರುವ ಕೆಲಸ ಆಗಬೇಕಿದ್ದು, ಶಾಸಕ ಹೆಚ್.ಡಿ ತಮ್ಮಯ್ಯನವರು ನಗರದ 35 ವಾರ್ಡ್‌ಗಳಲ್ಲಿಯೂ ಯಾವುದೇ ತಾರತಮ್ಯವಿಲ್ಲದೆ "ಸೈಕಲ್ ತುಳಿ ಸಮಸ್ಯೆ ತಿಳಿ" ಘೋಷಣೆಯೊಂದಿಗೆ ಜನರ ಆಶೋತ್ತರಗಳಿಗೆ ಸ್ಪಂದಿಸುತ್ತಿದ್ದಾರೆಂದು ಶ್ಲಾಘಿಸಿದರು.

ಜನರ ಬಳಿಗೆ ಎಲ್ಲಾ ಇಲಾಖೆಯ ಅಧಿಕಾರಿಗಳನ್ನು ಕರೆತಂದು ಸಮಸ್ಯೆಗಳನ್ನು ಸ್ಥಳದಲ್ಲಿಯೇ ಪರಿಹರಿಸುತ್ತಿರುವುದಕ್ಕೆ ಶಾಸಕರನ್ನು ಅಭಿನಂದಿಸಿದರು.

ಈ ಸಂದರ್ಭದಲ್ಲಿ ನಗರಸಭೆ ಉಪಾಧ್ಯಕ್ಷೆ ಲಲಿತಾನಾಯ್ಕ್, ಸಿಡಿಎ ಅಧ್ಯಕ್ಷ ನಯಾಜ್ ಅಹಮದ್, ಮಾಜಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಂ.ಎಲ್ ಮೂರ್ತಿ, ಪೌರಾಯುಕ್ತ ಬಿ.ಸಿ ಬಸವರಾಜ್, ಜೇಮ್ಸ್, ರಫೀಕ್, ಆರಾಧ್ಯ, ದಿನೇಶ್, ದೊಡ್ಡೇಗೌಡ ಮತ್ತಿತರರು ಉಪಸ್ಥಿತರಿದ್ದರು.

# ದಾವಣಗೆರೆಯಿಂದ ಮಂತ್ರಾಲಯಕ್ಕೆ ನೂತನ ಬಸ್ ಮಾರ್ಗಕ್ಕೆ ಪ್ರಭಾ ಮಲಿಕಾರ್ಜುನ ಚಾಲನೆ



**ದಾವಣಗೆರೆ:** ಇಂದಿನಿಂದ ದಾವಣಗೆರೆ ಕೆ.ಎಸ್.ಆರ್.ಟಿಯಿಂದ ದಾವಣಗೆರೆ, ಚಿತ್ರದುರ್ಗ, ಬಳ್ಳಾರಿ ಹಾಗೂ ಮಂತ್ರಾಲಯ ಮಾರ್ಗವಾಗಿ ಹವಾನಿಯಂತ್ರಿತ ವೋಲ್ವೋ ನೂತನ ಬಸ್ ಸೇವೆಗೆ ಸಂಸದೆ ಪ್ರಭಾ ಮಲ್ಲಿಕಾರ್ಜುನ ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿದರು.

ಅವರು ನಗರದ ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣದಲ್ಲಿ ಮಂಗಳವಾರ ನೂತನ ನಾನ್ ಹವಾನಿಯಂತ್ರಿತ ವೋಲ್ವೋ ಬಸ್ ಸೇವೆಗೆ ಚಾಲನೆ ನೀಡಿದರು.

**ಮಾರ್ಗದ ವಿವರ:** ದಾವಣಗೆರೆ ಕೆ.ಎಸ್.ಆರ್.ಟಿ.ಸಿ ನಿಲ್ದಾಣದಿಂದ ರಾತ್ರಿ 9 ಕ್ಕೆ ಹೊರಟು ಚಿತ್ರದುರ್ಗ, ಚಳ್ಳಕೆರೆ, ಬಳ್ಳಾರಿ ಮಾರ್ಗವಾಗಿ ಬೆಳಗಿನ ಜಾವ 4 ಗಂಟೆಗೆ ಗಮ್ಯಸ್ಥಳ ಮಂತ್ರಾಲಯ ತಲುಪಲಿದೆ. ಈ ಮಾರ್ಗವೂ 325 ಕಿ.ಮೀ ಪ್ರಯಾಣ ದೂರವಿದ್ದು, ಪುನಃ ಮಂತ್ರಾಲಯದಿಂದ ಬೆಳಗ್ಗೆ 11 ಕ್ಕೆ ಹೊರಟು ಅದೇ ಮಾರ್ಗವಾಗಿ ಸಂಜೆ 6 ಕ್ಕೆ ದಾವಣಗೆರೆ ಬಸ್ ನಿಲ್ದಾಣ ತಲುಪಲಿದೆ.ದಾವಣಗೆರೆಯಿಂದ ಮಂತ್ರಾಲಯಕ್ಕೆ ರೂ.600 ಚಿತ್ರದುರ್ಗದಿಂದ ರೂ.547, ಚಳ್ಳಕೆರೆಯಿಂದ ರೂ.515, ಬಳ್ಳಾರಿಯಿಂದ ರೂ.296 ಪ್ರಯಾಣ ದರ ನಿಗದಿಪಡಿಸಲಾಗಿದೆ ಈ ಬಸ್ ಸೇವೆಯು ಪ್ರತಿನಿತ್ಯ ದೊರೆಯಲಿದೆ ಎಂದು ಸಂಸದೆ ಪ್ರಭಾ ಮಲ್ಲಿಕಾರ್ಜುನ ಮಾಹಿತಿ ನೀಡಿದರು.

.ಈ ವೇಳೆ ವಿಭಾಗೀಯ ನಿಯಂತ್ರಧಿಕಾರಿ ಬಿ.ಎಸ್.ಶಿವಕುಮಾರಯ್ಯ, ಮಾರ್ಗ ನಿಯಂತ್ರಣಾಧಿಕಾರಿ ಫಕ್ರುದ್ದೀನ್, ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕಿ ರೇಷ್ಮಾ ಕೌಸರ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಕುತೂಹಲ ಕೆರಳಿಸಿದ ಡಿಕೆಶಿ–ಸತೀಶ್ ಜಾರಕಿಹೊಳಿ ಮಿಡ್‌ನೈಟ್ ಮೀಟಿಂಗ್

**ಬೆಂಗಳೂರು, ನ.26–** ಮಲ್ಲಿಕಾರ್ಜುನ ಖರ್ಗೆ ದೆಹಲಿ ಪ್ರವಾಸದ ಹೊರತಾಗಿಯೂ ಅಧಿಕಾರ ಹಂಚಿಕೆಯ ಗೊಂದಲ ಇತ್ಯರ್ಥವಾಗದೆ, ಮತ್ತಷ್ಟು ಗೊಂದಲ ಮೂಡಿಸಿದೆ. ಈ ನಡುವೆ ಡಿ.ಕೆ.ಶಿವಕುಮಾರ್ ಅವರು ಸಚಿವ ಸತೀಶ ಜಾರಕಿಹೊಳಿಯನ್ನು ಭೇಟಿ ಮಾಡಿರುವುದು ತೀವ್ರ ಕುತೂಹಲ ಕೆರಳಿಸಿದೆ.

ಇತ್ತ ಬೆಂಗಳೂರಿನಲ್ಲಿ ಕೆಪಿಸಿಸಿ ಅಧ್ಯಕ್ಷ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಮನ್ನು ಮುಖ್ಯಮಂತ್ರಿ ಮಾಡಿ ಎಂದು ಕೇಳಿಲ್ಲ ಎಂದ–ರೆ, ಮುಖ್ಯಮಂತ್ರಿ ಸಿದ್ದರಾಮಯ್ಯ ಅಧಿಕಾರ ಹಂಚಿಕೆಯ ಗೊಂದಲಗಳನ್ನು ಬಗೆಹರಿಸಿ ಕೊಡಬೇಕು ಎಂದು ಒತ್ತಾಯಿಸಿದರು. ಕಳೆದ 15 ದಿನಗಳಿಂದ ಹಾದಿರಂಪ–ಬೀದಿರಂಪವಾಗಿರುವ ಅಧಿಕಾರ ಹಂಚಿಕೆ ಗೊಂದಲ ಖರ್ಗೆ ಅವರು ದೆಹಲಿಗೆ ಭೇಟಿ ನೀಡಿದ ಬಳಿಕ ಇತ್ಯರ್ಥಗೊಳ್ಳಬಹುದು ಎಂದು ಹೇಳಲಾಗಿತ್ತು. ಆದರೆ ದೆಹಲಿಯಲ್ಲಿ ಸಂವಿಧಾನ ದಿನಾಚರಣೆ ಸಂಭ್ರಮದಲ್ಲಿ ಭಾಗವಹಿಸಿ, ಮಲ್ಲಿಕಾರ್ಜುನ ಖರ್ಗೆ ಬರಿ ಕೈಯಲ್ಲಿ ವಾಪಸ್ ಬರುವ ಸಾಧ್ಯತೆ ಇದೆ.

ಉನ್ನತ ಮೂಲಗಳ ಪ್ರಕಾರ ಖರ್ಗೆ ಅವರು ಮತ್ತೆ ಗುರುವಾರ ದೆಹಲಿಗೆ ತೆರಳಲಿದ್ದು, ಶುಕ್ರವಾರ ಅಥವಾ ಶನಿವಾರ ದೆಹಲಿಯಲ್ಲಿ ಉನ್ನತ ಮಟ್ಟದ ಸಭೆ ನಡೆಯಲಿದೆ ಎಂದು ತಿಳಿದು ಬಂದಿದೆ.

ಈ ನಡುವೆ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ರಾಜ್ಯ



ಕಾಂಗ್ರೆಸ್ ನಾಯಕರ ಜೊತೆ ದೂರವಾಣಿಯಲ್ಲಿ ಚರ್ಚೆ ನಡೆಸಿದ್ದು ಎರಡೂ ಬಣದ ವಾದ–ಪ್ರತಿವಾದಗಳನ್ನು ಕೇಳಿ ತಿಳಿದು ಕೊಂಡಿ–ದ್ದಾರೆ. ಡಿ.ಕೆ.ಶಿವಕುಮಾರ್ ಅವರು ಬಹಿರಂಗವಾಗಿ ತಾವು ಮುಖ್ಯಮಂತ್ರಿ ಹುದ್ದೆ ಕೇಳಿಲ್ಲ ಎಂದು ಹೇಳುತ್ತಲೇ, ಆಂತರಿಕವಾಗಿ ಕಳೆದ 2023ರ ಏಪ್ರಿಲ್ ತಿಂಗಳಿನಲ್ಲಿ ದೆಹಲಿಯಲ್ಲಾದ ಒಪ್ಪಂದದಂತೆ ತಮಗೆ ಅಧಿಕಾರ ಬಿಟ್ಟು ಕೊಡಬೇಕು ಎಂದು ಪಟ್ಟು ಹಿಡಿದಿದ್ದಾರೆ. ಪಕ್ಷ ಸಂಘಟನೆ, ಚುನಾವಣೆ ಸೇರಿದಂತೆ ಹಲವಾರು ಸಂದರ್ಭಗಳಲ್ಲಿ ತಾವು ಹೈಕಮಾಂಡ್‌ನ ಆದೇಶಗಳನ್ನು ಚಾಚೂತಪ್ಪದೆ ಪಾಲನೆ ಮಾಡಿದ್ದು, ಅದಕ್ಕೆ ಪ್ರತಿಫಲ ಬೇಕೆಂದು ಪಟ್ಟು ಹಿಡಿದಿದ್ದಾರೆ. ಇತ್ತ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಬಣ, ಅಧಿಕಾರ ಬಿಟ್ಟುಕೊಡಲು ಸ್ಪಷ್ಟವಾಗಿ ನಿರಾಕರಿಸುತ್ತಿದ್ದು ಯಾವುದೇ ಪರಿಸ್ಥಿತಿ ಆದರೂ, ಎದುರಿಸಲು ಸಿದ್ಧ ಎಂದು ಸಂದೇಶ ರವಾನಿಸಿದೆ.

ಈ ನಡುವೆ ಸಾಮಾಜಿಕ ಜಾಲತಾಣಗಳಲ್ಲಿ ಸಿದ್ದರಾಮಯ್ಯ ಅವರ ವಿರುದ್ಧವಾಗಿ, ಡಿ.ಕೆ.ಶಿವಕುಮಾರ್ ಅವರ ಪರವಾಗಿ ನಾನಾ ರೀತಿಯ ಚರ್ಚೆಗಳು ನಡೆಯುತ್ತಿವೆ. ಕಾಂಗ್ರೆಸ್‌ಗೆ ಬಂದ ಅತ್ಯಂತ ಕಡಿಮೆ ಅವಧಿಯಲ್ಲಿ ಮುಖ್ಯಮಂತ್ರಿ ಹುದ್ದೆಗೇರಿದ ಸಿದ್ದರಾಮಯ್ಯ ಅವರು ಏಳೂವರೆ ವರ್ಷ ಅಧಿಕಾರ ಅನುಭವಿಸಿದ್ದಾರೆ. ಬಾಕಿ ಇರುವ ಎರಡೂವರೆ ವರ್ಷಗಳನ್ನು ಡಿ.ಕೆ.ಶಿವಕುಮಾರ್ ಅವರಿಗೆ ಬಿಟ್ಟುಕೊಡಬೇಕು ಎಂಬ ಆಗ್ರಹಗಳು ಕೇಳಿ ಬರುತ್ತಿವೆ.

ಡಿ.ಕೆ.ಶಿವಕುಮಾರ್ ಅವರ ಬಣದ ಕೆಲವು ಶಾಸಕರು ಸಿದ್ದರಾಮಯ್ಯ ಅವರು ಅಧಿಕಾರ ಬಿಟ್ಟು ಕೊಡದೆ ಇದ್ದರೆ, ಬಹಿರಂಗವಾಗಿಯೇ ಬಂಡಾಯ ಚಟುವಟಿಕೆಗಳನ್ನು ಆರಂಭಿಸುವುದಾಗಿ ಸಂದೇಶ ರವಾನಿಸಿದ್ದಾರೆ. ಹೀಗಾಗಿ ಹೈಕಮಾಂಡ್ ನಾಯಕರು ಈ ವಾರ ಅಂತ್ಯದೊಳಗೆ ಸೂಕ್ತ ನಿರ್ಧಾರ ತೆಗೆದುಕೊಂಡು ಇಬ್ಬರೂ ನಾಯಕರನ್ನು ಮುಖಾಮುಖಿ ಕೂರಿಸಿ ಸಂದೇಶ ರವಾನಿಸುವ ಸಾಧ್ಯತೆ ಇದೆ ಎನ್ನಲಾಗಿದೆ.


ಈ ನಡುವೆ ಬೆಂಗಳೂರಿನಲ್ಲಿ ಡಿ.ಕೆ.ಶಿವಕುಮಾರ್ ಅವರು ಲೋಕೋಪಯೋಗಿ ಸಚಿವ ಸತೀಶ್ ಜಾರಕಿ ಹೊಳಿಯವರನ್ನು ಭೇಟಿ ಮಾಡಿ ತಮ ದಾಳ ಉರುಳಿಸಿದ್ದಾರೆ. ಈ ಮೊದಲು ಸಚಿವ ಕೆ.ಜೆ.ಜಾರ್ಜ್ ಅವರನ್ನು ಡಿ.ಕೆ.ಶಿವಕುಮಾರ್ ಭೇಟಿ ಮಾಡಿದ್ದರು. ಕೆ.ಜೆ.ಜಾರ್ಜ್ ಮತ್ತು ಸತೀಶ್ ಜಾರಕಿಹೊಳಿ ಅವರು ಸಿದ್ದರಾಮಯ್ಯ ಅವರ ಕಟ್ಟಾ ಬೆಂಬಲಿಗರಾಗಿದ್ದ ಈ ಇಬ್ಬರೂ ನಾಯಕರನ್ನು ಡಿ.ಕೆ. ಶಿವಕುಮಾರ್ ಭೇಟಿ ಮಾಡಿರುವುದು ನಾನಾ ರೀತಿಯ ವದಂತಿಗಳಿಗೆ ಕಾರಣವಾಗಿದೆ.

# ದಾವಣಗೆರೆ ಜಿಲ್ಲಾ ಮಾದಿಗ ಮಹಾಸಭಾಕ್ಕೆ ನೂತನ ಪದಾಧಿಕಾರಿಗಳ ಆಯ್ಕೆ

**ದಾವಣಗೆರೆ.ನ.26:** ದಾವಣಗೆರೆ ಜಿಲ್ಲಾ ಮಾದಿಗ ಮಹಾಸಭಾವನ್ನು ಜಿಲ್ಲಾ ಸಂಘ ಸಂಸ್ಥೆಗಳ ನೋಂದಣಾಧಿಕಾರಿಗಳ ಕಚೇರಿಯಲ್ಲಿ ನೋಂದಾಯಿಸಲು ನಿರ್ಧರಿಸಿ 69 ಜನರ ಕಾರ್ಯಕಾರಿ ಸಮಿತಿಯನ್ನು ನೋಂದಣಿ ಮಾಡಿಸಿದ್ದು, ನೂತನ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಗಿದೆ ಎಂದು ದಾವಣಗೆರೆ ಜಿಲ್ಲಾ ಮಾದಿಗ ಮಹಾಸಭಾದ ಅಧ್ಯಕ್ಷ ಬಿ. ಹೆಚ್.ವೀರಭದ್ರಪ್ಪ ತಿಳಿಸಿದರು.

ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನೋಂದಣಿಗೊಂಡ ನೂತನ ಸಮಿತಿಗೆ ನಿವೃತ್ತ ಎಸ್ಪಿ ರವಿನಾರಾಯಣ್ ಗೌರವಾಧ್ಯಕ್ಷರಾಗಿ, ಬಿ.ಹೆಚ್. ವೀರಭದ್ರಪ್ಪ ಅಧ್ಯಕ್ಷರಾಗಿ, ಉಪಾಧ್ಯಕ್ಷರುಗಳಾಗಿ ಎಲ್.ಎಂ. ಹನುಮಂತಪ್ಪ, ಪೇಪರ್ ಚಂದ್ರಪ್ಪ, ನಲ್ಲೂರು ರೇಖರಪ್ಪ, ಹೆಚ್. ಮಲ್ಲೇಶ್ ಹರಿಹರ, ಕುಣೆಬೆಳಕೆರೆ ಸುರೇಶ್, ಪ್ರಧಾನ ಕಾರ್ಯದರ್ಶಿಯಾಗಿ ಹೆಗ್ಗೆರೆ ರಂಗಪ್ಪ, ಸಹ ಕಾರ್ಯದರ್ಶಿಗಳಾಗಿ ಸಿ. ಬಸವರಾಜ, ಕಡತಿ ಅಂಜಿನಪ್ಪ, ಕಣ್ಣಾಳ್ ಆಂಜಿನಪ್ಪ, ಜಿ. ರಾಕೇಶ್, ಆಯ್ಕೆ ಆಗಿದ್ದಾರೆ.

ಸಂಘಟನಾ ಕಾರ್ಯದರ್ಶಿಗಳಾಗಿ ದಿಡಗೂರು ತಮ್ಮಣ್ಣ, ಜಿ.ವಿ.ವೀರೇಶ್, ಆಲೂರು ಶಿವಕುಮಾರ್, ಎಲ್.ಹೆಚ್ ಸಾಗರ್, ಗುತ್ತಿದುರ್ಗ ರುದ್ರೇಶ್, ಖಜಾಂಚಿಯಾಗಿ ಎಸ್. ಮಲ್ಲಿಕಾರ್ಜುನ್ ಆಯ್ಕೆಯಾಗಿರುತ್ತಾರೆ. ಉಳಿದಂತೆ ಜಿಲ್ಲೆಯ ಎಲ್ಲಾ ತಾಲೂಕುಗಳ 51 ಜನ ಮಾದಿಗ ಸಮುದಾಯದ ಮುಖಂಡರು ನಿರ್ದೇಶಕರಾಗಿ ಆಯ್ಕೆಯಾಗಿರುತ್ತಾ–ರೆ ಎಂದು ಮಾಹಿತಿ ನೀಡಿದರು.



# ರಾಜ್ಯ ಜಲಾನಯನ ಅಭಿವೃದ್ಧಿ ಇಲಾಖೆ ಇತರೆ ರಾಜ್ಯಗಳಿಗೆ ಮಾದರಿ: ಎನ್. ಚಲುವರಾಯಸ್ವಾಮಿ

**ಬೆಂಗಳೂರು :** ಹವಾಮಾನ ಬದಲಾವಣೆ, ಭೂಕ್ಷಯ ಮತ್ತು ಶಾಶ್ವತ ಜಲಾನಯನ ನಿರ್ವಹಣೆಗೆ ಸಂಬಂಧಿಸಿದ ಜ್ಞಾನ ಮತ್ತು ಅನುಭವ ವಿನಿಮಯಕ್ಕೆ ಜಾಗತಿಕ ತಜ್ಞರು, ಸಂಶೋಧಕರು ಮತ್ತು ವಿಜ್ಞಾನಿಗಳನ್ನು ಒಂದೇ ವೇದಿಕೆಯಲ್ಲಿ ತರುವ ಮೂಲಕ ರೈತರ ಹಾಗೂ ಕೃಷಿ ಅಭಿವೃದ್ಧಿಗೆ ಪೂರಕವಾದ ನಿರ್ಣಯಗಳನ್ನು ಕೈಗೊಳ್ಳುವಂತೆ ಕೃಷಿ ಸಚಿವ ಎನ್.ಚಲುವರಾಯಸ್ವಾಮಿಯವರು ಕರೆ ನೀಡಿದರು..

ಜಲಾನಯನ ಅಭಿವೃದ್ಧಿ ಇಲಾಖೆ, ಕೇಂದ್ರದ ಭೂ ಸಂಪನ್ಮೂಲ ಇಲಾಖೆ, ವಿಶ್ವಬ್ಯಾಂಕ್ ಹಾಗೂ ಬೆಂಗಳೂರಿನ ಕೃಷಿ ವಿಶ್ವವಿದ್ಯಾನಿಲಯದ ಸಹಯೋಗದೊಂದಿಗೆ, ಮೂರು ದಿನಗಳ ಜಲಾನಯನ ಸ್ಥಿತಿಸ್ಥಾಪಕತ್ವ, ವಿಜ್ಞಾನ ಸುಸ್ಥಿರತೆ ಮತ್ತುಸಮಾಜವನ್ನು ಸಂಯೋಜಿಸುವ ಕುರಿತು ಅಂತರಾಷ್ಟ್ರೀಯ ಸಮ್ಮೇಳನವನ್ನು ಉದ್ಘಾಟಿಸಿ ಮಾತನಾಡಿದ ಕೃಷಿಸಚಿವ ಚಲುವರಾಯಸ್ವಾಮಿಯವರು, ಕಳೆದ ನಾಲ್ಕು ದಶಕಗಳಿಂದ ಜಲಾನಯನ ಅಭಿವೃದ್ಧಿಯಲ್ಲಿ ಕರ್ನಾಟಕ ರಾಜ್ಯ ಮುಂಚೂಣಿಯಲ್ಲಿದೆ ಎಂದು ಹೇಳಿದರು. ವಿಶ್ವಬ್ಯಾಂಕ್ REWARD ಕಾರ್ಯಕ್ರಮದಡಿ ನಡೆಯುತ್ತಿರುವ ಐಖಿಖ ಆಧಾರಿತ ಜಲಾನಯನ ಅಭಿವೃದ್ಧಿಯಿಂದ ರಾಜ್ಯದ



ಸ್ಥೈರ್ಯವನ್ನು ಹೆಚ್ಚಿಸಿದೆ ಎಂದು ಅವರು ಮೆಚ್ಚುಗೆ ವ್ಯಕ್ತಪಡಿಸಿದರು.ಭೂಸಂಪನ್ಮೂಲ ಇಲಾಖೆ, ಭಾರತ ಸರ್ಕಾರದ ಜಂಟಿ ಕಾರ್ಯದರ್ಶಿ ನಿತಿನ್ ಕಾಡೆ ಮಾತನಾಡಿ, ಯಶಸ್ವಿ ಜಲಾನಯನ ಅಭಿವೃದ್ಧಿಯ ಎರಡುಸ್ತಂಭಗಳು ತಾಂತ್ರಿಕ ಸಾಮರ್ಥ್ಯ ಮತ್ತು ಬಲವಾದ ಆಡಳಿತ ಎಂದು ಹೇಳಿದರು.

REWARD ಕಾರ್ಯಕ್ರಮವು ದೇಶವ್ಯಾಪಿ ಕಒಐಖಜ ಕಾರ್ಯಕ್ರಮದಲ್ಲಿ ವಿಸ್ತರಿಸಲು ಅಗತ್ಯವಾದ ತಾಂತ್ರಿಕ ಬಲವನ್ನು ಒದಗಿಸುತ್ತದೆ ಎಂದು ಅವರು ತಿಳಿಸಿದರು. ಸ್ಥಳೀಯ ಸಮುದಾಯಗಳು ಮತ್ತು ಸಂಸ್ಥೆಗಳನ್ನು ಬಲಪಡಿಸು ಮೂಲಕ ಅಭಿವೃದ್ಧಿಗೆ ಒತ್ತು ನೀಡುವ ಅಗತ್ಯವಿದೆ ಎಂದು ಅವರು ಹೇಳಿದರು. ವಿಶ್ವ ಬ್ಯಾಂಕಿನ ಮುಖ್ಯ ಕೃಷಿ ತಜ್ಞ ಆಂಡ್ರೂವುಡ್ ಲ್ಯಾಂಡ್ ಮಾತನಾಡಿ, ಕರ್ನಾಟಕದಲ್ಲಿ ಖಇಘಂಖಆ ಕಾರ್ಯಕ್ರಮವು ಪರಿಣಾಮಕಾರಿಯಾಗಿ ಅನುಷ್ಠಾನಗೊಂಡಿರುವುದಕ್ಕೆ ಮೆಚ್ಚಿ, ಇತರ ರಾಜ್ಯಗಳಿಗೆ ಕರ್ನಾಟಕ ಮಾದರಿಯಾಗಿದೆ ಎಂದು ಹೇಳಿದರು.

# ಬಡತನದಲ್ಲಿ ಅರಳಿದ್ದ ಧೀಮಂತ ಪ್ರತಿಭೆ ಮಹಾಂತೇಶ್ ಬೀಳಗಿ

ರಾಜ್ಯದ ಹಿರಿಯ ಐಎಎಸ್ ಅಧಿಕಾರಿ ಮಹಾಂತೇಶ್ ಬೀಳಗಿ ನಿನ್ನೆ ಕುಟುಂಬಸ್ಥರ ಮದುವೆ ಕಾರ್ಯಕ್ರಮಕ್ಕೆ ತೆರಳುತ್ತಿದ್ದ ವೇಳೆ ಕಲಬುರಗಿಯ ಜೇವರ್ಗಿ ಬಳಿ ಸಂಭವಿಸಿದ ಕಾರು ಅಪಘಾತದಲ್ಲಿ ಮೃತಪಟ್ಟಿದ್ದಾರೆ.

ಕುಟುಂಬಸ್ಥರು ಮತ್ತು ಸಂಬಂಧಿಕರ ಆಕ್ರಂದನ ಮುಗಿಲು ಮುಟ್ಟಿದೆ.

ರಾಜ್ಯ ಕಂಡ ಜನಸ್ನೇಹಿ ಹಾಗೂ ದಕ್ಷ ಅಧಿಕಾರಿ ಐಎಎಸ್ ಮಹಾಂತೇಶ್ ಬೀಳಗಿ ವಿಜಯಪುರ ಮಾರ್ಗವಾಗಿ ಬರುತ್ತಿದ್ದ ಅವರ ಇನ್ನೋವಾ ಕಾರು, ರಸ್ತೆಯಲ್ಲಿ ಅಡ್ಡ ಬಂದ ಬೀದಿ ನಾಯಿಗೆ ಡಿಕ್ಕಿ ಹೊಡೆಯುವುದನ್ನು ತಪ್ಪಿಸಲು ಹೋಗಿ ನಿಯಂತ್ರಣ ಕಳೆದುಕೊಂಡಿದೆ. ನಂತರ ರಸ್ತೆ ಬದಿಯ ತಡೆಗೋಡೆಗೆ ಡಿಕ್ಕಿ ಹೊಡೆದು ಸುಮಾರು ನೂರು ಮೀಟರ್‌ಗಳಷ್ಟು ದೂರ ಎಳೆದುಕೊಂಡು ಹೋಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಅಪಘಾತದ ತೀವ್ರತೆಗೆ ಕಾರು ಸಂಪೂರ್ಣವಾಗಿ ನುಜ್ಜುಗುಜ್ಜಾಗಿದ್ದು, ಏರ್‌ಬ್ಯಾಗ್‌ಗಳು ತೆರೆದು–ಕೊಂಡಿದ್ದರೂ ಕಾರಿನಲ್ಲಿದ್ದವರು ಸಾವನ್ನಪ್ಪಿದ್ದಾರೆ. ಕಾರಿನಲ್ಲಿ ಐದು ಜನ ಪ್ರಯಾಣಿಸುತ್ತಿದ್ದು, ಐವರಲ್ಲಿ ನಾಲ್ವರು ದುರ್ಮರಣಕ್ಕೀಡಾಗಿದ್ದಾರೆ. ಮಹಾಂತೇಶ್ ಬೀಳಗಿ ಅವರ ಸ್ನೇಹಿತ ಇರಣ್ಣ ಸಿರಸಂಗಿ ಅವರೂ ಸಹ ಸಾವನ್ನಪ್ಪಿರುವುದು ದೃಢಪಟ್ಟಿದೆ. ಅಪಘಾತದ



ಸ್ಥಳದಲ್ಲಿ ಮರ ಕಿತ್ತು ಬಂದಿರುವುದು ಕಾರಿನ ವೇಗ ಮತ್ತು ಡಿಕ್ಕಿಯ ಭೀಕರತೆಗೆ ಸಾಕ್ಷಿಯಾಗಿದೆ.

1974 ರಲ್ಲಿ ರಾಮದುರ್ಗದಲ್ಲಿ ಜನಿಸಿದ ಮಹಾಂತೇಶ್, ಎರಡು ಹೊತ್ತು ಊಟ ಮಾಡದಷ್ಟು ಕಡು ಬಡತನದಲ್ಲಿ ಬೆಳೆದಿದ್ದರು. ಅವರು ಕರ್ನಾಟಕ ವಿಶ್ವವಿದ್ಯಾಲಯದಲ್ಲಿ ಪದವಿ ಪಡೆದಿದ್ದರು. ಕೆಎಎಸ್ ಪಾಸ್ ಮಾಡಿ ನೇರವಾಗಿ ಎಸಿಯಾಗಿ ಆಯ್ಕೆ ಆಗಿದ್ದರು. ಆನಂತರ ಐಎಎಸ್ ಹುದ್ದೆಗೆ ಬಡ್ತಿ ಪಡೆದು ಉನ್ನತಸ್ಥಾನಕ್ಕೇರಿದ್ದರು. ಸರ್ಕಾರಿ ಸೇವೆ ನಿರ್ವಹಿಸುತ್ತಿದ್ದರು, ಸ್ಪರ್ಧಾ ವಿದ್ಯಾರ್ಥಿಗಳಿಗೆ ಕೋಚಿಂಗ್ ನೀಡಿತ್ತಿದ್ದರು. ಅವರ ಈ ಸಾಧನೆ ಯುವಕರಿಗೆ ಪ್ರೇರಣೆಯಾಗಿತ್ತು.

ಧಾರವಾಡದಲ್ಲಿ ಸಹಾಯಕ ಆಯುಕ್ತರಾಗಿ ಕೆಲಸ ಮಾಡಿದರು. ಅವರು ದಾವಣಗೆರೆ ಜಿಲ್ಲೆಯ ಉಪ ಆಯುಕ್ತರಾಗಿಯೂ ಸೇರಿದಂತೆ ಹಲವಾರು ಪ್ರಮುಖ ಆಡಳಿತಾತ್ಮಕ ಹುದ್ದೆಗಳಲ್ಲಿ ಕೆಲಸ ಮಾಡಿದರು.

ನಂತರ ಅವರು ಈ ವರ್ಷದ ಜನವರಿಯಲ್ಲಿ ಕರ್ನಾಟಕ ರಾಜ್ಯ ಖನಿಜ ನಿಗಮದ ವ್ಯವಸ್ಥಾಪಕ ನಿರ್ದೇಶಕರಾಗಿ ಅಧಿಕಾರ ವಹಿಸಿಕೊಳ್ಳುವ ಮೊದಲು ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ (ಬೆಸ್ಕಾಮ್) ನೇತೃತ್ವ ವಹಿಸಿದ್ದರು.

ಬಾಲ್ಯದಿಂದಲೂ ಕಷ್ಟಕರ ಜೀವನ ನಡೆಸಿದ ಅವರು ಬೆಳೆದು ಬಂದ ರೀತಿಯೇ ವಿಶೇಷವಾಗಿತ್ತು. ಅವರ ತಾಯಿ ಮನೆಗೆಲಸ ಮಾಡಿ ಮಹಾಂತೇಶ್ ಶಿಕ್ಷಣವನ್ನು ಮುಂದುವರಿಸಿದರು. ಕೆಎಎಸ್ ಪರೀಕ್ಷೆ ಮತ್ತು ನಂತರ ಐಎಎಸ್ ಪರೀಕ್ಷೆ ಪಾಸ್ ಮಾಡಿ ಉತ್ತಮ ಜೀವನ ಕಟ್ಟುಕೊಂಡಿದ್ದರು. ತಮ್ಮ ಬಾಲ್ಯದಲ್ಲಿ ತಾನು ಮತ್ತು ತಮ್ಮ ಸಹೋದರರು 5ನೇ ವಯಸ್ಸಿನಿಂದ ಹೇಗೆ ಕಷ್ಟಪಟ್ಟರು ಎಂಬುದನ್ನು ಬೀಳಗಿ ಅವರು ಹಲವಯ ಸಂದರ್ಶನಗಳಲ್ಲಿ ನೆನಪಿಕೊಂಡಿದ್ದರು. ಮೃತರಿಗೆ ಪತ್ನಿ ಮತ್ತು ಮಕ್ಕಳಿದ್ದು, ಬೆಂಗಳೂರಿನಲ್ಲಿ ನೆಲೆಸಿದ್ದಾರೆ.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**